ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 77 ಸಂಚಿಕೆ- 77 | PAGE- 8 ಪುಟ-8 | ಬುಧುವಾರ 30.04.2025 | RS.2/- ಬೆಲೆ 2/-

## ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ ಇಂದು ಕೇಂದ್ರ ಸಚಿವ ಸಂಪುಟ ಸಭೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.29" ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿನಡೆದಭಯೋತ್ಪಾದಕ ದಾಳಿಯ ನಂತರ ಮೊದಲ ಬಾರಿಗೆ ಬುಧವಾರ ಕೇಂದ್ರ ಸಚಿವ ಸಂಪುಟ ಸಭೆ ಸೇರಲಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಬುಧವಾರ ಬೆಳಗ್ಗೆ 11 ಗಂಟೆಗೆ ಸಭೆ ಕರೆಯಲಾಗಿದೆ.ಸಂಪುಟ ಸಭೆಯಲ್ಲಿ ಪಾಕಿಸ್ಥಾನದ ವಿರುದ್ಧ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚೆ ನಡೆದು ಯಾವುದಾದರು ನಿರ್ಧಾರಹೊರಬೀಳುವಸಾಧ್ಯತೆಯಿದೆ ಎನ್ನಲಾಗುತ್ತಿದೆ.ಕಳೆದ ವಾರ ಕೇಂದ್ರ ಸಚಿವ ಸಂಪುಟದ ಯಾವುದೇ ಸಭೆ ನಡೆದಿರಲಿಲ್ಲ. ಏಪ್ರಿಲ್ 23 ರಂದು ಭದ್ರತೆ ಕುರಿತ ಸಂಪುಟ ಸಮಿತಿ ಸಭೆ ನಡೆದಿತ್ತು. ಭಯೋತ್ಪಾದಕ ದಾಳಿಯನ್ನು ಖಂಡಿಸಲಾಗಿತ್ತು.ಭದ್ರತಾ ಕುರಿತ ಸಂಪುಟ ಸಮಿತಿ ಸಭೆ ನಂತರ ಭಾರತ ಪಾಕಿಸ್ತಾನದೊಂದಿಗಿನ ರಾಜ-ತಾಂತ್ರಿಕ ಸಂಬಂಧಗಳನ್ನು ಕಡಿಮೆ ಮಾಡುವುದು ಸೇರಿದಂತೆ ಇನ್ನಿತರ ಹಲವು ಕ್ರಮಗಳನ್ನು ಘೋಷಿಸಿತ್ತು. ಆರು ದಶಕಗಳ ಹಳೆಯದಾದ ಸಿಂಧೂ ನದಿ ನೀರು ಒಪ್ಪಂದ ರದ್ದು, ಕೂಡಲೇ ಅಟ್ಟಾರಿ ಗಡಿ ಬಂದ್ ಕ್ರಮ ಕೈಗೊಳ್ಳಲಾಗಿತ್ತು.

ಏಪ್ರಿಲ್ 22 ರಂದು ಕಾಶ್ಮೀರದ ಪಹಲ್ಗಾಮ್ ಬಳಿಯ ಜನಪ್ರಿಯ ಬೈಸರನ್ ಕಣಿವೆಯಲ್ಲಿ ಭಯೋತ್ಪಾದಕರು ನಡೆಸಿದ ಗುಂಡಿನ ದಾಳಿಯಲ್ಲಿ ಕನಿಷ್ಠ 6 ಜನರು, ಹೆಚ್ಚಾಗಿ ಪ್ರವಾಸಿಗರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ. ಈ ಭಯೋತ್ಪಾದಕ ದಾಳಿಯು 2019 ರ ಪುಲ್ವಾಮಾ ದಾಳಿಯ ನಂತರ ಈ ಪ್ರದೇಶದಲ್ಲಿ ನಡೆದ ಅತ್ಯಂತ ಭೀಕರ ಘಟನೆಯಾಗಿದೆ.

## ಸೇನೆಗೆ ಪೂರ್ಣ ಅಧಿಕಾರ ಕೊಟ್ಟ ಮೋದಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.29: ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತದ ಮಿಲಿಟರಿ ಪ್ರತಿಕ್ರಿಯೆಯ ವಿಧಾನ, ಗುರಿ ಮತ್ತು ಸಮಯವನ್ನು ನಿರ್ಧರಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದಾರೆ.

ಇಂದು ಮೋದಿ ಅವರು ರಕ್ಷಣಾ ಸಚಿವ ರಾಜನಾಥ್ ಸಿಂಗ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಸಿಡಿಎಸ್ ಜನರಲ್ ಅನಿಲ್ ಚೌಹಾಣ್, ಭೂಸೇನೆ, ವಾಯುಸೇನೆ, ನೌಕಾಸೇನೆಯ ಮುಖ್ಯಸ್ಥರ ಜೊತೆ ಸಭೆ ನಡೆಸಿದರು.

ಭಯೋತ್ಪಾದನೆಯನ್ನು ಸಂಪೂರ್ಣ ತೊಡೆದು ಹಾಕುವುದು ನಮ್ಮ ರಾಷ್ಟ್ರೀಯ ಸಂಕಲ್ಪ. ಭಾರತೀಯ ಸೇನೆಯ ವೃತ್ತಿಪರ ಸಾಮರ್ಥ್ಯದ ಬಗ್ಗೆ ನನಗೆ ಸಂಪೂರ್ಣ ನಂಬಿಕೆ ಮತ್ತು ವಿಶ್ವಾಸವಿದೆ ಎಂದು ಹೇಳಿದರು.

ತಿಂಗಳ ರೇಡಿಯೋ ಕಾರ್ಯಕ್ರಮ 'ಮನ್ ಕಿ ಬಾತ್' ನ 121 ನೇ ಸಂಚಿಕೆಯಲ್ಲಿ ಮಾತನಾಡಿದ ಮೋದಿ, ಪಹಲ್ಗಾಮ್ ದಾಳಿಯ ಸಂತ್ರಸ್ತರು ದುಃಖಿಸುತ್ತಿರುವ ದೃಶ್ಯಗಳನ್ನು ನೋಡಿದರೆ ಪ್ರತಿಯೊಬ್ಬ ಭಾರತೀಯನ ರಕ್ತ ಕುದಿಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದರು.

ಪಹಲ್ಗಾಮ್ ದಾಳಿಯಿಂದ ನನಗೆ ತುಂಬಾ ನೋವಾಗಿದೆ. ಇದು ಭಯೋತ್ಪಾದನೆಯ ಬೆಂಬಲಿಗರ ಹತಾಶೆ ಅವರ ಹೇಡಿತನವನ್ನು ತೋರಿಸುತ್ತದೆ. ಸಂತ್ರಸ್ತರ ಕುಟುಂಬಕ್ಕೆ ನ್ಯಾಯ ಸಿಗಲಿದೆ. ಅಪರಾಧ ಎಸಗಿದವರಿಗೆ, ಬೆಂಬಲಿಗರಿಗೆ, ಸೂತ್ರಧಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗುಡುಗಿದ್ದರು.

## ಸಿಎಂ ಪಾಕ್ ಜೊತೆ ಯುದ್ಧ ಬೇಡ ಅಂದಿಲ್ಲ: ಹೆಚ್.ಎಂ.ರೇವಣ್ಣ

ಮಲ್ಲಮ್ಮನುಡಿವಾರ್ತೆ ಕಲಬುರಗಿ:ಏ.29: ಪೆಹಲ್ಗಾಮ್ ಘಟನೆಯ ಬಳಿಕ ಸಿಎಂ ಸಿದ್ದರಾಮಯ್ಯ ಅವರು ಪಾಕಿಸ್ತಾನದ ಜೊತೆ ಯುದ್ಧ ಬೇಡ ಎಂದು ಹೇಳಿಯೇ ಇಲ್ಲ. ಏನಿದ್ದರೂ ಮೊದಲು ಭದ್ರತೆ ಖಚಿತಪಡಿಸಿಕೊಂಡು ನಂತರ ಯುದ್ಧ ಮಾಡಿ ಎಂದು ಸಲಹೆ ನೀಡಿದ್ದಾರೆ ಎಂದು ಮಾಜಿ ಸಚಿವ ಹೆಚ್.ಎಂ.ರೇವಣ್ಣ ಹೇಳಿದರು. ಕಲಬುರಗಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಯುದ್ಧ ಬೇಡ ಎಂದಿಲ್ಲ. ದೇಶದ ಅಖಂಡತೆ ಮತ್ತು ಸಾರ್ವಭೌಮತ್ವಕ್ಕೆ ಧಕ್ಕೆ ಬಂದಲ್ಲಿ ಹಾಗೂ ಅನಿವಾರ್ಯತೆ ಎನಿಸಿದರೆ ಯುದ್ಧ ಮಾಡಿ ಎಂದಿದ್ದಾರೆ. ಮೇಲಾಗಿ ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷ ಕೇಂದ್ರ ಸರ್ಕಾರದೊಂದಿಗೆ ನಿಲ್ಲುತ್ತದೆ ಎಂದು ಸ್ವತಃ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಸ್ಪಷ್ಟಪಡಿಸಿದ್ದಾರೆ ಎಂದರು. ಕೇಂದ್ರ ಸರ್ಕಾರ ಯಾವುದೇ ರೀತಿಯ ನಿರ್ಧಾರ ತೆಗೆದುಕೊಂಡರೂ ತಮ್ಮ ಪಕ್ಷದ ಬೆಂಬಲ ಇರುತ್ತದೆ ಎಂದು ಹೇಳಿದ ಮೇಲೆ ಇನ್ನೇನಿದೆ. ಇಷ್ಟು ದಿನ ತೂಕಡಿಸುತ್ತಾ, ಈಗ ಅಲ್ಲಿ ಯುದ್ಧ ಇಲ್ಲಿ ಯುದ್ಧ ಅಂತಿದ್ದೀರಿ. ಹಿಂದೆ ಇಂದಿರಾಗಾಂಧಿ ಪಾಕಿಸ್ತಾನದ

(2ನೇ ಪುಟ ನೋಡಿ)

## ಸಿಎಂಗೆ ರಾಜ್ಯಪಾಲರ ಪತ್ರ: 18 ಬಿಜೆಪಿ ಶಾಸಕರ ಅಮಾನತು ರದ್ದುಗೊಳಿಸುವಂತೆ ಸಲಹೆ

ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಏ.29: ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸ್ಪೀಕರ್ ಯು ಟಿ ಖಾದರ್ ಅವರಿಗೆ ಪತ್ರ ಬರೆದಿದ್ದು, ವಿಧಾನಸಭೆಯ 18 ಬಿಜೆಪಿ ಸದಸ್ಯರ (ಶಾಸಕರು) ಅಮಾನತು ರದ್ದುಗೊಳಿಸುವ ಮನವಿಯನ್ನು ಸಕಾರಾತ್ಮಕವಾಗಿ ಪರಿಗಣಿಸುವಂತೆ ಮತ್ತು ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ.

ಮುಖ್ಯಮಂತ್ರಿ ಮತ್ತು ಸ್ಪೀಕರ್‌ಗೆ ಬರೆದ ಪ್ರತ್ಯೇಕ ಪತ್ರಗಳಲ್ಲಿ, ರಾಜ್ಯದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳ ಮೂಲ ತತ್ವಗಳನ್ನು ಎತ್ತಿಹಿಡಿಯಲು ಮತ್ತು ಅಮಾನತುಗೊಂಡ ಶಾಸಕರು ಮತ್ತೆ ಜನ ಪ್ರತಿನಿಧಿಗಳಾಗಿ ತಮ್ಮ ಜವಾಬ್ದಾರಿಗಳನ್ನು ವಹಿಸಿಕೊಳ್ಳಲು ಅನುವು ಮಾಡಿಕೊಡುವಂತಹ ನಿರ್ಧಾರ ತೆಗೆದುಕೊಳ್ಳಬೇಕೆಂಬ "ಆಶೆ"ಯನ್ನು ರಾಜ್ಯಪಾಲರು ವ್ಯಕ್ತಪಡಿಸಿದ್ದಾರೆ.

ರಾಜ್ಯ ಪಕ್ಷದ ಅಧ್ಯಕ್ಷ ಬಿ ವೈ ವಿಜಯೇಂದ್ರ ಮತ್ತು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್ ಅಶೋಕ ನೇತೃತ್ವದ ಬಿಜೆಪಿ ನಿಯೋಗ ಸೋಮವಾರ ರಾಜಭವನದಲ್ಲಿ ರಾಜ್ಯಪಾಲರನ್ನು ಭೇಟಿ ಮಾಡಿ ಅಮಾನತು ರದ್ದುಗೊಳಿಸುವಂತೆ ಕೋರಿ ಜ್ಞಾಪಕ ಪತ್ರವನ್ನು ಸಲ್ಲಿಸಿತ್ತು.

ಸರ್ಕಾರದ ಕ್ರಮವನ್ನು ವಿಪಕ್ಷಗಳ ನಾಯಕರು "ಪ್ರಜಾಪ್ರಭುತ್ವ ವಿರೋಧಿ ಮತ್ತು ಸಂವಿಧಾನಬಾಹಿರ" ಎಂದು ಕರೆದಿದ್ದಾರೆ. ಚುನಾಯಿತ

(2ನೇ ಪುಟ ನೋಡಿ)


## ಪ್ರಾಮಾಣಿಕವಾಗಿ ರೈತರ ಕೆಲಸಗಳನ್ನು ನಿರ್ವಹಿಸಿ : ಪಿಡಿಓ ಗಳಿಗೆ ಸಿಎಂ ಸಿದ್ದರಾಮಯ್ಯ ಆದೇಶ



ಮಲ್ಲಮ್ಮನುಡಿವಾರ್ತೆ ಬೆಂಗಳೂರು: ಏ.29:ಕೃಷಿಯೇ ದೇಶದ ಬೆನ್ನೆಲುಬು. ನಮ್ಮ ದೇಶ ಹಳ್ಳಿಗಳಿಂದ ಕೂಡಿದೆ. ನಾವೆಲ್ಲರೂ ಹಳ್ಳಿಗಳಿಂದ ಬಂದಿದ್ದೇವೆ. ಹಳ್ಳಿಗಳಲ್ಲಿ ಶೇಕಡ 60 ರಷ್ಟು ಜನ ರೈತರಿದ್ದಾರೆ. ಅವರ ಹಿತ ಕಾಯುವುದು ನಮ್ಮ ಕರ್ತವ್ಯ. ಅವರಿಗೆ ತೊಂದರೆ ಆಗದಂತೆ ಕಾರ್ಯ ನಿರ್ವಹಿಸಬೇಕು. ಗ್ರಾಮ ಆಡಳಿತಾಧಿಕಾರಿಗಳ ಪ್ರಮುಖ ಕರ್ತವ್ಯ ರೈತರ ಹಿತ ಕಾಯುವುದು. ಗ್ರಾಮ ಆಡಳಿತಾಧಿಕಾರಿಗಳ ಹುದ್ದೆಯು ಮಹತ್ವದ ಹುದ್ದೆಯಾಗಿದೆ. ಎಲ್ಲಾ ಗ್ರಾಮ ಆಡಳಿತಾಧಿಕಾರಿಗಳು ರೈತರ ಪರವಾಗಿ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ನೂತನವಾಗಿ ನೇಮಕಾತಿ ಹೊಂದಿರುವ

(2ನೇ ಪುಟ ನೋಡಿ)

## ಪಾಕಿಸ್ಥಾನಕ್ಕೆ ಹರಿಯುವ ಸಿಂಧೂ ನದಿ ನೀರು ನಿಲ್ಲಿಸೋದು ಅಸಾಧ್ಯ: ರಹೀಂ ಖಾನ್




ಮಲ್ಲಮ್ಮನುಡಿವಾರ್ತೆ ಬೀದರ. ಏ. 29 : ಸಿಂಧೂ ನದಿಯ ನೀರು ನೈಸರ್ಗಿಕವಾಗಿ ಪಾಕಿಸ್ಥಾನಕ್ಕೆ ಹರಿದು ಹೋಗುತ್ತದೆ. ಹೀಗಾಗಿ, ಪ್ರಧಾನಿ ಮೋದಿಯವರಿಂದ ಸಿಂಧೂ ನದಿ ನೀರು ಪಾಕಿಸ್ಥಾನಕ್ಕೆ ಹರಿದು ಹೋಗುವುದು ನಿಲ್ಲಿಸಲು ಆಗುವುದಿಲ್ಲ ಎಂದು ಪೌರಾಡಳಿತ ಸಚಿವ ರಹೀಂ ಖಾನ್ ಹೇಳಿದ್ದಾರೆ. ನಗರದಲ್ಲಿ ಸೋಮವಾರ ಸುದ್ದಿಗಾರರ ಜತೆ ಮಾತನಾಡಿ, ಸಿಂಧೂ ನದಿಯ ನೀರು ಪಾಕಿಸ್ಥಾನಕ್ಕೆ ಹರಿಯುವುದು ನಿಲ್ಲಿಸಲು ಮೋದಿಗೆ ಬರಲ್ಲ. ಸಿಂಧೂ ನದಿ ನೀರು ಬಂದ್ ಮಾಡಬೇಕೆಂದರೆ 20 ವರ್ಷ ಬೇಕು. ಆದರೆ ಅದಕ್ಕೆ ಬೇಕಾದ ಅಣೆಕಟ್ಟು ಮತ್ತು ನಾಲೆಗಳ ನಿರ್ಮಾಣ ಮಾಡಬೇಕು. ನಾವು ಯಾವುದು ಕೆಲಸ ಮಾಡೋದಕ್ಕೆ ಸಾಧ್ಯವಾಗುತ್ತದೆಯೋ ಅದನ್ನಷ್ಟೇ ಮೋದಿ ಹೇಳಬೇಕು ಎಂದರು.

ಪಹಲ್ಗಾಮ್‌ನಲ್ಲಿ ದಾಳಿ ಮಾಡಿದವರ ಮೇಲೆ ಅತಿ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಜೀವನದಲ್ಲಿ ಮತ್ತೆ ಉಗ್ರರು ಈ ರೀತಿ ದಾಳಿ ಮಾಡಬಾರದು. ಮುಸ್ಲಿಂ ಬಾಂಧವರು ನಿಮ್ಮ ಜೊತೆ ಇದ್ದೇವೆ. ಪ್ರವಾಸಕ್ಕೆ ಹೋದವರ ಮೇಲೆ ದಾಳಿ ಮಾಡಿದ್ದಾರೆ. ಪಾಪ ಅವರಿಗೆ ಏನು ಗೊತ್ತಿರಲಿಲ್ಲ. ಜೊತೆಗೆ ಕಾಶ್ಮೀರ ಜನರಿಗೆ ಉಗ್ರರು ತೊಂದರೆ ಮಾಡಿದ್ದಾರೆ. ಟೆರೆರಿಸ್ಟ್ ಎಂದರೆ ಅವರು ಟೆರೆರಿಸ್ಟ್ ಅಷ್ಟೇ.

(2ನೇ ಪುಟ ನೋಡಿ)

## ಬಸವಣ್ಣನವರ ತತ್ವ ಪಾಲಿಸೋಣ:ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ:ಏ.29:ಇಂದು ವಿಶ್ವದಲ್ಲಿ ಬಸವಣ್ಣನವರ ತತ್ವ ಅತ್ಯವಶ್ಯಕವಾಗಿದೆ.ನಾವೆಲ್ಲರೂ ವಿಶ್ವಗುರು ಬಸವಣ್ಣನವರ ಕಾಯಕತತ್ವ,ಸಮಾನತೆ,ಸಮಭಾವದಂತಹ ತತ್ವಗಳನ್ನು ಮೈಗೂಡಿಸಿಕೊಳ್ಳಬೇಕಿದೆ,ಆಗ ಮಾತ್ರ ವಿಶ್ವದಲ್ಲಿ ಶಾಂತಿ,ಸಹೋದರತೆ,ಸಮಾನತೆ ಮೂಡಲು ಸಾಧ್ಯ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲರು ತಿಳಿಸಿದ್ದಾರೆ.

ಇಂದು ನಾವು ಬಸವಣ್ಣನವರ 892ನೇ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುತ್ತಿದ್ದೇವೆ. ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಬಸವತತ್ವವನ್ನು ಪಾಲಿಸುತ್ತಾ ಬರುತ್ತಿದೆ. ಬಸವಣ್ಣನರು ತೋರಿಸಿದ ಮಾರ್ಗದಲ್ಲಿ ನಡೆಯುತ್ತಿದ್ದೇವೆ. ಬಸವಣ್ಣನವರು ಓರ್ವ ಯುಗಪುರುಷ ಅವರು ತಮ್ಮ ವಚನಗಳ ಮೂಲಕ ಸಮಾಜದಲ್ಲಿನ ಕೊಳಕನ್ನು ನಿವಾರಿಸಿ ಹೊಸ ಸಮಾಜ ಕಟ್ಟುವ ಕಾರ್ಯದಲ್ಲಿ ತೊಡಗಿದವರು. ಅವರು 12ನೇ ಶತಮಾನದಲ್ಲಿ ಬಸವ ಕಲ್ಯಾಣದಲ್ಲಿ ಅನುಭವ ಮಂಟಪವನ್ನು ಸ್ಥಾಪಿಸುವ ಮೂಲಕ ವಿಶ್ವಕ್ಕೆ ಪ್ರಜಾಪ್ರಭುತ್ವದ ಬುನಾದಿ ಹಾಕಿಕೊಟ್ಟರು. ಇಂದಿನ ಸಂಸತ್ತಿಗೆ ಅವರ ಅನುಭವ ಮಂಟಪವೇ ದಾರಿದೀಪ. ಅದಕ್ಕಾಗಿ ಅನುಭವ ಮಂಟಪವನ್ನು ವಿಶ್ವದ ಪ್ರಥಮ

(2ನೇ ಪುಟ ನೋಡಿ)

## ಜನರ ಅನುಕೂಲಕ್ಕಾಗಿ ಪಂಚ ಗ್ಯಾರಂಟಿ ಜಾರಿ:ರೇವಣ್ಣ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ, ಏ. 29: ಸಮಾಜದಲ್ಲಿ ಪ್ರತಿಯೊಬ್ಬರನ್ನು ಸಾಮಾಜಿಕವಾಗಿ ಆರ್ಥಿಕವಾಗಿ ಸದೃಢರನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಪಂಚ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಪಂಚ ಗ್ಯಾರೆಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಮಿತಿಯ ರಾಜ್ಯ ಅಧ್ಯಕ್ಷರಾದ ಎಚ್.ಎಂ. ರೇವಣ್ಣ ಅವರು ಹೇಳಿದರು.

ಮಂಗಳವಾರದಂದು ಹೊಸ ಜಿಲ್ಲಾಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕಲಬುರ್ಗಿ, ಕರ್ನಾಟಕ ರಾಜ್ಯ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಜಿಲ್ಲಾ ಸಮಿತಿಯೊಡನೆ ಪಂಚ ಗ್ಯಾರೆಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ರಾಜ್ಯದ 5 ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಕುರಿತು ಸಾಧಕ-ಬಾಧಕಗಳ ಪರಿಶೀಲನಾ ಸಭೆಗಳನ್ನು ಪ್ರತಿ ಜಿಲ್ಲಾಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜನರಿಗೆ ಅನುಕೂಲ ಆಗಲಿ ಎಂಬ ಉದ್ದೇಶದಿಂದ ಮಾನ್ಯ ಮುಖ್ಯಮಂತ್ರಿ ಸಿದ್ದಾರಾಮಯ್ಯ ನೇತೃತ್ವದ ಸರ್ಕಾರ ಜಾರಿಗೆ ತಂದಿರುವ ಈ ಯೋಜನೆಗಳು ಬಡವರನ್ನು ಸಮಾಜಿಕವಾಗಿ ಆರ್ಥಿಕವಾಗಿ ಹಿಂದುಳಿದವರಿಗೆ ಆರ್ಥಿಕವಾಗಿ ಸಬಲರನ್ನಾಗಿ ಮಾಡುತ್ತವೆ ಎಂದರು.

ಐದು ಗ್ಯಾರೆಂಟಿ ಯೋಜನೆಗಳ ಕುರಿತು ಅಧಿಕಾರಿಗಳಿಂದ ವಿಸ್ತೃತವಾದ ಮಾಹಿತಿಯನ್ನು ಪಡೆದು ಜನ ಸಮಾನ್ಯರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಕುಮಾರ ರಾಠೋಡ ಮಾತನಾಡಿ, ಗೃಹ ಲಕ್ಷ್ಮಿ ಯೋಜನೆ ಮುಖಾಂತರ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಉದ್ದೇಶದಿಂದ ನೇರವಾಗಿ ಡಿಬಿಟಿ ಮುಖಾಂತರ ಮಹಿಳೆಯರ ಖಾತೆಗೆ 2000 ರೂಪಾಯಿಗಳನ್ನು ಪ್ರತಿ ತಿಂಗಳು ಜಮೆ ಮಾಡತ್ತಿದ್ದು, ಕಲಬುರಗಿ

(2ನೇ ಪುಟ ನೋಡಿ)

## ಬುದ್ದ, ಬಸವ, ಅಂಬೇಡ್ಕರ ಯಾವುದೇ ಜಾತಿಗೆ ಸೀಮಿತರಲ್ಲ




ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಏ.29:ಬುದ್ಧ, ಬಸವ, ಅಂಬೇಡ್ಕರ ಯಾವುದೇ ಜಾತಿಗೆ ಸೀಮಿತರಾಗಿಲ್ಲ. ಅವರು ವಿಶ್ವ ಮಾನವರಾಗಿ ಇಡೀ ಜಗತ್ತಿಗೆ ತಮ್ಮದೆಯಾದ ಕೊಡುಗೆ ನೀಡಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಕೂಡಲಸಂಗಮದ ಬಸವ ಮಂಟಪದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಹಾಗೂ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ಮಂಗಳವಾರ ಜರುಗಿದ ಅನುಭವ ಮಂಟಪ-ಬಸವಾದಿ ಶರಣರ ವೈಭವ ಕಾರ್ಯಕ್ರಮದಲ್ಲಿ ವಚನ ಸಾಹಿತ್ಯ ಸಮಕಾಲಿನ ಸಂವೇದನೆ ಕುರಿತು ಜರುಗಿದ ವಿಚಾರಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಸವಣ್ಣನವರು ತಮ್ಮ ವಚನಗಳ ಮೂಲಕ ಆಡಳಿತ ವ್ಯವಸ್ಥೆ ಕಲ್ಪಿಸಿಕೊಟ್ಟಿದ್ದಾರೆ. ಅವರ ಅನುಭವ ಮಂಟಪದ ಕಲ್ಪನೆ ಇಂದು ಸಂಸತ್ತಾಗಿ ನಡೆಯುತ್ತಿದೆ ಎಂದರು.

ಮಹಾತ್ಮರು, ಮಹಾಪುರುಷರ ಜಯಂತಿಗಳನ್ನು ಆಚರಿಸುವ ಉದ್ದೇಶ ಅವರ ಬದುಕು, ಅರ್ಥಪೂರ್ಣ ಜೀವನ, ತತ್ವ ಸಂದೇಶಗಳನ್ನು ಯುವಕರಿಗೆ ಪರಿಚಯಿಸುವುದಾಗಿದೆ. ಬಸವಣ್ಣನವರ ವಚನಗಳನ್ನು ಇಡೀ ವಿಶ್ವಕ್ಕೆ ಪರಿಚಯಿಸುವ ಕಾರ್ಯವಾಗಬೇಕಿದೆ. ಇವು ಯುವಕರ ಮೇಲೆ ಪರಿಣಾಮ ಬೀರಿ ಪರಿವರ್ತನೆ ತರಬೇಕಾದ ಅಗತ್ಯತೆಯಿದೆ ಎಂದು ಸಚಿವ

(2ನೇ ಪುಟ ನೋಡಿ)



ಒಂದನೇ ಪುಟದಿಂದ

## ಯಾವುದೇ ಜಾತಿಗೆ ಸೀಮಿತರಲ್ಲ

ತಂಗಡಗಿ ಹೇಳಿದರು. ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಮಾತನಾಡಿದ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, 12ನೇ ಶತಮಾನದಲ್ಲಿ ಅಸ್ಪೃಶ್ಯತೆಯನ್ನು ತೊಡೆದು ಹಾಕುವದರ ಜೊತೆಗೆ ಎಲ್ಲರೂ ಒಂದು ಎಂಬ ಭಾವನೆ ಮೂಡಿಸುವ ಕಾರ್ಯ ನಡೆದರೂ ಬಸವಣ್ಣನವರ ಕನಸು ಇಂದಿಗೂ ನನಸಾಗಿಲ್ಲ. ಇಂದು ಮಾನವರನ್ನು ಮಾನವರನ್ನಾಗಿ ಕಾಣುವ ಧರ್ಮದ ಅವಶ್ಯಕತೆಯಿದೆ. ಈ ನಿಟ್ಟಿನಲ್ಲಿ ಬಸವಣ್ಣನವರ ತತ್ವಾದರ್ಶಗಳನ್ನು ಪಾಲಿಸಿ ನಡೆಯಬೇಕಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹುನಗುಂದ ಶಾಸಕ ಹಾಗೂ ರಾಜ್ಯ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ ಮಾತನಾಡಿ, ಇತಿಹಾಸ ಪುಟದಲ್ಲಿರುವ ಐತಿಹಾಸಿಕ ಕೂಡಲಸಂಗಮದಲ್ಲಿ ಬಸವಾದಿ ಶರಣರ ವೈಭವವನ್ನು ಹಮ್ಮಿಕೊಳ್ಳಲಾಗಿದೆ. ಇಂತಹ ಕಾರ್ಯಕ್ರಮ ಮಾಡಲು ಸರಕಾರ ಸರ್ವಧರ್ಮ ಸಂಸತ್ತು ಎಂಬ ಹೆಸರಿನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲು ಬಜೆಟ್‌ನಲ್ಲಿ ಸರಕಾರ ಘೋಷಿಸಿದೆ ಎಂದು ಹೇಳಿದರು.

ಬೈಲೂರ ನಿಷ್ಕಳ ಮಂಟಪದ ನಿಜಗುಣಾನಂದ ಶ್ರೀಗಳು, ಮೈಸೂರು ಉರಿಲಿಂಗಪೆದ್ದಿ ಮಠದ ಜ್ಞಾನಪ್ರಕಾಶ ಶ್ರೀಗಳು, ಸಿದ್ದನಕೊಳ್ಳದ ಧರ್ಮಾಧಿಕಾರಿ ಡಾ.ಶಿವಕುಮಾರ ಶ್ರೀಗಳು, ಇಳಕಲ್ಲಿನ ಗುರುಮಹಾಂತ ಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಸಾಹಿತಿ ರಂಜಾನ ದರ್ಗಾ, ಡಾ.ಮೀನಾಕ್ಷಿ ಬಾಳಿ, ಡಾ.ಪುರುಶೋತ್ತಮ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥರೆಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಕೆ.ಎಂ.ಗಾಯತ್ರಿ, ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಮಹಾದೇವ ಮುರಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಂಚ ಗ್ಯಾರಂಟಿ ಜಾರಿ:ರೇವಣ್ಣ

ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯ ಮಹಿಳೆಯರಲ್ಲಿ 5,89,105 ಅರ್ಜಿದಾರರಿದ್ದು ಅದರಲ್ಲಿ ಈಗಾಗಲೇ 5,78,711 ಮಹಿಳೆಯರಿಗೆ ಎಂದರೆ ಪ್ರತಿ ಶತ 98.24% ಗೃಹಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳನ್ನಾಗಿ ಆಯ್ಕೆ ಮಾಡಲಾಗಿದ್ದು, ಉಳಿದ ಅರ್ಜಿಗಳನ್ನು ಶೀಘ್ರದಲ್ಲಿ ವಿಲೇವಾರಿ ಮಾಡಲಾಗುವುದು ಎಂದು ತಿಳಿಸಿದರು. ಗೃಹಜ್ಯೋತಿ ಯೋಜನೆ ಕುರಿತಂತೆ ಜಿಲ್ಲೆಯ ಕುಸನೂರು ರಾಜಪೂರ, ಅಮಲ್ಲವಾಡಿ, ಸ್ಟೇಶನ್ ಬಜಾರ ವಿದ್ಯುತ್ ಬಿಲ್ಲುಗಳ ಸಮಸ್ಯೆ ಜಾಸ್ತಿಯಾಗುತ್ತಿದ್ದು, ಜೆಸ್ಕಾಂ' ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ ಈವರೆಗೆ ಒಟ್ಟು 6,32,630 ನೋಂದಾಣಿಯಾಗಿದ್ದು, ಒಟ್ಟು ಅರ್ಹ ಗ್ರಾಹಕರು 607253 ಶೇಕಡ 94.35 ಪ್ರತಿಶತದಷ್ಟು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಕೂಸನೂರಿನಲ್ಲಿ ಕೆಲವೊಂದು ವಿದ್ಯುತ್ ಬಿಲ್ಲುಗಳು 200 ಯುನಿಟಕ್ಕಿಂತ ಹೆಚ್ಚು ವಿದ್ಯುತ್ ಬಿಲ್ಲುಗಳು ಮೊತ್ತ ಜಾಸ್ತಿ ಬಂದಿದ್ದು, ಇದನ್ನು ತಡೆಯಲು ಕ್ರಮಕೈಗೊಳ್ಳಬೇಕು ಜೆಸ್ಕಾಂ ಕೆಲವೊಂದು ಮನೆಗಳ ಮೀಟರ್ ಸರಿಯಾಗಿ ಕೂಡಿಸಿರುವುದಿಲ್ಲ ಎಂದು ಸ್ಥಳೀಯ ಸಮಿತಿಗಳಿಂದ ದೂರುಗಳು ಸಹ ಬಂದವು. ಇದಕ್ಕೆ ಉತ್ತರಿಸಿದ ಜಾಸ್ಕಂ ಅಧಿಕಾರಿಗಳು ಯಾವುದೇ ಸಮಸ್ಯೆಗಳು ಇದ್ದರು ಶೀಘ್ರದಲ್ಲಿ ಪರಿಹರಿಸಲಾಗುವುದು ಎಂದು ತಿಳಿಸಿದರು. ಶಕ್ತಿಯೋಜನೆ ಕಲಬುರಗಿ ಜಿಲ್ಲೆಯ ಎಲ್ಲ ತಾಲೂಕು ಒಳಗೊಂಡಂತೆ ಪ್ರತಿದಿನ 1.87 ಲಕ್ಷ ಜನ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿರುತ್ತಾರೆ. ಸದರಿ ಪ್ರಯಾಣಿಕರಿಂದ ಪ್ರತಿದಿನ ಸರಾಸರಿ 61.93 ಲಕ್ಷ ಸಾರಿಗೆ ಇಲಾಖೆಗೆ ಆದಾಯ ಸಂಧಾಯವಾಗುತ್ತಿದೆ ಎಂದು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಸರ್ಕಾರವು ಯುವನಿಧಿ ಯೋಜನೆಯ ಮುಖಾಂತರ ನಿರುದ್ಯೋಗಿ ಯುವಕರನ್ನು ಆರ್ಥಿಕವಾಗಿ ಸದೃಡರನ್ನಾಗಿ ಮಾಡುವ ಉದ್ದೇಶದಿಂದ ಪದವೀಧರ ನಿರುದ್ಯೋಗ ಯುವಕರಿಗೆ ಪ್ರತಿ ತಿಂಗಳು 3000, ಡಿಪ್ಲೋಮೊ ನಿರುದ್ಯೋಗ ಯುವಕರಿಗೆ 1500 ಯುವನಿಧಿಯಲ್ಲಿ ಇಲ್ಲಿಯವರೆಗೆ ಡಿಸೆಂಬರ್ 2023 ರಿಂದ ಪೆಬ್ರುವರಿ 2025 ರವರಿಗೆ 17574 ನೋಂದಣಿಯಾಗಿದ್ದು, ಒಟ್ಟು ಮೊತ್ತ 24,09,81,000 ಆಗಿದೆ ಎಂದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಭೀಮಾರಾಯ ಮಾತನಾಡಿ, ಜಿಲ್ಲೆಯಲ್ಲಿ ಅಂತ್ಯೋದಯ ಅನ್ನ ಯೋಜನೆ ಕಾರ್ಡ 51,8000 ಬಿಪಿಎಲ್ ಕಾರ್ಡ್ 1,16,000 ಎಪಿಎಲ್ ಕಾರ್ಡಗಳು ಇದ್ದು, ಪೆಬ್ರವರಿ 2025 ರ ಮಾಹೆಯಿಂದ ಬಿ.ಪಿ.ಎಲ್. ಕಾರ್ಡಿನ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ವಿತರಿಸಲಾಗುತ್ತದೆ ಎಂದು ಮಾಹಿತಿ ನೀಡಿದರು. ಇಂದಿನ ಈ ಸಭೆಯಲ್ಲಿ ಕಲಬುರಗಿ ದಕ್ಷಿಣ ಮತಕ್ಷೇತ್ರ ಶಾಸಕರಾದ ಅಲ್ಲಮ ಪ್ರಭು ಪಾಟೀಲ, ವಿಧಾನ ಪರಿಷತ್ತ ಸದಸ್ಯರುಗಳಾದ ತಿಪ್ಪಣಪ್ಪ ಕಮ್ಮಕನೂರು, ಜಗದೇವಪ್ಪ ಗುತ್ತೇದಾರ ಜಿಲ್ಲಾ ಪಂಚ ಗ್ಯಾರೆಂಟಿ ಯೋಜನೆ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಜಿಲ್ಲಾ ಗ್ಯಾರೆಂಟಿ ಯೋಜನಾ ಅನುಷ್ಠಾನ ಸಮಿತಿ ಉಪಾಧ್ಯಕ್ಷ ನರಸಿಂಹಲು ಕುಂಭಾರ, ಜಿಲ್ಲಾ ಗ್ಯಾರೆಂಟಿ ಯೋಜನಾ ಸಮಿತಿ ಸದಸ್ಯ ಸೋಮಶೇಖರ, ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ ಸೇರಿದಂತೆ ಸಮಿತಿಯ ಸದಸ್ಯರು ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಪಾಲಿಸೋಣ:ಪಾಟೀಲ

ಸಂಸತ್ತು ಎನ್ನಲಾಗುತ್ತದೆ. ಅಣ್ಣ ಬಸವಣ್ಣನವರು ನಡೆದಾಡಿದ ಕಲ್ಯಾಣ ನಾಡಿನಲ್ಲಿ ಜನ್ಮ ತಾಳಿದ ನಾವೇ ಧನ್ಯರು ಎಂದಿರುವ ಅವರು ಬಸವಣ್ಣನವರು ಓರ್ವ ವ್ಯಕ್ತಿಯಲ್ಲ, ಶಕ್ತಿ ಎಂಬುದನ್ನು ಅರಿತು, ಅವರು ತೋರಿದ ದಾರಿಯಲ್ಲಿ ಮುನ್ನಡೆಯೋಣ ಎಂದು ನಾಡಿನ ಜನತೆಯಲ್ಲಿ ಕೋರುತ್ತಾ, ಸರ್ವರಿಗೂ ವಿಶ್ವಗುರು, ಸಾಂಸ್ಕೃತಿಕ ನಾಯಕ ಜಗಜ್ಯೋತಿ ಬಸವೇಶ್ವರರ ಜಯಂತಿಯ ಶುಭಾಶಯ ಕೋರುತ್ತೇನೆ ಎಂದು ಅವರು ತಿಳಿಸಿದ್ದಾರೆ.

## ನಿಲ್ಲಿಸೋದು ಅಸಾಧ್ಯ: ರಹೀಂ ಖಾನ್

ನಮ್ಮ ಮತ್ತು ಹಿಂದೂಗಳ ಮಧ್ಯೆ ಜಗಳಕ್ಕಾಗಿ ಧರ್ಮ ಕೇಳಿ ಗುಂಡಿನ ದಾಳಿ ಮಾಡಿದ್ದಾರೆ ಎಂದು ಹೇಳಿದರು.

ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಗೆ ಪ್ರತಿಯಾಗಿ ಭಾರತವು ಪಾಕಿಸ್ಥಾನಕ್ಕೆ ಸಿಂಧೂ ನದಿ ನೀರು ಹರಿಯುವಿಕೆಗೆ ತಡೆಯೊಡ್ಡುವ ಕ್ರಮ ಕೈಗೊಂಡಿತ್ತು.

## ಪಿಡಿಓ ಗಳಿಗೆ ಸಿಎಂ ಸಿದ್ದರಾಮಯ್ಯ ಆದೇಶ

ಗ್ರಾಮಾಡಳಿತಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ನೀಡಿದರು.

ಕಂದಾಯ ಇಲಾಖೆಯ ವತಿಯಿಂದ ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ನೂತನವಾಗಿ ಆಯ್ಕೆಯಾಗಿರುವ 1000 ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಾಕತಿ ಆದೇಶ ವಿತರಣೆ, ಅಭಿಶಿಕ್ಷಣ ತರಬೇತಿ ಮತ್ತು 4 ಸಾವಿರ ಗೂಗಲ್ ಕ್ರೋಮ್ ಬುಕ್ (ಲ್ಯಾಪ್ ಟಾಪ್) ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗೆ ರಾಜ್ಯದಲ್ಲಿ ಸುಮಾರು 6.33 ಲಕ್ಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದು,

ಅದರಲ್ಲಿ ಯಾವುದೇ ಲಂಚವಿಲ್ಲದೆ, ಮಧ್ಯವರ್ತಿಗಳ ಹಾವಳಿಯಿಲ್ಲದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆ.ಇ.ಎ) ಮೂಲಕ ನೇರವಾಗಿ ಪರೀಕ್ಷೆ ಬರೆದು, ಮೆರಿಟ್ ಮತ್ತು ಮೀಸಲಾತಿ ಮೂಲಕ ಆಯ್ಕೆಯಾಗಿರುವ 1000 ಅಭ್ಯರ್ಥಿಗಳು ಪುಣ್ಯವಂತರು ಎಂದರು.ರಾಜ್ಯದಲ್ಲಿ 8,834 ಗ್ರಾಮ ಆಡಳಿತಾಧಿಕಾರಿಗಳು ಕೆಲಸ ನಿರ್ವಹಿಸುತ್ತಿದ್ದು, ಈಗ ಆಯ್ಕೆಯಾಗಿರುವವರು ಸೇರಿ 9,834 ಗ್ರಾಮ ಆಡಳಿತಾಧಿಕಾರಿಗಳು ಕೆಲಸ ನಿರ್ವಹಿಸುತ್ತಾರೆ. ಉಳಿದ 500 ಗ್ರಾಮ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗುವುದು. ಆ???ಲೈನ್ ಮೂಲಕ ದಾಖಲಾತಿ ಒದಗಿಸುತ್ತಿರುವುದರಿಂದ ಮೊದಲ ಹಂತದಲ್ಲಿ 4 ಸಾವಿರ ಕ್ರೋಮ್‌ಬುಕ್ ಲ್ಯಾಪ್ ಟಾಪ್ ವಿತರಿಸಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಉಳಿದವರಿಗೂ ವಿತರಿಸಲಾಗುವುದು ಎಂದರು.ಭೂಮಿ ಲೆಕ್ಕ ಇಡುವುದು ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿ. ಹಳ್ಳಿಗಾಡಿನ ಜನರು ಶಾಂತಿ ನೆಮ್ಮದಿಯಿಂದ ಇರಬೇಕಾದರೆ, ರೆಕಾರ್ಡ್ ಕರಾರುವಕ್ಕಾಗಿ ಇರಬೇಕು. ಆಧುನಿಕ ಭಾರತದಲ್ಲಿ ತಂತ್ರಜ್ಞಾನ, ವಿಜ್ಞಾನ ಬೆಳೆದಿದೆ. ಡಿಜಿಟಲೀಕರಣ ಬಂದ ಮೇಲೆ ಈಗ ಭೌತಿಕ ರೂಪದಲ್ಲಿ ದಾಖಲೆಗಳನ್ನು ಶೇಕರಣೆ ಮಾಡುವ ಅಗತ್ಯತೆ ಇಲ್ಲ. ಆನ್‌ಲೈನ್‌ನಲ್ಲೇ ಎಲ್ಲಾ ದಾಖಲೆಗಳನ್ನು ಪಡೆಯುವ ವ್ಯವಸ್ಥೆ ಬಂದಿದೆ. ಯಾವ ಕಾರಣಕ್ಕೂ ಡಿಜಿಟಲೀಕರಣ ಮಾಡುವಾಗ ತಪ್ಪುಗಳಾಗದಂತೆ ಎಚ್ಚರ ವಹಿಸಿ ಕೆಲಸ ನಿರ್ವಹಿಸಿ ರೈತರ ಹಿತ ಕಾಪಾಡುವುದು ನಿಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು.ಗ್ರಾಮ ಲೆಕ್ಕಾಧಿಕಾರಿಗಳು ತಮ್ಮ ಹುದ್ದೆಯ ಮಹತ್ವವನ್ನು ಅರಿತುಕೊಳ್ಳಬೇಕು. ನಿಮ್ಮ ಮತ್ತು ರೈತರ ಸಂಬಂಧ ಉತ್ತಮವಾಗಿರಬೇಕು. ಪ್ರತೊಯೊಬ್ಬ ರೈತರ ಪರಿಚಯದೊಂದಿಗೆ ಭೂಮಿಗೆ ಬೇಕಾಗುವ ದಾಖಲೆಗಳನ್ನು ರೈತರಿಗೆ ಒದಗಿಸಿಕೊಡಬೇಕು. ಹಿಂದೆ ಶಾನುಭೋಗರು ಇದ್ದರು ಅವರೀಗ ಗ್ರಾಮ ಆಡಳಿತಾಧಿಕಾರಿಗಳಾಗಿದ್ದಾರೆ. ಆಗಿನ ಕಾಲದಲ್ಲಿ ಶಾನುಭೋಗರು ಅಂದರೆ ರೈತರಿಗೆ ಗುರುಗಳು ಇದ್ದಂತೆ, ಅವರು ಹೇಳುವುದೇ ಅಂತಿಮವಾಗಿತ್ತು ಎಂದರು.ರಾಜ್ಯದಲ್ಲಿ ಸುಮಾರು 6 ಲಕ್ಷ ಸರ್ಕಾರಿ ನೌಕರರಿದ್ದು, ರಾಜಕಾರಣಿಗಳು ಮತ್ತು ಸರ್ಕಾರಿ ನೌಕರರು ಜನರ ಕೆಲಸ ದೇವರ ಕೆಲಸ ಎಂದು ನೆನಪಿಟ್ಟುಕೊಂಟು ಜನಪರ ಸೇವೆ ಮಾಡಬೇಕೆಂದರು.ಕಂದಾಯ ಇಲಾಖೆಯ ಜವಾಬ್ದಾರಿಯನ್ನು ಕೃಷ್ಣ ಬೈರೇಗೌಡ ಅವರಿಗೆ ವಹಿಸುವಾಗ ಇಲಾಖೆಯ ಸುಧಾರಣೆ ಮಾಡುವಂತೆ ಸೂಚಿಸಿದ್ದೆ, ಅದರಂತೆ ಅವರು ಕೆಲವು ಸುಧಾರಣೆ ಮಾಡಿದ್ದು, ಇನ್ನೂ ಕೆಲವು ಸುಧಾರಣೆಯಾಗಬೇಕು ಅದನ್ನು ಮಾಡುತ್ತೇವೆ ಎಂದರು.ನಮ್ಮ ರಾಜ್ಯದಲ್ಲಿ ಸಣ್ಣ ಇಡುವಳಿದಾರರು ಹೆಚ್ಚಾಗಿ ಇದ್ದು, ವ್ಯವಸಾಯ ಲಾಭದಾಯಕ ಕಸುಬಾಗಿರದೆ ಇರುವುದರಿಂದ ನೂತನವಾಗಿ ಆಯ್ಕೆಯಾಗಿರುವ ಗ್ರಾಮ ಆಡಳಿತಾಧಿಕಾರಿಗಳು ಅನ್ನದಾತ ರೈತರಿಗೆ ಯಾವುದೇ ಕಿರುಕುಳ ನೀಡದೆ, ಅವರ ಜೊತೆ ಉತ್ತಮ ಬಾಂಧವ್ಯ ಬೆಳೆಸಿಕೊಂಡು, ಕಂದಾಯ ಇಲಾಖೆಗೆ ತಂದಿರುವ ಸುಧಾರಣೆಗಳನ್ನು ಬಳಸಿಕೊಂಡು ಪ್ರಾಮಾಣಿಕ ಸೇವೆ ಮಾಡುವುದೇ, ನಾಡಿಗೆ ಕೋಡುವ ಕೊಡುಗೆ ಎಂದು ನೂತನ ಗ್ರಾಮ ಆಡಳಿತಾಧಿಕಾರಿಗಳಿಗೆ ಶುಭವಾಗಲಿ ಎಂದು ಶುಭ ಕೋರಿದರು.ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ 30 ಜನರಿಗೆ ನೇಮಕಾತಿ ಆದೇಶ ಪತ್ರ ವಿತರಿಸಿದರು. ಗೂಗಲ್ ಕ್ರೋಮ್ ಬುಕ್ (ಲ್ಯಾಪ್ ಟಾಪ್) ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಮಾಡಿದರು.

## ಯುದ್ಧ ಬೇಡ ಅಂದಿಲ್ಲ: ಹೆಚ್.ಎಂ.ರೇವಣ್ಣ

ಮೇಲೆ ಯುದ್ಧ ಮಾಡಿ 80 ಸಾವಿರ ಪಾಕಿಸ್ತಾನ ಸೈನಿಕರನ್ನು ಹೊಡೆದುರುಳಿಸಿದ್ದರು. ನಾವು ಮಾಡಿರುವುದರನ್ನು ನೋಡಿದರೆ ಇವರು ಏನೇನೂ ಅಲುಗಾಡಿಸುವುದಕ್ಕೆ ಆಗುವುದಿಲ್ಲ. ಬಿಜೆಪಿಯವರು ಬರೀ ಚಾಡಿ ಸುಳ್ಳು ಹೇಳಿಕೊಂಡು ತಿರುಗಾಡುತ್ತಾರೆ. ಸುಳ್ಳು ಅವರ ಮನೆಯ ದೇವರು ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ ಮತ್ತು ಜೆಡಿಎಸ್ ನಾಯಕರು ಕೇವಲ ಜನರ ಭಾವನೆಗಳ ಜೊತೆ

ಆಟವಾಡುತ್ತಿದ್ದಾರೆ. ಆದರೆ ನಾವು ಜನರ ಬದುಕಿನ ಜೊತೆಗೆ ಇರುತ್ತೇವೆ. ಜನರಿಗೆ ಅನುಕೂಲ ಆಗಲಿ ಎಂದು ಐದು ಗ್ಯಾರಂಟಿ ಯೋಜನೆ ತಂದಿದ್ದೇವೆ. ಬಿಜೆಪಿಯವರು ಹೋರಾಟ ಮಾಡುವುದಕ್ಕೆ ನಮ್ಮದೇನೂ ಅಭ್ಯಂತರವಿಲ್ಲ. ಅದನ್ನು ಬಿಟ್ಟು ಸಭೆ ಕೆಡಿಸುವಂತಹ ನೀಚ ಕೆಲಸವನ್ನು ಬಿಜೆಪಿ ಮತ್ತು ಆರ್‌ಎಸ್‌ಎಸ್ ಮಾಡಬಾರದು ಎಂದು ಕಿಡಿಕಾರಿದರು.

# ಯುಗ ಪ್ರವರ್ತಕ ಕ್ರಾಂತಿಯೋಗಿ ಬಸವಣ್ಣ



"ಮಲ್ಲಿಗೆ ಇರುವಾಗ ಮುಳ್ಳೇಕೆ ಮುಡಿಯುತಿ ಕಲ್ಯಾಣದಲ್ಲಿ ಬಸವಣ್ಣ ಇರುವಾಗ ಕಲಿಗೆ ಕೈಯ ಮುಗಿಯುತಿ?"

ಜನಪದರ ಬಾಯಿಂದ ಭಾವ ತುಂಬಿ ಬಿಚ್ಚು ಮನದಿಂದ ಇಂತಹ ವೈಚಾರಿಕ ಸಂಗತಿ

ಹೊರಹಮ್ಮಬೇಕಾದರೆ ಬಸವಣ್ಣನವರ ವ್ಯಕ್ತಿತ್ವದ ಅಗಾಧತೆ ಅನಾವರಣಗೊಳ್ಳುತ್ತದೆ..

ಬಸವಣ್ಣನದು ಇಲ್ಲದವರಿಗಾಗಿ, ಶೋಷಣೆ ಒಳಗಾದವರಿಗಾಗಿ, ಸಮಾಜದ ಅಂಕು ಡೊಂಕುಗಳನ್ನು ಕುಂದು ಕೊರತೆಗಳನ್ನು ತುಂಬುವುದಕ್ಕಾಗಿ ಹೋರಾಟ ಮಾಡಿ ಕ್ರಾಂತಿ ಗೈದ ಬದುಕು.

ಪಟ್ಟಭದ್ರ ಹಿತಾಸಕ್ತಿಗಳೆಷ್ಟೇ ಹೊನ್ನಾರಗೈದು ಬೆಂಬಿಡದೆ ಶರಣರನ್ನು ಕಾಡಿದಾಗಲೂ ವಚನ ಸಾಹಿತ್ಯವನ್ನು ನಾಶಗೊಳಿಸಬೇಕೆಂದು ಏನೆಲ್ಲ ಪ್ರಯತ್ನ ಪಟ್ಟರು, ಜನಪದರ ಮನದಿಂದ ಬಸವಣ್ಣ ಅಚ್ಚಳಿಯದೆ ಉಳಿದ..

ಕಲಾಂತರದಿಂದ ಎಗ್ಗಿಲ್ಲದೆ ಸಾಗಿ ಬಂದ ವರ್ಣಭೇದ, ವರ್ಗಭೇದಗಳ,ರಾಜಸತ್ತೆಗಳ ಅಟ್ಟಹಾಸದ ಕರಾಳ ಕಾರ್ಗತ್ತಲೆಯನ್ನು ಸೀಳಿ ಹೊಂಗಿರಣವಾಗಿ ಬಂದ ಬಸವಣ್ಣ..

ಬಸವಣ್ಣ ಯುಗ ಪ್ರವರ್ತಕ ಕಾಲದ ಕಟ್ಟಳೆಯನ್ನು ಮೆಟ್ಟಿನಿಂತ ಧೀಮಂತ ಪ್ರವಾದಿ.

ಅಂದಿನ ಸಮಾಜದ ನಿಯಮಗಳಿಗೆ ವಿರೋಧಿಯಾಗಿ: ಯಾರೂ ಕಂಡ–ರಿಯದ ಕೇಳರಿಯದ ಧರ್ಮವೊಂದನ್ನು ಸ್ಥಾಪಿಸಿ, ಎಂತಹದೇ ಎಡರು ತೊಡರಗಳು ಎದುರಾದಾಗಲೂ ದೃಢತೆಯಿಂದ ಇಟ್ಟ ಹೆಜ್ಜೆಯನ್ನ ಹಿಂದಿಕ್ಕದ ಧೈರ್ಯಶಾಲಿ..

ವರ್ಣಿಸಲಸದಳವಾದ ವ್ಯಕ್ತಿತ್ವದಿಂದಾಗಿ ಐಸ್ಕಾಂತದಂತೆ ಸಮಾಜದ ಎಲ್ಲರನ್ನೂ, ಎಂಥವರನ್ನು ತನ್ನ ತೋಳ ತೆಕ್ಕೆಗೆ ಸೇರಿಸಿಕೊಂಡು ಯಾವುದೇ ಸಂಶಯಕ್ಕೆ ಆಸ್ಪದವಿಲ್ಲದಂತಹ ಪ್ರಶ್ನಾತೀತವಾದ ವೈಚಾರಿಕ ವೈಜ್ಞಾನಿಕ ಪ್ರಧಾನವಾದ ಅತ್ಯದ್ಭುತ ಲಿಂಗಾಯತ ಧರ್ಮವನ್ನು ಸಂಸ್ಥಾಪಿಸಿದ ಪರಿವರ್ತನಾಯೋಗಿ ಬಸವಣ್ಣ.. ಯುಗಯುಗಗಳಿಂದ ಸಮಾಜದಲ್ಲಿ ಹಾಸು ಹೊಕ್ಕಾದ ಅನೇಕ ಮೌಢ್ಯತೆಯಿಂದ ಒಡಗೂಡಿದ ಅಮಾನವೀಯವಾದ ಕಟ್ಟಳೆಗಳನ್ನು ಧಿಕ್ಕರಿಸಿ ಎದೆ ಕೊಟ್ಟು ನಿಂತ ಧೀಮಂತ.

ಮನು ನಿರ್ಮಿತವಾದ ಜಾತಿ ವ್ಯವಸ್ಥೆಯ ಚೌಕಟ್ಟಿನಲ್ಲಿ ಮನುಷ್ಯ ಮನುಷ್ಯರ ನಡುವೆ ಭೇದ ಭಾವವನ್ನ ಮಾಡಿ. ಸೃಷ್ಟಿಯ ಸೊಬಗಾದ ಹೆಣ್ಣನ್ನು ಕೂಡ ಅಸ್ಪೃಶ್ಯಗಳಂತೆ ಕಂಡು,ಇನ್ನುಳಿದಂತೆ ಕೆಲವು ವರ್ಗಕ್ಕೆ ಕಟ್ಟುನಿಟ್ಟಿನ ಕಟ್ಟಳೆಗಳನ್ನ ಹೇರಿ ತೀವ್ರತರವಾಗಿ ಅವರನ್ನು ತನ್ನ ಹಿತಕ್ಕಾಗಿ ಪಶುಗಳಂತೆ ಬಳಸಿಕೊಂಡವರ ಪಾಲಿಗೆ ಬಸವಣ್ಣ ಪರಮಶತ್ರುವಾಗಿ ಬಿಡಿಸಲಸಾಧ್ಯವಾದ ರಹಸ್ಯವಾಗಿಯೇ ಉಳಿದುಕೊಂಡ..

ತನ್ನ ಎಂಟನೇ ವಯಸ್ಸಿನಲ್ಲಿಯೇ ಮನೆಯಿಂದ ಪ್ರಾರಂಭವಾದ ಬಸವಣ್ಣನ ಕ್ರಾಂತಿಯ ಕಹಳೆ ಭಾರತದ ಗಡಿಯಾಚೆಗೂ ಮೊಳಗಿದ್ದು ಆ ಹೊತ್ತಿಗೆ ಸಾಮಾನ್ಯ ಸಂಗತಿ ಏನಲ್ಲ.

ಒಂದೊಂದು ಸಲ ಇದು ನಿಜವಾಗಿಯೂ ನಡೆದದ್ದಾ? ಎನ್ನುವಷ್ಟರ ಮಟ್ಟಿಗೆ ಪ್ರವಾಹದೋಪಾದಿ ಸರ್ವತೋಮುಖ ಮನ್ವಂತರಗಳು ಸಮಾಜದಲ್ಲಿ ಆದದ್ದು ನಂಬಲಸಾಧ್ಯ.. ಜಾಗತೀಕರಣದ ಕಾಲಘಟ್ಟದಲ್ಲಿರುವ ನಾವಿಂದು ಎಲ್ಲಾ ತಂತ್ರಜ್ಞಾನದ ವೈಜ್ಞಾನಿಕತೆಯ ಅರಿವಿದ್ದಾಗಲೂ ನಮ್ಮಗಳಿಗೆ ಎಷ್ಟೇ ಪ್ರಯತ್ನಿಸಿದರು ಜಾತೀಯತೆ, ಅಸ್ಪೃಶ್ಯತೆ, ಮೌಢ್ಯತೆ ಎಂಬ ಪೆಡಂಭೂತ ಸಂವಿಧಾನ ಕಾನೂನು ಎಂಬ ಕಟ್ಟಳೆಗಳಿದ್ದಾಗಲೂ ನಿವಾರಣೆ ಮಾಡಲು ಅಸಾಧ್ಯವಾಗಿದೆ..ಆದರೆ ಬಸವಣ್ಣನಿಂದ ಇದು ಸಾಧ್ಯವಾಯಿತು ನಡೆನುಡಿ ಒಂದಾಗಿಸಿದ ಪರಿ ಎಲ್ಲರನ್ನೂ ಸ್ಥಬ್ಧಗೊಳಿಸಿತು.

ತನಗಿಂತ ಕಿರಿಯರಿಲ್ಲ
ಹೊಗಳಿ ಹೊಗಳಿ ಹೊನ್ನ ಶೂಲಕ್ಕೆರಿಸದಿರಿ
ನಾನು ವಿಪ್ರನೆಂದರೆ ನಗುವ ಕೂಡಲಸಂಗಮದೇವ
ಎನ್ನ ನಡೆಯೊಂದು ಪರಿ ನುಡಿಯೊಂದು ಪರಿ ಎನ್ನೊಳಗೇನು ಶುದ್ಧವಿಲ್ಲ

ಎಂಬ ಮಾತುಗಳಿಂದ ತನ್ನನ್ನು ತಾನು ಕನಿಷ್ಠ ಗೊಳಿಸಿಕೊಳ್ಳುವ ಮೂಲಕ ಬಸವಣ್ಣ ಇಡೀ ಸಮುದಾಯದ ಅಂತ: ಶಕ್ತಿಯನ್ನೇ ಜಯಿಸಿದ ಜಯಶಾಲಿ..

ಮಾನವ ಕುಲಕ್ಕೆ ಶ್ರೇಷ್ಠ..

ಜಾಗತಿಕ ಇತಿಹಾಸದಲ್ಲಿಯೇ ಅತ್ಯಂತ ಅಪರೂಪದ ವಿನೂತನವಾದ ವ್ಯಕ್ತಿ ಮತ್ತು ಸಮಷ್ಠಿಯ ಉನ್ನತಿಗಾಗಿ ಧರ್ಮವೊಂದನ್ನು ಸ್ಥಾಪಿಸಿದ..

ಆ ಮೂಲಕ ಮೇಲು ಕೀಳು, ಹೆಣ್ಣು ಗಂಡು,ಎಂಬ ಭೇದವಿಲ್ಲದೆ ಎಲ್ಲರಿಗೂ ಸಮಾನತೆಯ ಅವಕಾಶವನ್ನು ಕಲ್ಪಿಸಿದ..

ಶೋಷಣೆಯ ದ್ಯೂತಕವಾದ ದೇವಾಲಯ ಸಂಸ್ಕೃತಿಯನ್ನ ದೂರಸರಿಸಿ ದೇಹವೇ ದೇವಾಲಯದ ಅತ್ಯಂತ ವಿನೂತನವಾದ ವೈಚಾರಿಕವಾದ ಸಂಸ್ಕೃತಿಯನ್ನು ಜನಮಾನಸದಲ್ಲಿ ಬಿತ್ತಿ, ಅಂಗದ ಮೇಲೆ ಲಿಂಗವುಳ್ಳವರೆಲ್ಲರೂ ಸಂಗಮನಾಥನೆಂಬೆ ಎಂಬ ತತ್ವವನ್ನು ಮುನ್ನೆಲೆಗೆ ತಂದರು..

ಕೈಗೆಟುಕದ ಕಣ್ಣಿಗೆ ಕಾಣದ ಸ್ವರ್ಗ ನರಕಗಳ ಕರ್ಮ ಸಿದ್ಧಾಂತದ ಮೂಲಕ ಭಯಾನಕತೆಯನ್ನ ಸೃಷ್ಟಿಸಿ ಜಾತೀಯತೆ–ಯೆಂಬ ಸಂಕೋಲೆ ಗಟ್ಟಿಯಾಗಿ ಬಿಗಿದು ಉಸಿರುಗಟ್ಟುವ ವಾತಾವರಣದಲ್ಲಿ ವಿವೇಚನಾ ಶಕ್ತಿಯನ್ನೇ ಕಳೆದುಕೊಂಡವರಿಗೆ.

ಆಚಾರವೇ ಸ್ವರ್ಗ ಅನಾಚಾರವೇ ನರಕ
ಕುಲವೇನೋ ಅವಂದಿರ ಕುಲವೇನೋ
ಕೊಲುವನೇ ಮಾದಿಗ ಹೊಲಸು ತಿಂಬುವನೇ ಹೊಲೆಯ

ಎನ್ನುವ ನಿಷ್ಠೂರವಾದ ವೈಚಾರಿಕತೆಯ ಮೂಲಕ ಮೂಲಕ ಜನರ ಮನದಲ್ಲಿದ್ದ ಭಯವನ್ನು ಅಳಿಸಿ, ಶೋಷಿಸುವ ಸಂದರ್ಭಗಳು ಎದುರಾದಾಗ ಪ್ರಶ್ನಿಸುವ ಮನಸ್ಥಿತಿಯನ್ನು ಗಟ್ಟಿಗೊಳಿಸಿದರು ಬಸವಣ್ಣ.

ಗಂಡಿಗೆ ಸಮಾನವಾದ ಅವಕಾಶ ಮಹಿಳೆಗೂ ಕಲ್ಪಿಸುವ ಮೂಲಕ ಹೆಣ್ಣು ಮತ್ತು ಗಂಡಿನ ನಡುವೆ ಇರುವ ಅಂತರವನ್ನು ಅಳಿಸಿ ಹಾಕಿದರು.

ಸ್ತ್ರೀ ಯಾವುದಕ್ಕೂ ಅಬಲಳಲ್ಲ ನಿಕೃಷ್ಟಳಲ್ಲ ಎನ್ನುವುದನ್ನು ಮೊಟ್ಟಮೊದಲಿಗೆ ನಿರೂಪಿಸಿ ಸಾಧಿಸಿ ತೋರಿಸಿದ ಶ್ರೇಯಸ್ಸು ಬಸವಣ್ಣನವರಿಗೆ ಸಲ್ಲುತ್ತದೆ..

ಈ ಸಾವ ಕೆಡುವ ಗಂಡರನೊಯ್ದು ಒಲೆಯೊಳಗಿಕ್ಕು ಎನ್ನುವದರೊಂದಿಗೆ ಮಾತನಾಡಲು ಶಕ್ತಳಲ್ಲದ ಒಬ್ಬ ಮಹಿಳೆ ಪುರುಷ ಪ್ರಧಾನ ಸಮಾಜಕ್ಕೆ ಸೆಡ್ಡು ಹೊಡೆದು ನಿಲ್ಲುವಂತೆ ಮಾಡಿತು ಬಸವಣ್ಣನ ಧರ್ಮ..

ಗಂಡ ಹೇಗಿದ್ದರೂ ಸಹಿಸಿಕೊಂಡು ಹೋಗಬೇಕು ಪ್ರಶ್ನೆ ಎತ್ತುವ ಹಕ್ಕು ಸತಿಗಿಲ್ಲ ಎನ್ನುವುದನ್ನು ಹುಸಿಗೊಳಿಸಿ ಬಸವ ಪರಂಪರೆಯ ಇತಿಹಾಸದಲ್ಲಿ ಮಾದರಿ ಹೆಣ್ಣಾಗಿ ಹೆಂಡತಿಯಾಗಿ ಚಿರಸ್ಥಾಯಿಯಾದಳು

ಆಯ್ದಕ್ಕಿ ಲಕ್ಕಮ್ಮ..

ಈಸಕ್ಕಿ ಆಸೆ ನಿನಗೇಕೆ ಎಂದು ತನ್ನ ಗಂಡನಿಗೆ ಪ್ರಶ್ನಿಸುವ ಮೂಲಕ ಅತಿಯಾಸೆ ಹಾಗೂ ಭ್ರಷ್ಟಾಚಾರದ ಮೂಲ ಬೇರನ್ನು ಕಿತ್ತೆಸೆಯುವ ಅಂದಿನ ಮಾತು ಇಂದಿನ ಕಾಲಕ್ಕೂ ಅತ್ಯಂತ ಪ್ರಸ್ತುತ ವೆನಿಸುತ್ತದೆ.

ಧಾರ್ಮಿಕತೆ ಸಾಕ್ಷರತೆಯಿಂದ ಅಸ್ಪೃಶ್ಯರಾಗಿಯೇ ಉಳಿದ ಸಮುದಾಯಕ್ಕೆ ಧಾರ್ಮಿಕ ಸಮಾನತೆಯೊಂದಿಗೆ ಸಾಕ್ಷರತೆಯನ್ನು ಗಟ್ಟಿಗೊಳಿಸಿದ್ದು ದಿಗ್ಭ್ರಮೆಗೊಳಿಸುವ ಸಂಗತಿ. ಏನೂ ಅರಿವಿಲ್ಲದೆ ವಿವೇಚನಾಶೂನ್ಯರಾಗಿ ಪ್ರಾಣಿಗಳಂತೆ ಬದುಕು ಸಾಗಿಸವ ಅನಿವಾರ್ಯ ಪರಿಸ್ಥಿತಿಯಲ್ಲಿದ್ದ ಜನರಿಗೆ ಸಾಕ್ಷರಗಳಿಸುವುದರೊಂದಿಗೆ ಅತ್ಯಂತ ಶ್ರೇಷ್ಠವಾದ ಮಾನವ ಕುಲಕ್ಕೆ ಜ್ಯೋತಿಯಾಗಿ ಬೆಳಗುತ್ತಿರುವ ವಚನಗಳ ರಚನೆಗೆ ಕಾರಣಕರ್ತನಾದ ಬಸವಣ್ಣ ನಿಜವಾಗಿಯೂ ದೇವಮಾನವ...

ಅದಕ್ಕಾಗಿಯೇ ಇನ್ನುಳಿದ ಎಲ್ಲಾ ಶರಣರು ಬಸವಣ್ಣನವರ ಕುರಿತಾಗಿ ಅಭಿಮಾನದ ಪರಾಕಾಷ್ಠೆ ಅವರ ಮಾತಿನ ಮೂಲಕ ತಿಳಿದು ಬರುತ್ತದೆ ದೇವನಾಗಲು ಬಹುದು ಬಸವನಾಗಲು ಬಾರದು

*ದೇವಲೋಕದವರಿಗೂ ಬಸವಣ್ಣನೇ ದೇವರು! ನಾಗಲೋಕದವರಿಗೂ ಬಸವಣ್ಣನೇ ದೇವರು!
ಮರ್ತ್ಯಲೋಕದವರಿಗೂ ಬಸವಣ್ಣನೇ ದೇವರು!
ಮೇರುಗಿರಿ ಮಂದಾರಗಿರಿ ಮೊದಲಾದವೆಲ್ಲಕ್ಕೂ ಬಸವಣ್ಣನೇ ದೇವರು!
ಚೆನ್ನಮಲ್ಲಿಕಾರ್ಜುನಯ್ಯ ನಿಮಗೂ ಎನಗೂ ಎಮ್ಮ ಶರಣರಿಗೂ ಬಸವಣ್ಣನೇ ದೇವರು*

ಒಬ್ಬ ವ್ಯಕ್ತಿಯ ಕುರಿತಾಗಿ ಈ ರೀತಿಯ ಅಪರಿಮಿತವಾದ ಭಕ್ತಿ?

ದೇವರಿಗೂ ಬಸವಣ್ಣನೇ ದೇವರು ಎಂಬ ಮಾತು ಸಾಮಾನ್ಯವಾದದ್ದಲ್ಲ..

ಬಸವಣ್ಣನಿಗೆ ಕೇವಲ ಬಸವಣ್ಣನೇ ಸರಿಸಾಟಿ..



ಶರಣು ಶರಣಾರ್ಥಿ
ಲಿಂಗಾರತಿ ಅಲ್ಲಮಪ್ರಭು
ಬೀದರ

## ಅಮಾನತು ರದ್ದುಗೊಳಿಸುವಂತೆ ಸಲಹೆ

ಪ್ರತಿನಿಧಿಗಳಾಗಿ ಶಾಸಕರು ತಮ್ಮ ಕರ್ತವ್ಯಗಳನ್ನು ನಿರ್ವಹಿಸಲು ಅವಕಾಶ ನೀಡುವಂತೆ ಸ್ಪೀಕರ್‌ಗೆ ನಿರ್ದೇಶನ ನೀಡುವಂತೆ ಅವರು ರಾಜ್ಯಪಾಲರನ್ನು ಒತ್ತಾಯಿಸಿದ್ದಾರೆ.

ಮಾರ್ಚ್ 21 ರಂದು ಅಭೂತಪೂರ್ವ ಕ್ರಮದಲ್ಲಿ, "ಅಶಿಸ್ತು" ಮತ್ತು "ಸ್ಪೀಕರ್‌ಗೆ ಅಗೌರವ" ತೋರಿದ್ದಕ್ಕಾಗಿ 18 ಬಿಜೆಪಿ ಶಾಸಕರನ್ನು ಆರು ತಿಂಗಳ ಕಾಲ ಅಮಾನತುಗೊಳಿಸಲಾಗಿತ್ತು.

ಸಭೆಯಿಂದ ಹೊರಹೋಗಲು ನಿರಾಕರಿಸಿದ ನಂತರ ಮಾರ್ಷಲ್‌ಗಳು ಅವರನ್ನು ವಿಧಾನಸಭೆಯಿಂದ ಬಲವಂತವಾಗಿ ಹೊರಹಾಕಿದ್ದರು.

ವಿಧಾನಸಭೆ ಮತ್ತು ಪರಿಷತ್ತಿನ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರು ಸಲ್ಲಿಸಿದ ಜ್ಞಾಪಕ ಪತ್ರವನ್ನು ಉಲ್ಲೇಖಿಸಿ, ರಾಜ್ಯಪಾಲರು ತಮ್ಮ ಪತ್ರದಲ್ಲಿ, ಪ್ರಮುಖ ವಿರೋಧ ಪಕ್ಷಕ್ಕೆ ಸೇರಿದ 18 ಶಾಸಕರ ಮೇಲೆ ವಿಧಿಸಲಾದ ಅಮಾನತು ಆದೇಶವನ್ನು ಮರುಪರಿಶೀಲಿಸುವಂತೆ ತಮ್ಮ ಪ್ರಾತಿನಿಧ್ಯವನ್ನು ಸ್ಪೀಕರ್ ಮತ್ತು ರಾಜ್ಯ ಸರ್ಕಾರಕ್ಕೆ ಕಳುಹಿಸುವಂತೆ ವಿನಂತಿಸಿರುವುದಾಗಿ ತಿಳಿಸಿದ್ದಾರೆ.

"ಮೇಲಿನದನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕ ರಾಜ್ಯದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳ ಮೂಲ ತತ್ವಗಳನ್ನು ಎತ್ತಿಹಿಡಿಯಲು ಮತ್ತು ಅಮಾನತುಗೊಂಡ ಸದಸ್ಯರು ಜನ ಪ್ರತಿನಿಧಿಗಳಾಗಿ

ತಮ್ಮ ಜವಾಬ್ದಾರಿಗಳನ್ನು ಪುನರಾರಂಭಿಸಲು, ಅವರ ವಿನಂತಿಯನ್ನು ಸಕಾರಾತ್ಮಕವಾಗಿ ಪರಿಗಣಿಸಬೇಕೆಂದು ಮತ್ತು ಅಮಾನತು ರದ್ದುಗೊಳಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ನಾನು ಬಯಸುತ್ತೇನೆ" ಎಂದು ಏಪ್ರಿಲ್ 28 ರಂದು ರಾಜ್ಯಪಾಲರು ಬರೆದ ಪತ್ರದಲ್ಲಿ ತಿಳಿಸಲಾಗಿದೆ.

"ಈ ಸಂಬಂಧ ತೆಗೆದುಕೊಂಡ ಕ್ರಮಗಳ ವಿವರಗಳನ್ನು ನನ್ನ ಗಮನಕ್ಕೆ ತರಬಹುದು" ಎಂದು ಗೆಹ್ಲೋಟ್ ಹೇಳಿದ್ದಾರೆ. ವಿಧಾನಸಭೆಯ ಬಜೆಟ್ ಅಧಿವೇಶನದ

ಕೊನೆಯ ದಿನದಂದು ಬಿಜೆಪಿ ಶಾಸಕರು ಬೃಹತ್ ಪ್ರತಿಭಟನೆ ನಡೆಸಿದಾಗ ಅಮಾನತುಗೊಳಿಸಿರುವ ಘಟನೆ ಸಂಭವಿಸಿದೆ.

ಸದನದಲ್ಲಿ ವಿಪಕ್ಷ ನಾಯಕರು ಸಾರ್ವಜನಿಕ ಒಪ್ಪಂದಗಳಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿಯನ್ನು ವಿರೋಧಿಸುತ್ತಿದ್ದರು ಮತ್ತು ಸಹಕಾರ ಸಚಿವ ಕೆ ಎನ್ ರಾಜಣ್ಣ ಅವರನ್ನು ಒಳಗೊಂಡ 'ಹನಿಟ್ರ್ಯಾಪ್' ಪ್ರಯತ್ನದ ಬಗ್ಗೆ ನ್ಯಾಯಾಂಗ ತನಿಖೆಗೆ ಒತ್ತಾಯಿಸುತ್ತಿದ್ದರು.

ವಿಧಾನಸಭೆಯೊಳಗೆ ಪ್ರತಿಭಟನೆಯ ಸಮಯದಲ್ಲಿ, ಕೆಲವು ಬಿಜೆಪಿ ಶಾಸಕರು ಸ್ಪೀಕರ್ ಅವರ ವೇದಿಕೆಯ ಮೇಲೆ ಹತ್ತಿ ಅವರ ಕುರ್ಚಿಯನ್ನು ಸುತ್ತುವರೆದರು, ಆದರೆ ಇತರರು ಸದನದ ಬಾವಿಯಿಂದ ಕಾಗದಗಳನ್ನು ಎಸೆದರು. ಮಾರ್ಷಲ್‌ಗಳು ಮಧ್ಯಪ್ರವೇಶಿಸಿ ಶಾಸಕರನ್ನು ಬಲವಂತವಾಗಿ ಹೊರಹಾಕಿದ್ದರು.

ಬಿಜೆಪಿ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್, ಮಾಜಿ ಉಪ ಮುಖ್ಯಮಂತ್ರಿ ಸಿ ಎನ್ ಅಶ್ವಥ್ ನಾರಾಯಣ್, ಎಸ್ ಆರ್ ವಿಶ್ವನಾಥ್, ಬಿ ಎ ಬಸವರಾಜು, ಎಂ ಆರ್ ಪಾಟೀಲ್, ಚನ್ನಬಸಪ್ಪ, ಬಿ ಸುರೇಶ್ ಗೌಡ, ಉಮಾನಾಥ ಕೋಟ್ಯಾನ್, ಶರಣು ಸಲಗರ, ಡಾ ಶೈಲೇಂದ್ರ ಬೆಲ್ದಾಳೆ, ಸಿ ಕೆ ರಾಮಮೂರ್ತಿ, ಯಶ್ಪಾಲ್ ಸುವರ್ಣ, ಡಿ. ಲಮಾಣಿ, ಮುನಿರತ್ನ ಮತ್ತು ಬಸವರಾಜ ಮತ್ತಿಮೂಡ್ ಅಮಾನತುಗೊಂಡಿದ್ದಾರೆ.

## ಕೋಳಕೂರನಲ್ಲಿ ಪರಶುರಾಮ ಜಯಂತಿ ಆಚರಣೆ



ಜೇವರ್ಗಿ:ಏ.29:ತಾಲೂಕಿನ ಆದಿ ಬಣಜಿಗ ಸಮಾಜದ ಮುಖಂಡರು ಆದಿ ಶಕ್ತಿ ರೇಣುಕಾ ಯಲ್ಲಮ್ಮ ದೇವಿಯ ಸುಪುತ್ರ ವಿಷ್ಣುವಿನ 6 ನೇ ಅವತಾರ ಕರಾವಳಿ ಸೃಷ್ಟಿ ಕರ್ತ ಭಗವಾನ್ ಶ್ರೀ ಪರಶುರಾಮರ ಜಯಂತಿಯನ್ನು ಪರಶುರಾಮ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಅರ್ಥ ಪೂರ್ಣವಾಗಿ ಸತತ ಎರಡನೇ ವರ್ಷ ಪರಶುರಾಮ ಜಯಂತಿಯನ್ನು ಆಚರಿಸಿ ಸಮಾಜದ ಮುಖಂಡರಾದ ಮಲ್ಲಣ್ಣ ಕುಲಕರ್ಣಿ ಕೊಳಕುರ ಗ್ರಾಮದ ರೇಣುಕಾ ಯಲ್ಲಮ್ಮ ದೇವಿಯ ಆರಾಧಕ ಪೀರಣ್ಣ ಗುತ್ತಾ ಸಹಾಯಕ ಕಾರ್ಯಪಾಲಕ ಅಭಿಯಂತರ ಶಿವಬಸಪ್ಪ ಕಾಳಶೆಟ್ಟಿ ಇತರರು ಮಾತನಾಡಿದರು ಈ ಸಂದರ್ಭದಲ್ಲಿ ಸಮಾಜದ ಸಿದ್ದಣ್ಣ ಸಾಹು ಬಂಗಾರ ಶೆಟ್ಟಿ ಶಿವಪುತ್ರ ಕೂಡಿ ಶಿವಶರಣಪ್ಪ ಬಿದನೂರು ಈರಣ್ಣ ಯಾದವ್ ಬಸವರಾಜ ಹತಗುಂದಿ ಅಂಬಾರಾಯ ಕೂಡಿ ಅಣ್ಣಾರಾಯ ಗೌಡ ಬುಟ್ನಾಳ ಮಹದೇವಪ್ಪ ಪಾಳೆದ ಶಾಮರಾಯ ವಡಗೇರಿ ಬಸವರಾಜ ಗರೂರ ಮಹದೇವಪ್ಪ ಹೊಸಮನಿ ಶಿವಶರಣಪ್ಪ ಹಂಚಿನಾಳ ಮಲ್ಲಣ್ಣ ತೊಟ್ನಳ್ಳಿ ಶರಣಪ್ಪ ಯಾದವ ಗುಂಡು ಸೀರಿ ಅಂಬರಾಯ ನೀಲೂರ ಶರಣು ಮೊರಟಗಿ ಚಿದಾನಂದ ಸ್ವಾಮಿ ನಂದೂರ ಶಿವಶರಣಪ್ಪ ತೊಟ್ನಳ್ಳಿ ಸೇರಿದಂತೆ ಗ್ರಾಮದ ಸಮಾಜದ ಹಲವಾರು ಮುಖಂಡರು ಉಪಸ್ಥಿತರಿದ್ದರು

# ಬಸವೇಶ್ವರ ಜಾತ್ರೆ ಪ್ರಯುಕ್ತ ಉದ್ಯೋಗ ಮೇಳ

(ವರದಿ. ಡಿ. ಕೆ. ಪ್ರಹ್ಲಾದ)
ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಏ 29 ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಶ್ರೀ ಬಸವೇಶ್ವರ ಜಾತ್ರೆ ಅಮೃತ ಮಹೋತ್ಸವ ಪ್ರಯುಕ್ತ ಶ್ರೀ ಬಸವೇಶ್ವರ ಐಟಿಐ ಕಾಲೇಜಿನಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಉದ್ಯೋಗ ಮೇಳವನ್ನು ಮುಚಳಂಬನ ಪೂಜ್ಯಶ್ರೀ ಪ್ರಣಾವಾನಂದ ಮಹಾಸ್ವಾಮಿಗಳು ಉದ್ಘಾಟಿಸಿ, ಮಾತನಾಡಿ ಉದ್ಯೋಗ ಮೇಳದಲ್ಲಿ ಹಲವಾರು ಜನ ಭಾಗವಹಿ ಕೆಲಸ ಗಿಟ್ಟಿಸಿಕೊಂಡ ಜೀವನ ಸುಧಾರಿಸಿಕೊಳ್ಳಬೇಕು ಎಂದರು.




ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಬಸವೇಶ್ವರ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ಈ ಮೇಳ ಎಲ್ಲರಿಗೂ ಸದುಪಯೋಗವಾಗಲಿ. ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ಈ ಭಾಗದಲ್ಲಿ ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕ, ಧಾರ್ಮಿಕ ಕೆಲಸದಲ್ಲಿ ಅಗ್ರಸ್ಥಾನ ಪಡೆದಿದೆ ಎಂದರು. ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಬಿಡಿವಿಸಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ಶ್ರೀಕಾಂತ ಬಡದಾಳೆ, ಸಹ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಸುಭಾಷ ಹೊಳಕುಂದೆ, ಅಶೋಕ ನಾಗರಾಳೆ, ಜಗನ್ನಾಥ ಖೂಬಾ, ಭದ್ರಿನಾಥ ಪಾಟೀಲ, ಅನಿಲಕುಮಾರ ರಗಟೆ, ರೇವಣಪ್ಪಾ ರಾಯವಾಡೆ, ಬಿಡಿವಿಸಿ ಉಪಾಧ್ಯಕ್ಷ ಡಾ ಜಿ. ಎಸ್. ಭುರಾಳೆ, ಬಿಡಿವಿಸಿಯ ನಾಗಯ್ಯ ಸ್ವಾಮಿ, ಸಂದೀಪ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಆಕಾಶ ಖಂಡಾಳೆ ಪ್ರಾಸ್ತಾವಿಕ ಮಾತನಾಡಿದರು. ಪ್ರಾಚಾರ್ಯ ಜ್ಞಾನರೆಡ್ಡಿ ಬೋಳಿಂಗೆ ಸ್ವಾಗತಿಸಿದರು. ಜಗನ್ನಾಥ ಖ್ಯಾಡೆ ನಿರೂಪಿಸಿದರು.

ರಾಜಕುಮಾರ ನಾಗರಾಳೆ ವಂದಿಸಿದರು. ಈ ಸಂದರ್ಭದಲ್ಲಿ ದಲ್ಲಿ 250 ರಲ್ಲಿ ಭಾರತ ಫೋರ್ಜ್ ಲಿಮಿಟೇಡ್ ನಲ್ಲಿ 21, ಕಿಯೋನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನಲ್ಲಿ 40, ಗುರು ಯುವಶಕ್ತಿ ಪ್ರೈವೇಟ್ ಲಿಮಿಟೆಡ್ ನಲ್ಲಿ 45, ವಾಲಿಯೋ ದಲ್ಲಿ 11 ಸೇರಿ ವಿವಿಧ ಪ್ರೈವೇಟ್ ಕಂಪನಿ ಲಿಮಿಟೆಡ್ ನಲ್ಲಿ ಒಟ್ಟು 141ಜನರಿಗೆ ಉದ್ಯೋಗದ ನೇಮಕಾತಿಯ ಆದೇಶ ಪತ್ರ ನೀಡಲಾಯಿತು.

# ಸುಮಾರು 75 ಕೆ. ಜಿಯ ನೂತನ ಬೆಳ್ಳಿ ಪಲ್ಲಕ್ಕಿಯ ಪೂಜೆ



(ವರದಿ. ಡಿ. ಕೆ. ಪ್ರಹ್ಲಾದ)
ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಏ 29 ನಗರದಲ್ಲಿ ಶ್ರೀ ಬಸವ ಜಯಂತಿ ಹಾಗೂ ಶ್ರೀ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ನಿಮಿತ್ಯ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿಯಿಂದ ನೂತನವಾಗಿ ನಿರ್ಮಿಸಿದ ಸುಮಾರು 75 ಕೆ. ಜಿಯ ಹೊಸ ಬೆಳ್ಳಿ ಪಲ್ಲಕ್ಕಿಯ ಪೂಜೆಯನ್ನು ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೊರಕೆ. ವಿಶ್ವಸಮಿತಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ. ಬಿಡಿಪಿಸಿ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಚಿರಡೆ. ಕಾರ್ಯದರ್ಶಿ ಶ್ರೀ ಕಾಂತ ಬಡದಾಳೆ. ಸಹ ಕಾರ್ಯದರ್ಶಿ ವಿವೇಕಾನಂದ ಹೂದಲೂರೆ. ನಿದರ್ಶಕರಾದ ರೇವಣ್ಣಪಾ ರಾಯವಾಡೆ. ಮಲ್ಲಯ್ಯಾ ಹೀರೆಮಠ. ಕಾಶಪ್ಪ ಸಕ್ಕರಬಾವಿ. ಬದರಿನಾಥ ಪಾಟೀಲ್. ಅನೀಲಕುಮಾರ ರಗಟೆ. ಸುಭಾಷ ಹೊಳಕುಂದೆ. ಹಾಗೂ ಶರಣು ದುರ್ಗೆ. ವಿಶ್ವಸ್ಥ ಸಮಿತಿಯ ಉಪಾಧ್ಯಕ್ಷರಾದ ಡಾ. ಜಿ. ಎಸ್. ಭುರಳೆ. ಕಾರ್ಯದರ್ಶಿ ನಾಗಯ್ಯ ಸ್ವಾಮಿ. ವಿಶ್ವಸ್ಥರಾದ ಸೋಮಶೇಖರ ವಸ್ತ್ರ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಇಲಾಖೆಯೊಂದಿಗೆ ಸಹಕರಿಸಿ– ಡಾ.ಧ್ಯಾನೇಶ್ವರ ನಿರಗುಡೆ




ಮಲ್ಲಮ್ಮ ನುಡಿ ವಾರ್ತೆ

ಬೀದರ:ಏಪ್ರಿಲ್.29:–ಜಿಲ್ಲೆಯಲ್ಲಿ ಅಲಲ್ಲಿ ಮಳೆಯಾಗುತ್ತಿರುವುದರಿಂದ ಹಾಗೂ ನಿಂತ ನೀರಿನಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿರುತ್ತದೆ ನಾಗರೀಕರು ಮಲೇರಿಯ ರೋಗವನ್ನು ನಿಯಂತ್ರಿಸಲು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಮತ್ತು ಸೊಳ್ಳೆ ಕಡಿತದಿಂದ ರಕ್ಷಣೆ, ಸೊಳ್ಳೆ ನಿಯಂತ್ರಣ ವಿಧಾನಗಳನ್ನು ಅಳವಡಿಸಿಕೊಂಡು ಮಲೇರಿಯಾ ಹಾಗೂ ಸೊಳ್ಳೆಗಳಿಂದ ಹರಡುವ ರೋಗಗಳನ್ನು ತಡೆಗಟ್ಟಲು ಸಾರ್ವಜನಿಕರಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಧ್ಯಾನೇಶ್ವರ ನಿರಗುಡೆ ಮನವಿ ಮಾಡಿದರು.

ಅವರು ಮಂಗಳವಾರದಂದು 25ನೇ ಏಪ್ರಿಲ್ 2025 ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಜನಜಾಗೃತಿ ರ್‍ಯಾಲಿಗೆ ಬಾವುಟ ತೋರಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು. ಜಿಲ್ಲೆಯಲ್ಲಿ ಮಲೇರಿಯಾ ರೋಗವು ಇಳಿಮುಖವಾಗಿದ್ದು, ಕಳೆದ 2024ನೇ ಸಾಲಿನಲ್ಲಿ ಕೇವಲ 04 ಮಲೇರಿಯಾ ಪ್ರಕರಣಗಳು ಪತ್ತೆಯಾಗಿದ್ದು, ಅವು ಹೊರರಾಜ್ಯಗಳಿಂದ 04 ಜನ ವಲಸಿಗರಿಗೆ ಮಲೇರಿಯಾ ಧೃಡಪಟ್ಟಿದ್ದು, ಎಲ್ಲಾ ಮಲೇರಿಯಾ ಪ್ರಕರಣಗಳಿಗೆ ತೀವ್ರಚಿಕಿತ್ಸೆ ನೀಡುವುದರ ಮೂಲಕ ಗುಣಪಡಿಸಲಾಗಿದೆ. ಜಿಲ್ಲೆಯಲ್ಲಿ ಮಲೇರಿಯಾದಿಂದ ಇಲ್ಲಿಯವರೆಗೆ ಯಾವುದೇ ತರಹದ ಸಾವು ಸಂಭವಿಸಿರುವುದಿಲ್ಲ. ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಂಡು ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡಿದಲ್ಲಿ ಸೊಳ್ಳೆಗಳ ಬೆಳವಣಿಗೆ ನಿಯಂತ್ರಿಸಿ ಮಲೇರಿಯ ಹಾಗೂ ಇತರ ಸೊಳ್ಳೆ ಜನಿತ ರೋಗಗಳನ್ನು ನಿಯಂತ್ರಿಸಬಹುದಾಗಿದೆ ಎಂದು ತಿಳಿಸಿದರು. ಜಿಲ್ಲಾ ಮಲೇರಿಯಾ ಅಧಿಕಾರಿಗಳಾದ ಡಾ.ರಾಜಶೇಖರ್ ಪಾಟೀಲ ಮಾತನಾಡಿ, ಜಿಲ್ಲೆಯಾದ್ಯಂತ ತಾಲ್ಲೂಕು ಮಟ್ಟದಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಉಪಕೇಂದ್ರ ಹಾಗೂ ಗ್ರಾಮ ಪಂಚಾಯತ, ಶಾಲಾ–ಕಾಲೇಜುಗಳುಗಳಲ್ಲಿ ಮರು ಹೂಡಿಕೆ ಮಾಡಿ, ಮರು ಚಿಂತಿಸಿ, ಮರು ಚೇತನಗೊಳಿಸಿ" ಎಂಬ ಘೋಷಣೆಯೊಂದಿಗೆ ವಿಶ್ವ ಮಲೇರಿಯ ದಿನ ಜನಜಾಗೃತಿಗಾಗಿ ಜಾಥಾ ಮತ್ತು ಸಭೆಯ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಜಿಲ್ಲೆಯಲ್ಲಿ ಮಲೇರಿಯಾ ಹರಡದಂತೆ ಜ್ವರ ಸಮೀಕ್ಷೆ ಹಾಗೂ ಸೊಳ್ಳೆ ತಾಣಗಳ ಸಮೀಕ್ಷೆ ಕಾರ್ಯವನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಸತತವಾಗಿ ಒಂದು ವಾರಗಳವರೆಗೆ ನಿಂತ ನೀರಿನಲ್ಲಿ ಸೊಳ್ಳೆಗಳು ಮೊಟ್ಟೆಯಿಟ್ಟು ತನ್ನ ಸಂತಾನವನ್ನು ಅಭಿವೃದ್ಧಿಪಡಿಸಿ ಮಲೇರಿಯಾ, ಡೇಂಗ್ಯೂ, ಚಿಕ್ಕುಂಗುನ್ಯಾ ಹರಡಲು ಕಾರಣವಾಗುತ್ತದೆ ಸಾರ್ವಜನಿಕರು ಸೊಳ್ಳೆ ಉತ್ಪತ್ತಿಯಾಗದಂತೆ ನೋಡಿಕೊಳ್ಳುವುದು. ಮಲೇರಿಯಾ ಹಾಗೂ ಸೊಳ್ಳೆಗಳಿಂದ ಹರಡುವ ರೋಗಗಳಾದ ಮಲೇರಿಯಾ, ಡೆಂಗ್ಯೂ, ಚಿಕ್ಕಂಗುನ್ಯಾ, ಆನೆಕಾಲು ರೋಗಗಳನ್ನು ಹರಡಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಕೊಂಡು ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸುವಂತೆ ಮನವಿ ಮಾಡಿದರು. ರ್‍ಯಾಲಿಯು ನಗರದ ಅಂಬೇಡ್ಕರ ವೃತ್ತ, ಜಿಲ್ಲಾಧಿಕಾರಿಗಳ ಕಚೇರಿ, ಹಳೆ ಬಸ್ ನಿಲ್ದಾಣ ಮಾರ್ಗದ ಮುಖಾಂತರ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರ ಆವರಣದಲ್ಲಿ ಕೊನೆಗೊಂಡಿತು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ.ರಾಜಶೇಖರ್ ಪಾಟೀಲ್ ಡಾ.ಕಿರಣ ಪಾಟೀಲ್, ಡಾ.ಅನೀಲಕುಮಾರ ಚಿಂತಾಮಣಿ, ಡಾ.ದಿಲೀಪ ಡೊಂಗ್ರೆ, ಡಾ.ಸಂಗಾರೆಡ್ಡಿ .ಕೆ, ತಾಲ್ಲೂಕು ಆರೋಗ್ಯಾಧಿಕಾರಿಗಳು, ಸರ್ಕಾರಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳಾದ ಮೌನದಾಸ, ಸಂಗಪ್ಪಾ ಕಾಂಬ್ಳೆ, ಅನೀತಾ, ಸತೀಷಕುಮಾರ ಪಾಂಡೆ, ವೀರಶಟ್ಟಿ ಸಿ, ಎಂ.ಅಬುಬಕರ್, ಬಾಬು ಪ್ರೀಯಾ, ಹಾದಿತಬ್ರೇಜ್, ದೇವಿದಾಸ, ಮುಹ್ಮದ್ ರಫೀಯುದ್ದಿನ್, ಗೋರಖನಾಥ್, ಜಾವೇದ್ ಕಲ್ಯಾಣಕರ್, ದೇವಿದಾಸ, ಬಸವರಾಜ ಸೇರಿದಂತೆ ಎಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮತ್ತು ಜಿಲ್ಲಾ ಮಲೇರಿಯ ಕಛೇರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜಾತ್ರೆಗಳು ಸಾಮರಸ್ಯದ ಸಂಕೇತ–ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜಾತ್ರೆಗಳು ನಾಗರಿಕರಲ್ಲಿ ಭಾವನಾತ್ಮಕ ಗುಣಗಳನ್ನು ಬೆಳೆಸುತ್ತವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ತಾಲೂಕಿನ ಭಾತಂಬ್ರಾ ಗ್ರಾಮದಲ್ಲಿ ನಡೆದ ವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಾತ್ರಾ ಮಹೋತ್ಸವಗಳು ಎಲ್ಲ ಸಮುದಾಯದವರನ್ನು ಒಗ್ಗಟ್ಟಿಸುವ ಸಾಮರಸ್ಯದ ಸಂಕೇತವಾಗಿದ್ದು, ಧಾರ್ಮಿಕ ಆಚರಣೆಗಳು ಮನುಷ್ಯನ ಅವಿಭಾಜ್ಯ ಅಂಗಗಳಾಗಿವೆ. ಶರಣರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಡೆದರೆ ಮಾತ್ರ ನಮ್ಮ ಬದುಕಿಗೆ ನಿಜ ಅರ್ಥ ಲಭಿಸುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಮಹಾದೇವ ಬೇಲೂರೆ, ಗ್ರಾಮ ಪಂಚಾಯತಿ ಅಧ್ಯಕ್ಷ ಮಾಂತೇಶ್ ಪಾಟೀಲ್ , ಕಾಶಿನಾಥ ಲದ್ದೆ, ಪ್ರಥಮ ದರ್ಜೆ ಗುತ್ತಿಗೆದಾರ ರವೀಂದ್ರ ಚಿಡಗುಪ್ಪೆ, ಜೈರಾಜ್ ಪಾಟೀಲ, ನಾಗಪ್ಪ ಗಾಮಾ, ವಿಜಯಕುಮಾರ ಗಾಮಾ, ಸತೀಶ ಬಿರಾದಾರ, ಶಿವಕುಮಾರ ಕಾಪಸೆ, ಸುರೇಶ ವಾಡೆ, ವೀರೇಶ ಭೂರಾಳೆ, ಓಂಕಾರ ರಾಮಶಟ್ಟೆ, ಭಯ್ಯಾ, ಗುರುರಾಜ ಸ್ವಾಮಿ, ವಿಶ್ವ ಹೂಗಾರ, ಶಂಕರ ಗುಬ್ಬೆ, ಚನ್ನಬಸವ ಟೋಕರೆ, ಸಂಗಮೇಶ ವಾಡೆ, ಸಂಗಶಟ್ಟಿ ಬಿರಗೆ, ರಮೇಶ್ ಗುಬ್ಬೆ, ಶಂಕರ ಟೋಕರೆ, ಸುರೇಶ ಫಾಳೆ, ಮಾಂತೇಶ ಮೂಲಗೆ, ಸಂತೋಷ ಭೂರಾಳೆ, ಪ್ರಭು ಪಾಟೀಲ, ವಿಜಯಕುಮಾರ ಉಚ್ಚಟೆ, ಸಂಗಮೇಶ ಲದ್ದೆ ಸೇರಿದಂತೆ ಹಲವರು ಇದ್ದರು.

**ಕುಸ್ತಿ ವಿಜೇತರಿಗೆ ಬಹುಮಾನ**

ಜಾತ್ರಾ ಮಹೋತ್ಸವದಲ್ಲಿ ಏರ್ಪಡಿಸಿದ್ದ ಕುಸ್ತಿ ಪಂದ್ಯಾವಳಿಯಲ್ಲಿ ವಿಜೇತರಾದವರಿಗೆ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಸಮಿತಿ ವತಿಯಿಂದ ಬಹುಮಾನ ವಿತರಿಸಲಾಯಿತು.

ಲಾತೂರಿನ ತುಕಾರಾಮ ಮನೋಹರ ಅವರು ಕುಸ್ತಿಯಲ್ಲಿ ಪ್ರಥಮ ಸ್ಥಾನ ಪಡೆದ ಜ 11ತೊಲ ಬೆಳ್ಳಿ ಕಡಗ ತಮ್ಮದ್ದಾಗಿಸಿಕೊಂಡರು.

ನೀಲಂಗಾದ ಪವನ ಗೋರೆ ಅವರು ದ್ವಿತೀಯ ಸ್ಥಾನ ಪಡೆದು 5 ಸಾವಿರ ರೂ ನಗದು ಬಹುಮಾನ ಪಡೆದು ಕೊಂಡರು.

ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಮಹಾದೇವ ಬೇಲೂರೆ ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಮಹಾಂತೇಶ ಪಾಟೀಲ್, ದೇವಸ್ಥಾನ ಸಮಿತಿಯ ಪ್ರಮುಖರಾದ ಕಾಶಿನಾಥ ಲದ್ದೆ, ಶ್ರೀಕಾಂತ ಭೂರಾಳೆ, ನಾಗಪ್ಪ ಗಾಮಾ ಸೇರಿದಂತೆ ಹಲವರು ಇದ್ದರು.




ಬಸವಕಲ್ಯಾಣ :– ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿಯಿಂದ ಶ್ರೀ ಬಸವೇಶ್ವರರ ದೇವಸ್ಥಾನದ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನವನ್ನು ವಿದ್ಯುತ್ ಅಲಂಕಾರದಿಂದ ಅನೇಕರ ಜನ ಮನ ಕಂಗೊಳಿಸುತ್ತಿರುವ ದೃಶ್ಯ ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

# ಕೇಂದ್ರ ಕಾರಾಗೃಹದ ಶಿಕ್ಷಾ ಬಂದಿಗಳಿಗೆ ಕಂಪ್ಯೂಟರ್ ತರಬೇತಿಯ ಪ್ರಮಾಣಪತ್ರ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.29–ಕಲಬುರಗಿ ಕೇಂದ್ರ ಕಾರಾಗೃಹ, ಸೋಕೇರ್ ಇಂಡ್ ಸಂಸ್ಥೆ ಕಲಬುರಗಿ, ಅದಾನಿ ಸಂಸ್ಥೆ ವಾಡಿ ಇವುಗಳ ಸಹಯೋಗದೊಂದಿಗೆ ಕೇಂದ್ರ ಕಾರಾಗೃಹದ ಶಿಕ್ಷಾ ಬಂದಿಗಳಿಗೆ (ಕಂಪ್ಯೂಟರ್ ತರಬೇತಿದಾರರಿಗೆ) ಪ್ರಮಾಣಪತ್ರ, ಕಿಟ್ ವಿತರಿಸುವ ಹಾಗೂ ಪ್ರವಚನ (ಉಪನ್ಯಾಸ) ಕಾರ್ಯಕ್ರಮವನ್ನು ಸೋಮವಾರ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಹಮ್ಮಿಕೊಳ್ಳಲಾಯಿತು.

ಬೆಂಗಳೂರಿನ ಅದ್ವೈತ ಮಹಾಮಂಡಲದ ಅಧ್ಯಕ್ಷರು ಹಾಗೂ ಜ್ಞಾನ ಪ್ರಕಾಶ, ಪ್ರವಚನ ಚಕ್ರವರ್ತಿ, ಮಹಾಗುರು, ಶ್ರೇಷ್ಠ ವಾಗ್ಮಿಗಳು ಹಾಗೂ ಉಪನ್ಯಾಸಕರಾದ ಡಾ॥ ಪವಗಡ ಪ್ರಕಾಶರಾವ್ ಅವರು ಕಾರ್ಯಕ್ರಮ ಉದ್ಘಾಟಿಸಿ ಕಂಪ್ಯೂಟರ್ ತರಬೇತಿ ಪಡೆದ 3ನೇ ತಂಡದ ಪ್ರಮಾಣ ಪತ್ರ ಹಾಗೂ 4ನೇ ತಂಡಕ್ಕೆ ಕಿಟ್ ವಿತರಿಸಿ ಮಾತನಾಡಿ, "ಸಜ್ಜನರ ಸಂಗ ಹೆಜ್ಜೇನು ಸವಿದಂತೆ" ಸತ್ಯವಂತರ ಒಳ್ಳೆಯವರ ಜೊತೆ ಒಡನಾಟವನ್ನು ಬೆಳೆಸಿ ಸಹೋದರತ್ವವನ್ನು ಬೆಳೆಸಿಕೊಂಡು ಒಳ್ಳೆಯವರಾಗಿ ಉತ್ತಮ ಜೀವನ ನಡೆಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಸಂಸ್ಥೆಯ ಮುಖ್ಯಸ್ಥೆ ಡಾ॥ ಅನಿತಾ ಆರ್. ಅವರು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಈ ಸಂಸ್ಥೆಯ ಅಧೀಕ್ಷಕ ಎಂ.ಹೆಚ್. ಆಶೇಖಾನ್, ವಿದ್ಯಾಸಾಗರ ಕುಲಕರ್ಣಿ, ಗುರುರಾಜ ಕುಲಕರ್ಣಿ, ಶ್ಯಾಮರಾವ್ ಕುಲಕರ್ಣಿ, ಪ್ರಕಾಶ ಕುಲಕರ್ಣಿ, ಶಿವಯೋಗಪ್ಪ, ಹರಿಷ್ ಗೌಳಿ ಹಾಗೂ ಈ ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿಗಳಾದ ಭೀಮಾಶಂಕರ ಡಾಂಗೆ, ಸಂಸ್ಥೆಯ ಜೈಲರ್‌ಗಳಾದ ಸುನಂದ, ಸಾಗರ ಪಾಟೀಲ, ಶ್ರೀಮಂತಗೌಡ ಪಾಟೀಲ, ಶಾಮ ಬಿದ್ರಿ ಹಾಗೂ ಕಾರಾಗೃಹದ ಲಿಪಿಕ /ಕಾರ್ಯನಿರ್ವಾಹಕ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಕಾರ್ಯಕ್ರಮ ನಿರೂಪಿಸಿದರು.

# ಸಂಸ್ಕೃತಿ ಉಳಿವಿಗೆ ಜಾನಪದ ಕಲೆ ಅರಿವು ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಭಾರತ ಸಂಸ್ಕೃತಿ, ಪರಂಪರೆ ಉಳಿವಿಗೆ ಜಾನಪದ ಕಲೆಯ ಅರಿವು ಪ್ರತಿಯೊಬ್ಬರಿಗೂ ಇರುವುದು ಅಗತ್ಯವಾಗಿದೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.

ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ಕಾಲೇಜು ಅಭಿವೃದ್ಧಿ ಮಂಡಳಿ ವತಿಯಿಂದ ಆಯೋಜಿಸಿದ್ದ ಜಾನಪದ ಉತ್ಸವ ಉದ್ಘಾಟಿಸಿ ಮಾತನಾಡಿದರು.

ಇಂದಿನ ನಾಗರಿಕ ಜಗತ್ತಿನಲ್ಲಿ ನಮ್ಮೆಲ್ಲ ಮಕ್ಕಳು ಪಾಶ್ಚಿಮಾತ್ಯ ಸಂಸ್ಕೃತಿಯತ್ತ ವಾಲುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಶಾಲಾ ಕಾಲೇಜಿನಲ್ಲಿ ಜಾನಪದ ಕಲೆಯ ಅರಿವು ಮೂಡಿಸುವ ಕಾರ್ಯ ಪ್ರತಿಯೊಬ್ಬರು ನಿತ್ಯ ಜೀವನದಲ್ಲಿ ಮಾಡಬೇಕು. ವಿದ್ಯಾರ್ಥಿಗಳು ಕೂಡಾ ತಮ್ಮ ಜೀವನದಲ್ಲಿ ಗುಣಮಟ್ಟದ ಶಿಕ್ಷಣ ಪಡೆ–ಯುದರ ಜತೆಗೆ ಸಂಸ್ಕೃತಿಯ ಮಹತ್ವ ಅರಿತುಕೊಳ್ಳುವ ಪ್ರಯತ್ನ ಮಾಡಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ವ್ಯಾಮೋಹದಿಂದ ಮುಕ್ತ ಮನಸ್ಸಿನಿಂದ ಹೊರಬಂದು ತಮ್ಮ ಓದಿನ ಕಡೆಗೆ ಗಮನ ಹರಿಸಬೇಕು. ಜತೆಗೆ ಗುರು ಹಿರಿಯರನ್ನು ಮತ್ತು ನಮ್ಮ ಸಂಸ್ಕೃತಿ, ಪರಂಪರೆಗೆ ಗೌರವಿಸುವ ಮನೋಭಾನೆ ಬೆಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ವಿದ್ಯಾರ್ಥಿಗಳಿಂದ ಕುಂಭ ಕಳಸ ಮೆರವಣಿಗೆ ನಡೆಯಿತು. ವಿವಿಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಹಾಗೂ ಕಾಲೇಜಿನ ಹಳೆಯ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ. ಅಪರ್ಣಾ ಶಟ್ಟಿ, ಡಾ. ಪ್ರಹ್ಲಾದ್ ಚಂಗಟೆ, ಶಂಭುಲಿಂಗ ವಾಲ್ದೊಡ್ಡಿ, ಡಾ. ನಂದಾ ವಾರದ, ಡಾ. ಶಾಂತಕುಮಾರ ಬನಗುಂಡಿ, ಶಿವಶಂಕರ ತರನಳ್ಳಿ, ಡಿ.ಸಿ. ಬಿರಾದಾರ, ಗಿರೀಶ ತುಂಬಾ, ಕರಣ ಜಾನವೀರ, ಡಾ. ರಾಜಾಬಾಯಿ, ಅಶ್ವಿನಿ, ವೆಂಕಟೇಶ ಜಾಧವ, ಪ್ರಕಾಶ ಶೇಡೋಳಕರ್, ಅಂಜು ರೇಡ್ಡಿ, ನಿಂಗುರೆಡ್ಡಿ, ಸಂಜು ವಾಡೇಕರ್, ಉಷಾರಾಣಿ ಶಿವಪೂರಗಲ್ಲಿ, ಪಪ್ಪುರಾಜ ಚತುರೆ ಸೇರಿ ಅನೇಕರಿದ್ದರು.

ಸರಕಾರಿ ಪದವಿ ಕಾಲೇಜಿನ ವಿದ್ಯಾರ್ಥಿಗಳ ಕ್ರೀಡಾ ಚಟುವಟಿಕೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ ಮಾಡುವುದಕ್ಕೆ ಸ್ಥಳದ ಕೊರೆತೆಜ ಇದ್ದು, ಈ ಕೊರತೆಯನ್ನು ನಿವಾರಣೆಗೆ ಸರಕಾರದ ಮೇಲೆ ಹೆಚ್ಚಿನ ಒತ್ತಡ ಹಾಕುವ ಮೂಲಕ ಕಾಲೇಜಿಗೆ 5 ಎಕರೆ ಜಮೀನು ಮಂಜೂರು ಮಾಡಿಕೊಡಲಾಗುವುದು.

**–ಡಾ. ಸಿದ್ದು ಪಾಟೀಲ್ ಶಾಸಕ, ಹಮನಾಬಾದ್**

# ಜಾತಿ ಜನಗಣತಿಯಲ್ಲಿ ಎಸ್.ಸಿ ಹೊಲಿಯ ಎಂದು ಕಡ್ಡಾಯ ಬರೆಯಿಸಿ: ಮಾರುತಿ ಬೌದ್ದೆ



ಬೀದರ.ಏ.29:ಮೇ.5ರಿಂದ 17ರ ವರೆಗೆ, 17ರಿಂದ 19ರ ವರೆಗೆ ಹಾಗೂ 19ರಿಂದ 24ರ ವರೆಗೆ ಮೂರು ಹಂತಗಳಲ್ಲಿ ನಡೆಯಲಿರುವ ಜಾತಿ ಜನಗಣತಿಯಲ್ಲಿ ಜಿಲ್ಲೆಯ ನಮ್ಮ ಸಮಾಜ ಬಾಂಧವರು ಕಡ್ಡಾಯವಾಗಿ ಎಸ್.ಸಿ ಹೊಲೆಯ ಎಂದು ಬರೆಯಿಸುವಂತೆ ಕರ್ನಾಟಕ ರಾಜ್ಯ ಹೊಲೆಯ ಬಲಗೈ ಸಂಬಂಧಿತ ಒಳ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾ ಅಧ್ಯಕ್ಷ ಮಾರುತಿ ಬೌದ್ದೆ ಕರೆ ನೀಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಇದು ಸಂಪೂರ್ಣ ಗಣಕಯುಕ್ತ ಸರ್ವೆ ಆಗಿರುತ್ತದೆ. ತಮ್ಮ ಮನೆಗೆ ಬರುವ ಅಧಿಕಾರಿಗಳಿಗೆ ನಿಖರ ಹಾಗೂ ಸ್ಪಷ್ಟ ಮಾಹಿತಿ ನೀಡಿ ಸಹಕರಿಸಬೇಕು. ಎಷ್ಟೆ ಒತ್ತಡ ತಂದರೂ ಕಡ್ಡಾಯವಾಗಿ ಜಾತಿ ಕಾಲಂನಲ್ಲಿ ಹೊಲೆಯ ಎಂತಲೇ ಬರೆಯುವುದನ್ನು ಮರೆಯಬಾರದೆಂದು ಪುನರೂಚ್ಚರಿಸಿದರು.

ಜಾತಿ ಗಣತಿಯಲ್ಲಿ ಆಗಸ್ಟ್ 1 2024 ರ ಸುಪ್ರೀಂ ಕೋರ್ಟ್ ಆದೇಶದಂತೆ ಆಯಾ ರಾಜ್ಯಗಳು ಒಳ ಮೀಸಲಾತಿ ಜಾರಿ ಮಾಡುವ ಅಧಿಕಾರ ರಾಜ್ಯ ಸರ್ಕಾರವು ಹೊಂದಿದೆ ಎಂದು ಆದೇಶದಲ್ಲಿ ತಿಳಿದಿರುತ್ತದೆ ಅಧಿಕೃತವಾಗಿ ಹೇಳಲ್ಪಟ್ಟಾಗ ನಮ್ಮ ಕರ್ನಾಟಕ ರಾಜ್ಯ ಸರ್ಕಾರವು ಒಳ ಮೀಸಲಾತಿ ಜಾರಿ ಮಾಡುವುದಕ್ಕಾಗಿ ನಿರ್ಧರಿಸಿ ವೈಜ್ಞಾನಿಕವಾಗಿ ಆಯಾ ಜಾತಿಗಳ ನಿಖರವಾದ ಜನಸಂಖ್ಯೆಯನ್ನು ಕ್ರೃಢಿಕರಿಸಿ ಇದರ ಆಧಾರದ ಮೇಲೆ ಪರಿಶಿಷ್ಟ ಜಾತಿಯಲ್ಲಿ ಬರುವ 101 ಉಪ ಜಾತಿಗಳಿಗೆ ನ್ಯಾಯ ಸಿಗುವಂತೆ ಮಾಡಲು ನಿವೃತ್ತ ನ್ಯಾಯಮೂರ್ತಿ ಹೆಚ್. ಎನ್.ನಾಗಮೋಹನದಾಸರ ನೇತೃತ್ವದಲ್ಲಿ ಏಕಸದಸ್ಯ ಆಯೋಗ ರಚಿಸಿ ಮೂರು ತಿಂಗಳಲ್ಲಿ ವರದಿ ಸಲ್ಲಿಸುವಂತೆ ತಿಳಿಸಿದೆ. ಈ ಹಿನ್ನಲೆಯಲ್ಲಿ ಎಡಗೈ ಜಾತಿಗೆ ಸೇರಿರುವ ಮಾದಿಗ ಮತ್ತು ಸಮಾನಾಂತರ ಜಾತಿಗಳು ಬೆಂಗಳೂರಿನಲ್ಲಿ ಸಮಾವೇಶಗಳು ಸಂಘಟಿಸಿ ಅವರಿಗೆ ಹೆಚ್ಚಿನ ಪ್ರತಿಶತ ಮೀಸಲಾತಿ ಸಿಗಬೇಕೆಂದು ಆಯೋಗದ ಮುಂದೆ ತಮ್ಮ ಹಕ್ಕೋತ್ತಾಯ ಮಂಡಿಸಿರುತ್ತಾರೆ. ಈ ಬೆಳವಣಿಗೆಗಳನ್ನು ಗಮನಿಸಿ ಬಲಗೈ ಸಂಬಂಧಿತ ಹೊಲೆಯ ಮತ್ತು ಸಮಾನಾಂತರ ಜಾತಿಗಳು ಯಾವುದೆ ರೀತಿಯ ಹಕ್ಕೋತ್ತಾಯ ನೀಡುವುದಾಗಲಿ ಹೋರಾಟ ಮಾಡುವುದಾಗಲಿ ಕಂಡು ಬರದೆ ಇರುವಾಗ ಇದನ್ನು ಗಮನಿಸಿ ನಮ್ಮ ಬಲಗೈ ಹೊಲೆಯ ಮತ್ತು ಸಂಬಂಧಿತ ಸಮಾನಾಂತರ ಜಾತಿಗಳಿಗೂ ನ್ಯಾಯ ಸಿಗಬೇಕು ನಾವು ಸಹ ಆಯೋಗದ ಮತ್ತು ಸರ್ಕಾರದ ಗಮನ ಸೆಳೆಯುವ ಅವಶ್ಯಕತೆ ಇದೆ ಎಂದು ಮನಗಂಡು ದಲಿತ ಮುಖಂಡರಾದ ಮಹಾದೇವ ದನಿ, ಡಿ.ಶಂಕರ ಹಾಗೂ ಹಿರಿಯ ಹೋರಾಟಗಾರರಾದ ಡಾ.ಡಿ.ಜಿ.ಸಾಗರ ಅವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಹೊಲೆಯ ಬಲಗೈ ಸಂಬಂಧಿತ ಜಾತಿಗಳ ಒಳಮೀಸಲಾತಿ ಹೋರಾಟ ಸಮಿತಿ ರಚಿಸಿ ಬೆಂಗಳೂರಿನಲ್ಲಿ 23 ಮಾರ್ಚ್ ರಂದು ರಾಜ್ಯ ಮಟ್ಟದ ಕಾರ್ಯಕ್ರಮ ರೂಪಿಸಿ ಸರ್ಕಾರದ ಗಮನ ಸೆಳೆಯಲಾಯಿತ್ತು ಇದರ ಪರಿಣಾಮವಾಗಿ ರಾಜ್ಯ ಸರ್ಕಾರ ಮಾರನೆ ದಿನವೆ ತುರ್ತು ಕ್ಯಾಬಿನೆಟ್ ಸಭೆ ನಡೆಸಿ ಏಕಸದಸ್ಯ ಆಯೋಗದ ಮಧ್ಯಾಂತರ ವರದಿ ಪಡೆದು ಪರಿಶಿಷ್ಟ ಜಾತಿಯ 101 ಉಪ ಜಾತಿಗಳ ನಿಖರವಾದ ಜನಸಂಖ್ಯೆ ಧೃಢಿಕರಿಸಿ ಅವರವರ ಜನಸಂಖ್ಯೆ ಅನುಗುಣವಾಗಿ ಒಳಮೀಸಲಾತಿ ಜಾರಿ ಮಾಡುವುದಕ್ಕಾಗಿ ಮೂರು ಹಂತದಲ್ಲಿ ಸಮೀಕ್ಷೆ ಮಾಡಲು ಕ್ರಮ ವಹಿಸಿರುವುದಕ್ಕೆ ರಾಜ್ಯ ಸರ್ಕಾರಕ್ಕೆ ಧನ್ಯವಾದ ಅರ್ಪಿಸುವುದಾಗಿ ಬೌದ್ದೆ ತಿಳಿಸಿದರು. ಸಮಿತಿಯ ಉಪಾಧ್ಯಕ್ಷ ವಿಠಲದಾಸ ಪ್ಯಾಗೆ ಮಾತನಾಡಿ, ಪರಿಶಿಷ್ಟ ಜಾತಿಗಳಿಗೆ ಮೀಸಲಾತಿಯು ಹಿಂದೂ ಧರ್ಮ, ಸಿಖ್ ಧರ್ಮ ಮತ್ತು ಬೌದ್ಧ ಧರ್ಮದಲ್ಲಿ ಇರುವ ಜಾತಿಗಳಿಗೆ ನೀಡಲು ಕಾನೂನಾತ್ಮಕವಾಗಿ ಅವಕಾಶವಿದೆ ಪರಿಶಿಷ್ಟ ಜಾತಿಯಿಂದ ಮುಸ್ಲಿಂ ಧರ್ಮಕ್ಕೆ ಮತ್ತು ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಆದವರಿಗೆ ಮೀಸಲಾತಿ ಸಿಗಲು ಸಾಧ್ಯವಿಲ್ಲವೆಂದು ತಿಳಿಸಿದ ಅವರು, ಸಮೀಕ್ಷೆಯ ವರದಿ ಪ್ರತಿಯಲ್ಲಿ ಧರ್ಮದ ಕಾಲಂ ಕೈಬೀಡಲಾಗಿದೆ ಇದು ಸೇರಿಸುವ ಅವಶ್ಯಕತೆ ಇದೆ ಎಂದು ಒತ್ತಾಯಿಸಿದರು.

ಸಮಿತಿಯ ಪ್ರಧಾನ ಕಾರ್ಯದರ್ಶಿ ಮಹೇಶ ಗೋರನಾಳಕರ್ ಮಾತನಾಡಿ, ಮೇ. ತಿಂಗಳ 5ರಿಂದ ರಿಂದ 23ರ ವರೆಗೆ ಮೂರು ಹಂತದಲ್ಲಿ ನಡೆಯುವ ಸಮೀಕ್ಷೆಯಲ್ಲಿ ಹೊಲೆಯ ಜಾತಿಯವರು ಬಲಗೈ ಸಂಬಂಧಿತ ಜಾತಿಯವರು ಕಡ್ಡಾಯವಾಗಿ ಜಾತಿ ಪರಿಶಿಷ್ಟ ಜಾತಿ ಉಪಜಾತಿಯಲ್ಲಿ ಹೊಲೆಯ ಎಂಬುದು ಮಾಹಿತಿಯನ್ನು ಸಮೀಕ್ಷೆದಾರರಿಗೆ ನೀಡಬೇಕು ಇದರ ಬಗ್ಗೆ ಹೊಲೆಯ ಬಲಗೈ ಸಂಬಂಧಿತ ಜಾತಿಗಳ ಹೋರಾಟಗಾರರು, ಸಂಘ ಸಂಸ್ಥೆಯ ಮುಖಂಡರು, ಸಮಾಜ ಸೇವಕರು, ಸ್ವಸಹಾಯ ಸಂಘದ ಮಹಿಳೆಯರು ಗ್ರಾಮ ಪಂಚಾಯತ, ಎಸ್.ಡಿ.ಎಂ.ಸಿ, ಪಿ.ಕೆ.ಪಿ.ಎಸ್. ಸಮಿತಿಗಳ ಸದಸ್ಯರು, ಪದವೀಧರ ಯುವಕರು, ವಿಧ್ಯಾರ್ಥಿ, ವಿಧ್ಯಾರ್ಥಿನಿಯರು ನಿಮ್ಮ ನಿಮ್ಮ ಗ್ರಾಮದಲ್ಲಿ ಪ್ರತಿಯೊಬ್ಬರೂ ಸಮೀಕ್ಷೆದಾರರಿಗೆ ಸಹಾಯ ಮಾಡಲು ಮುಂದಾಗಬೇಕು ಮತ್ತು ಸಮುದಾಯದವರಿಗೆ ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ಸಮಿತಿಯ ಗೌರವಾಧ್ಯಕ್ಷ ಡಾ.ಕಾಶಿನಾಥ ಚೆಲ್ವಾ, ಸಂಘಟನಾ ಕಾರ್ಯದರ್ಶಿ ವಿನಯಕುಮಾರ ಮಾಳಗೆ, ವಿನೋದ ಬಂದಗೆ, ಸದಸ್ಯ ಶ್ರೀಧರ್ ಸೊಮನೋರ್ ಪತ್ರಿಕಾ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಸವೇಶ್ವರ ಭಾವಚಿತ್ರ ಅಳವಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 29 : ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣನವರ ಭಾವಚಿತ್ರ ಕಡ್ಡಾಯವಾಗಿ ಅಳವಡಿಸಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಒತ್ತಾಯಿಸಿದ್ದಾರೆ.

ಈ ಕುರಿತು ಅವರು ಜಿಲ್ಲಾಧಿಕಾರಿಗೆ ಮಂಗಳವಾರ ಮನವಿ ಪತ್ರ ಸಲ್ಲಿಸಿದ್ದಾರೆ.

ಸರ್ಕಾರ ಎಲ್ಲ ಸರ್ಕಾರಿ ಕಚೇರಿ, ಶಾಲಾ ಕಾಲೇಜು, ಅನುದಾನಿತ ಸಂಘ ಸಂಸ್ಥೆಗಳು, ಬ್ಯಾಂಕ್‌ಗಳಲ್ಲಿ ಬಸವೇಶ್ವರರ ಭಾವಚಿತ್ರ ಅಳವಡಿಸಬೇಕು ಎಂದು ಆದೇಶಿಸಿದೆ. ಆದರೆ, ಕೆಲ ಕಚೇರಿ ಹಾಗೂ ಬ್ಯಾಂಕ್‌ಗಳಲ್ಲಿ ಭಾವಚಿತ್ರ ಅಳವಡಿಸಿಲ್ಲ ಎಂದು ದೂರಿದ್ದಾರೆ.

ಜಿಲ್ಲಾಧಿಕಾರಿ ಅವರು ಎಲ್ಲ ಕಚೇರಿಗಳಲ್ಲಿ ಭಾವಚಿತ್ರ ಅಳವಡಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

## ಆರ್.ಆರ್.ಕೆ. ಸಮಿತಿ ಕಾಲೇಜು: ಬಸವ ಜಯಂತಿ ಇಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 29 : ನಗರದ ಮಾಧವನಗರದ ಆರ್.ಆರ್.ಕೆ. ಸಮಿತಿಯ ಪದವಿ ಕಾಲೇಜಿನಲ್ಲಿ ಏಪ್ರಿಲ್ 30 ರಂದು ಬೆಳಿಗ್ಗೆ 10.30ಕ್ಕೆ ಬಸವ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ನಾಗಭೂಷಣ ಕಮಠಾಣೆ ಉದ್ಘಾಟಿಸುವರು. ಆರ್.ಆರ್.ಕೆ. ಸಮಿತಿ ಅಧ್ಯಕ್ಷ ಪ್ರಫುಲ್ ಪಾಂಡೆ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಮಿತಿಯ ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ದೇಶಮುಖ, ಕಾರ್ಯದರ್ಶಿಗಳಾದ ಧನರಾಜ ತಾಂಡೂರೆ, ಶ್ರೀಕಾಂತ ಪಾಟೀಲ, ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಪ್ರೊ. ಮನೋಜಕುಮಾರ ಕುಲಕರ್ಣಿ, ಸಾಹಿತಿ ಗುರುನಾಥ ಅಕ್ಕಣ್ಣ ಪಾಲ್ಗೊಳ್ಳುವರು.

ಕರ್ನಾಟಕ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಬಸವರಾಜ ಬಲ್ಲೂರ ವಿಶೇಷ ಉಪನ್ಯಾಸ ನೀಡುವರು. ಪ್ರೊ. ಶ್ರೀಕಾಂತ ಪಾಟೀಲ ಹಾಗೂ ಡಾ. ವಿಶಾಲ್ ಬಾಬಶೆಟ್ಟಿ ಅವರನ್ನು ಸನ್ಮಾನಿಸಲಾಗುವುದು.

ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ಅಧ್ಯಕ್ಷ ಟಿ.ಎಂ. ಮಚ್ಚೆ ಪ್ರಾಸ್ತಾವಿಕವಾಗಿ ಮಾತನಾಡುವರು ಎಂದು ಆರ್.ಆರ್.ಕೆ. ಸಮಿತಿಯ ಆಡಳಿತಾಧಿಕಾರಿ ಡಾ. ಬಂಡಯ್ಯ ಸ್ವಾಮಿ ತಿಳಿಸಿದ್ದಾರೆ.

ಆರ್.ಆರ್.ಕೆ. ಸಮಿತಿಯ ಪದವಿ ಕಾಲೇಜು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಬೀದರ್ ತಾಲ್ಲೂಕು ಘಟಕದ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದ್ದಾರೆ.

## ಬಸವ ಜಯಂತಿ ಆಚರಣೆ: ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಕಲಬುರಗಿ.ಏ.29:ಇದೇ ಏಪ್ರಿಲ್ 30 ರಂದು ಬಸವ ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಇದೇ ಏಪ್ರಿಲ್ 30ರ ಬೆಳಗಿನ 6 ಗಂಟೆಯಿಂದ ಮೇ 1ರ ಬೆಳಗಿನ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯ ಮಾರಾಟ, ಸಾಗಾಟ ಹಾಗೂ ಮದ್ಯಪಾನವನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಆದೇಶ ಹೊರಡಿಸಿದ್ದಾರೆ.

ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಎಲ್ಲಾ ತರಹದ ಮದ್ಯಪಾನ, ಸರಾಯಿ, ಶೇಂಧಿ, ಸ್ವದೇಶಿ ಹಾಗೂ ವಿದೇಶಿ ಮದ್ಯಪಾನ ಮತ್ತು ಮಾದಕ ವಸ್ತುಗಳ ಮಾರಾಟ, ಸಾಗಾಟ ಹಾಗೂ ಮದ್ಯಮಾನವನ್ನು ನಿಷೇಧಿಸಿ, ಅಂಗಡಿಗಳನ್ನು ಮುಚ್ಚುವಂತೆ ಅವರು ಆದೇಶ ಹೊರಡಿಸಿದ್ದಾರೆ. ಈ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಬಸವ ಜಯಂತಿ: ಇಂದು ವೈಭವದ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 29 : 892ನೇ ಬಸವ ಜಯಂತಿ ಅಂಗವಾಗಿ ನಗರದಲ್ಲಿ ಬುಧವಾರ (ಏಪ್ರಿಲ್ 30) ಸಾಂಸ್ಕೃತಿಕ ನಾಯಕ ಬಸವಣ್ಣನವರ ಭಾವಚಿತ್ರ ಹಾಗೂ ವಚನ ಸಾಹಿತ್ಯದ ವೈಭವದ ಮೆರವಣಿಗೆ ನಡೆಯಲಿದೆ ಎಂದು ಬಸವ ಜಯಂತಿ ಉತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ ತಿಳಿಸಿದ್ದಾರೆ.

ಸಂಜೆ 5.30ಕ್ಕೆ ಬಸವೇಶ್ವರ ವೃತ್ತದಿಂದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದ ವರೆಗೆ ನಡೆಯುವ ಮೆರವಣಿಗೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಚಾಲನೆ ನೀಡಲಿದ್ದಾರೆ ಎಂದು ಹೇಳಿದ್ದಾರೆ.

ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ, ಸಿದ್ಧಾರೂಢ ಮಠದ ಡಾ. ಶಿವಕುಮಾರ ಸ್ವಾಮೀಜಿ, ಬಸವ ಸೇವಾ ಪ್ರತಿಷ್ಠಾನದ ಡಾ. ಗಂಗಾಂಬಿಕೆ ಅಕ್ಕ, ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ನೇತೃತ್ವ ವಹಿಸುವರು. ಮುಖ್ಯ ಅತಿಥಿಗಳಾಗಿ ಸಚಿವ ರಹೀಂಖಾನ್, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ, ಮಾಜಿ ಶಾಸಕ ಅಶೋಕ ಖೇಣಿ, ವಿಧಾನ ಪರಿಷತ್ ಮಾಜಿ ಸದಸ್ಯ ರಘುನಾಥರಾವ್ ಮಲ್ಕಾಪುರೆ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ್ ಚಿಮಕೋಡೆ ಭಾಗವಹಿಸುವರು ಎಂದು ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ವಚನ ಪಠಣ ಮಾಡುವರು. ಜಿಲ್ಲಾ ಪಂಚಾಯಿತಿ ಸಿಇಒ ಡಾ. ಗಿರೀಶ್ ಬದೋಲೆ ಷ???ಸ್ಥಲ ಧ್ವಜಾರೋಹಣ ಮಾಡುವರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಘನ ಉಪಸ್ಥಿತಿ ವಹಿಸುವರು. ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಅಧ್ಯಕ್ಷತೆ ವಹಿಸುವರು. ಅನೇಕ ಗಣ್ಯರು ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಹೇಳಿದ್ದಾರೆ.

ಬಸವ ಭಕ್ತರು, ಬಸವಾನುಯಾಯಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

## ಶಿವಾಜಿ ಮಹಾರಾಜರಿಂದಲೇ ಹಿಂದೂ ಧರ್ಮದ ಉಳಿವು:ಯತ್ನಾಳ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 29 : ಮಹಾರಾಷ್ಟ್ರದಲ್ಲಿ ಹೊತ್ತಿದ ಜ್ಯೋತಿ ಇಡೀ ರಾಷ್ಟ್ರದಲ್ಲಿ ಬೆಳಗಿದ ಛತ್ರಪತಿ ಶಿವಾಜಿ ಮಹಾರಾಜರು ಹಿಂದೂ ಹೃದಯ ಸಾಮ್ರಾಟ್ ಆಗಿದ್ದಾ-ರೆ. ಶಿವಾಜಿ ಅವರಿಂದಲೇ ಹಿಂದೂ ಧರ್ಮ ಉಳಿದಿದೆ ಎಂದು ವಿಜಯಪುರ ಕ್ಷೇತ್ರದ ಶಾಸಕ ಬಸವನಗೌಡ ಪಾಟೀಲ ಯತ್ನಾಳ ತಿಳಿಸಿದರು. ಛತ್ರಪತಿ ಶಿವಾಜಿ ಮಹಾರಾಜ ಜನತಾ ಸಂಘದ ವತಿಯಿಂದ ಬೀದರ ತಾಲೂಕಿನ ಮಿರ್ಜಾಪುರ ಕೆ ಗ್ರಾಮದಲ್ಲಿ ಹಿಂದೂ ಹೃದಯ ಸಾಮ್ರಾಟ್ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಈ ಹಿಂದೆ ಹಿಂದೂಗಳ ಮೇಲೆ ದಾಳಿಯಾಗುತ್ತಿದ್ದಾಗ ಗೆರಿಲ್ಲಾ ಯುದ್ಧದ ಮೂಲಕ ಶಿವಾಜಿ ಧರ್ಮ ಉಳಿಸಿದ್ದಾರೆ. ಇಂದು ಹಿಂದೂಗಳು ಐಕ್ಯತೆಗೊಳ್ಳುವ ಅವಶ್ಯಕತೆ ಇದೆ. ಕೆಲವು ದಿವಸಗಳ ಹಿಂದೆ ಧರ್ಮ ಕೇಳಿ ಉಗ್ರವಾದಿಗಳು ಕಾಶ್ಮೀರದಲ್ಲಿ ಹಿಂದೂಗಳ ಮೇಲೆ ದಾಳಿ ಮಾಡಿದ್ದಾರೆ ಎಂದು ಪ್ರಸ್ತಾಪಿಸಿದರಲ್ಲದೆ ಒಗ್ಗಟ್ಟಾಗದಿದ್ದರೆ ಹಿಂದೂಗಳ ಉಳಿಸು ಅಸಾಧ್ಯ ಎಂದರು. ಶಿವಾಜಿ ಮಹಾರಾಜರ ಮೂರ್ತಿ ಹೆಚ್ಚು ಹೆಚ್ಚು ಸ್ಥಾಪನೆಯಾಗಲಿ ಎಂದರು. ಮಿರ್ಜಾಪುರ ಕೆ ಗ್ರಾಮದಲ್ಲಿ ಶಿವಾಜಿ ಮಹಾರಾಜರ ಪುತ್ಥಳಿಗಾಗಿ ದಾಸೋಹಗೈದ ಈಶ್ವರಸಿಂಗ್ ಠಾಕೂರ್ ಸೋತರೂ ಕೂಡಾ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದ್ದಾರೆ. ನಿಮ್ಮೆಲ್ಲರ ಸಹಕಾರ ಅವರಿಗಿರಲಿ ಎಂದು ಹೇಳಿದರು. ಬೀದರ ಉತ್ತರ ಕ್ಷೇತ್ರದ ನಾಯಕ ಈಶ್ವರಸಿಂಗ್ ಠಾಕೂರ್ ಸಭೀಕರಿಗೆ ಸ್ವಾಗತಿಸಿ ಮಾತನಾಡಿ ಚುನಾವಣೆ ಸಂದರ್ಭದಲ್ಲಿ ಈ ಗ್ರಾಮಕ್ಕೆ ಶಿವಾಜಿ ಮಹಾರಾಜರ ಮೂರ್ತಿ ಸ್ಥಾಪನೆಗೆ ಸಹಕಾರ ನೀಡುತ್ತೇನೆ ಎಂದು ಹೇಳಿದ್ದೆ. ನುಡಿದಂತೆ ನಡೆದುಕೊಂಡಿದ್ದೇನೆ. ಶಿವಾಜಿ ಮಹಾರಾಜರ ಧರ್ಮಪ್ರಜ್ಞೆ ಮತ್ತು ವೀರತನ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಶಿವಾಜಿ ಮಹಾರಾಜ ಜನತಾ ಸಂಘದ ಅಧ್ಯಕ್ಷ ಸಂದೀಪ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಪೂಜ್ಯ ಶಂಕರಲಿಂಗ ಮಹಾರಾಜರು ಕಲಮೂಡ, ಮಚೇಂದ್ರನಾಥ ಮುತ್ಯ ಔದತಪುರ, ಬಾಬುರಾವ ಮುತ್ಯಾ ಹಳೆಂಬುರ, ಕಾಶಿನಾಥ ಮಹಾರಾಜರು ರಾಜನಾಳ, ಅಂಬಾದಾಸ ಮಹಾರಾಜರು ಪಂಡರಪುರ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ದಿಗಂಬರ ಮಾನಕಾರಿ, ಜನಾರ್ಧನ ಬಿರಾದಾರ, ಪ್ರದೀಪ ಬಿರಾದಾರ, ದತ್ತು ಮೂಲಗೆ ಖಾಜಾಪುರ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಮಹೇಶ್ವರ ಸ್ವಾಮಿ, ಪ್ರಮುಖರಾದ ರಾಜಕುಮಾರ ಜಮಾದಾರ, ಬಾಬುರಾವ ಮಲ್ಕಾಪುರ, ಮಲ್ಲಿಕಾರ್ಜುನ ಪರಿಹಾರ, ಲೋಕೇಶ ಮರ್ಜಾಪುರ, ವಿಲ್ಸನ್ ಚಿಲ್ಲರ್ಗಿ, ವೆಂಕಟರಾವ ಬಿರಾದಾರ, ಧನರಾಜ ಪಾಂಡ್ರೆ, ರಮೇಶ ಬಲಂಡೆ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಭಕ್ತ ಕುಂಬಾರ ನಿರೂಪಿಸಿದರು. ವೆಂಕಟ ವಂದಿಸಿದರು. ಮೂರ್ತಿ ಅನಾವರಣ ಸಂದರ್ಭದಲ್ಲಿ ಸಾವಿರಾರು ಜನರು ಪಾಲ್ಗೊಂಡಿದ್ದರು. ಮಕ್ಕಳಿಂದ ಜರುಗಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಸಭೀಕರ ಗಮನ ಸೆಳೆದವು.

## ನೌಬಾದನಲ್ಲಿ ಶ್ರೀಸಾಯಿ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆ ಲೋಕಾರ್ಪಣೆ

### ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಿ: ಡಾ. ಸುನೀಲ ಕೋಸಂಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 29 : ನೌಬಾದನ ಬಸವೇಶ್ವರ ವೃತ್ತದಲ್ಲಿ ನೂತನವಾಗಿ ಶ್ರೀ ಸಾಯಿ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆ ಸ್ಥಾಪಿಸಲಾಗಿದೆ. ನೌಬಾದ ಸುತ್ತಮುತ್ತಲಿನ ಗ್ರಾಮಗಳ ಜನತೆ ಸಿಟಿ ಒಳಗೆ ಹೋಗದೆ ತಕ್ಷಣವೇ ಈ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಆಸ್ಪತ್ರೆಯ ವೈದ್ಯರಾದ ಡಾ. ಸುನೀಲ ಕೋಸಂಕರ್ ತಿಳಿಸಿದರು.

ನೌಬಾದನ ಬಸವೇಶ್ವರ ವೃತ್ತದ ಸಮೀಪದಲ್ಲಿ ನೂತನವಾಗಿ ಆರಂಭವಾದ ಶ್ರೀಸಾಯಿ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆಯನ್ನು ಸಿಪಿಐ ವಿಜಯಕುಮಾರ ಬಾವಗೆ ಅವರಿಂದ ಆಸ್ಪತ್ರೆ ಲೋಕಾರ್ಪಣೆಗೊಂಡ ಬಳಿಕ ಮಾತನಾಡಿದರು. ಅತ್ಯಂತ ಕಡಿಮೆ ದರದಲ್ಲಿ ಮತ್ತು ಜನಸೇವೆಯ ಸದುದ್ದೇಶ ಇಟ್ಟುಕೊಂಡು ಈ ಆಸ್ಪತ್ರೆ ಆರಂಭ ಮಾಡಲಾಗಿದೆ. ಇಲ್ಲಿ 24 ಗಂಟೆಗಳ ಕಾಲ ವೈದ್ಯರ ಲಭ್ಯ ಇರಲಿದ್ದಾರೆ. ತುರ್ತು ಅಪಘಾತ ಸೇವೆ, ಸ್ತ್ರೀರೋಗ ತಜ್ಞರು, ಜನರಲ್ ವಾರ್ಡ್, ಡೇಕೇರ್, ರಕ್ತಪರೀಕ್ಷೆ, ಎಲ್ಲಾ ರೀತಿಯ ಟೆಸ್ಟ್‌ಗಳನ್ನು ಮಾಡಲಾಗುವುದು. ಸರ್ಜಿಕಲ್ ಐಸಿಯು, ಎಂಐಸಿಯು, 2ಡಿ ಎಕೋ, ಜನರಲ್ ವಾರ್ಡ್, ವಿಶೇಷ ಕೊಠಡಿ, ಲ್ಯಾಬ್ ಮತ್ತು ಮೆಡಿಕಲ್ ವ್ಯವಸ್ಥೆ, 24 ಗಂಟೆಗಳ ಕಾಲ ಅಂಬುಲೆನ್ಸ್ ವ್ಯವಸ್ಥೆ ಇಲ್ಲಿದೆ ಎಂದರು. ಜೊತೆಗೆ ಶ್ರೀ ಸಾಯಿ ಆಸ್ಪತ್ರೆಯಲ್ಲಿ ಮಹಿಳಾ ತಜ್ಞ ವೈದ್ಯರು, ಮಕ್ಕಳ ತಜ್ಞವೈದ್ಯರು ಹಾಗೂ ವಿವಿಧ ರೋಗಗಳ ತಜ್ಞವೈದ್ಯರು ಲಭ್ಯವಿರಲಿದ್ದಾರೆ. ಸಾರ್ವಜನಿಕರಿಗೆ ಬೀದರ ಸಿಟಿ ಒಳಗೆ ಹೋಗುವ ಅವಶ್ಯಕತೆಯೇ ಇರುವುದಿಲ್ಲ. ತಕ್ಷಣವೇ ಆಸ್ಪತ್ರೆಯ ಸಿಬ್ಬಂದಿಗಳು ಸ್ಪಂದಿಸಲಿದ್ದಾರೆ. ಕಡಿಮೆ ದರದಲ್ಲಿ ಅತ್ಯುತ್ತಮ ಚಿಕಿತ್ಸೆ ಇಲ್ಲಿ ಲಭ್ಯವಿದೆ ಎಂದು ಡಾ.ಸುನೀಲ ಕೋಸಂಕರ್ ಮಾಹಿತಿ ನೀಡಿದರು.

ಆಸ್ಪತ್ರೆಯ ತಜ್ಞವೈದ್ಯರಾದ ಡಾ. ಬ್ರಹ್ಮಾನಂದ ಸ್ವಾಮಿ ಮಾತನಾಡಿ ಈ ಆಸ್ಪತ್ರೆಯಲ್ಲಿ ಜಿಲ್ಲೆಯ ತಜ್ಞವೈದ್ಯರು ಚಿಕಿತ್ಸೆ ನೀಡಲಿದ್ದಾರೆ. ನಮ್ಮ ಮೂಲ ಉದ್ದೇಶ ಜನಸೇವೆ. ನೌಬಾದ ಸುತ್ತಮುತ್ತಲಿನ ಗ್ರಾಮಗಳ ಜನರು ಈ ಆಸ್ಪತ್ರೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು. ಖ್ಯಾತ ಸ್ತ್ರೀರೋಗ ತಜ್ಞೆ ಡಾ. ಸಪ್ನಾ ಬ್ರಹ್ಮಾನಂದ ಸ್ವಾಮಿ ಮಾತನಾಡಿ ಮಹಿಳಾ ತಜ್ಞವೈದ್ಯರು, ಮಕ್ಕಳ ತಜ್ಞ ವೈದ್ಯರು ಹಾಗೂ ನರ-ರೋಗ ತಜ್ಞರು, ಕಿಡ್ನಿ ತಜ್ಞ ವೈದ್ಯರು, ಹೃದಯರೋಗ ತಜ್ಞವೈದ್ಯರು ನಮ್ಮಲ್ಲಿ ಲಭ್ಯ ಇದ್ದಾರೆ. ನಮ್ಮ ಲ್ಯಾಬ್‌ನಲ್ಲಿ ರಕ್ತಪರೀಕ್ಷೆ, ಬಿಪಿ ಶುಗರ್ ಸೇರಿದಂತೆ ಹಲವು ಪರೀಕ್ಷೆ ಮಾಡಲಾಗುತ್ತಿದೆ. ಇಂದು ಆಸ್ಪತ್ರೆ ಉದ್ಘಾಟನೆ ಪ್ರಯುಕ್ತ ಉಚಿತ ರಕ್ತದಾನ ಶಿಬಿರ ನಡೆಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಇದೇ ವೇಳೆ ಆಸ್ಪತ್ರೆಯ ಉದ್ಘಾಟನೆಯನ್ನು ನ್ಯೂಟೌನ್ ಪೊಲೀಸ್ ಠಾಣೆಯ ಸಿಪಿಐ ವಿಜಯಕುಮಾರ ಬಾವಗೆ ನೆರವೇರಿಸಿ ಶುಭ ಹಾರೈಸಿದರು. ಸಮಾರಂಭದಲ್ಲಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕಿ ಡಾ. ಮಂಜುಳಾ ಕೋಸಂಕರ್, ಪ್ರಮುಖರಾದ ಡಾ. ಸಂತೋಷ ರೇಜಂತಲ್, ಡಾ. ಪಲ್ಲವಿ ಮಠಪತಿ, ಡಾ. ಅಕ್ಷಯ್ ಜಗತಾಪ, ಡಾ. ನಿತಿನ ಪಾಟೀಲ, ಡಾ. ಕವಿತಾ ಪಾಟೀಲ. ಡಾ. ಶರದ ತುಕದೆ, ಡಾ. ಹರೀಶ ಕಾಕನಾಳೆ ಮತ್ತು ಡಾ. ವಿಶ್ವನಾಥ ಪಾಟೀಲ, ಡಾ. ಮಹೇಶ ಕಾಕನಾಳೆ, ಸೇರಿದಂತೆ ಪ್ರಮುಖರಾದ ತಾನಾಜಿರಾವ ಕೋಸಂಕರ್, ಲತಾ ತಾನಾಜಿರಾವ, ಗೋಪಾಲ ಜಾಧವ, ರಾಧಾ ಜಾಧವ, ಗಜಾನಂದ ಪಾಟೀಲ, ಡಾ. ಅಮರ, ಸಾಯಿನಾಥ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬಸವಣ್ಣನವರ ತತ್ವಗಳು ಆದರ್ಶವಾಗಲಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.29: ವಿದ್ಯಾರ್ಥಿಗಳು ಬಸವಣ್ಣನವರ ತತ್ವಗಳು, ಚಿಂತನೆಗಳು ಆದರ್ಶವಾಗಿರಿಸಿಕೊಂಡು ಸುಂದರ ಜೀವನ ರೂಪಿಸಿಕೊಳ್ಳಬೇಕು ಎಂದು ವಿಜಯಪುರದ ಅಮೃತಾನಂದ ಮಹಾಸ್ವಾಮೀಜಿ ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಮಂಗಳವಾರ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. 12ನೆಯ ಶತಮಾನದಲ್ಲಿ ಬಸವಾದಿ ಶರಣರು ಮನುಕುಲದ ಏಳಿಗೆಗೆ ವಚನ ಸಾಹಿತ್ಯದ ಮೂಲಕ ಬಹುದೊಡ್ಡ ಕೊಡುಗೆ ನೀಡಿದ್ದಾರೆ. ವಿದ್ಯಾರ್ಥಿಗಳು ಓದಿನ ಜತೆಗೆ ವಚನಗಳನ್ನು ಅಧ್ಯಯನ ಮಾಡಬೇಕು ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರ ಪಡೆದುಕೊಳ್ಳಬೇಕು. ಸಂಸ್ಕಾರ ವಿದ್ಯಾರ್ಥಿಗಳನ್ನು ಮೇರು ವ್ಯಕ್ತಿಗಳನ್ನಾಗಿ ಬೆಳೆಯಲು ಸಹಾಯಕವಾಗುತ್ತದೆ ಎಂದರು.

ಕೆಟ್ಟ ವಿಚಾರಗಳು ಮನುಷ್ಯನ ಬೆಳವಣಿಗೆಗೆ ಅಡ್ಡಿಯಾಗುತ್ತದೆ. ಮನಸ್ಸಿನಲ್ಲಿ ಸದಾ ಒಳ್ಳೆತನ, ಉತ್ತಮ ಆಲೋಚನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಇಲ್ಲಿಯ ಗುರುಕುಲ ಪರಿಸರದಲ್ಲಿ ಹಳೆ ಮಾದರಿಯ ಗುರುಕುಲ ಪದ್ಧತಿ ಶಿಕ್ಷಣ ಕಲ್ಪಿಸುತ್ತಿರುವುದು ಮಾದರಿ ಎನಸಿದೆ. ಪೂಜ್ಯರು ಸ್ಥಾಪಿಸಿದ ಶಿಕ್ಷಣ ಸಂಸ್ಥೆಯಲ್ಲಿ 20 ಸಾವಿರ ಮಕ್ಕಳು ಶಿಕ್ಷಣ ಪಡೆಯುತ್ತಿರುವುದು ಹೆಮ್ಮೆಯ ಸಾಧನೆ. ಪ್ರತಿವರ್ಷ ನೂರಾರು ಮಕ್ಕಳು ಮೆಡಿಕಲ್, ಎಂಜನಿಯರಿಂಗ್ ಸೇರಿದಂತೆ ವಿವಿಧ ಕೋರ್ಸ್ಗಳಲ್ಲಿ ಉತ್ತಮ ರ್‍ಯಾಂಕ್ ಪಡೆಯುತ್ತಿರುವುದು ಇಲ್ಲಿಯ ಗುಣಮಟ್ಟದ ಶಿಕ್ಷಣ-ಕ್ಕೆ ಹಿಡಿದ ಕೈಗನ್ನಡಿ ಎಂದು ಶ್ಲಾಘಿಸಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬಸವತತ್ವ ಪ್ರಚಾರ ಮತ್ತು ಪ್ರಸಾರ, ಧಾರ್ಮಿಕ, ಶಿಕ್ಷಣ ಸೇವೆ ಜತೆಗೆ ಅನಾಥ ಶಿಶುಗಳನ್ನು ಸಂರಕ್ಷಿಸಿ ಅನ್ನ, ಅಕ್ಷರ, ಆಶ್ರಯ ನೀಡಿ ಅವರನ್ನು ಉತ್ತಮ ನಾಗರಿಕರನ್ನಾಗಿ ಬೆಳೆಸುತ್ತಿರುವ ಕಾರ್ಯ ಮಾದರಿಯಾಗಿದೆ ಎಂದು ತಿಳಿಸಿದರು.

*ದೇಶದ ಸುರಕ್ಷತೆಗಾಗಿ ಬಜೆಟ್‌ನಲ್ಲಿ ಹೆಚ್ಚಿನ ಆದ್ಯತೆ ನೀಡುವ ಬಗ್ಗೆ

## ರಾಷ್ಟ್ರಪತಿ ಹಾಗೂ ಪ್ರಧಾನಿಗೆ ಮನವಿ ಸಲ್ಲಿಸಿದ ಗುರುನಾಥ ವಡ್ಡೆ



**ಮಲ್ಲಮ್ಮ ನುಡಿ ವಾರ್ತೆ**

ಕಮಲನಗರ:

ದೇಶದ ಸುರಕ್ಷತೆಗಾಗಿ ಹೆಚ್ಚಿನ ಆದ್ಯತೆ ನೀಡಬೇಕೆಂದು ಹಾಗೂ ಅದಕ್ಕಾಗಿ ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ನೀಡಬೇಕೆಂದು ಕೋರಿ ಸಮಾಜ ಸೇವಕ ಗುರುನಾಥ ವಡ್ಡೆ ಅವರು ರಾಷ್ಟ್ರಪತಿಗಳು ಹಾಗೂ ಪ್ರಧಾನಿಗೆ ಮಂಗಳವಾರ ರಂದು ಜಿಲ್ಲಾಧಿಕಾರಿಗಳು, ಬೀದರ ಮುಖಾಂತರ ಮನವಿ ಸಲ್ಲಿಸಿರುತ್ತಾರೆ.

ಇಂದಿನ ಪರಿಸ್ಥಿತಿಯಲ್ಲಿ ದೇಶದ ಸುರಕ್ಷತೆ ದುರ್ಬಲವಾಗುತ್ತಿರುವುದನ್ನು ಕಾಣಬಹುದು. ದೇಶದ ಗಡಿ ರಕ್ಷಣೆ ಹಾಗೂ ಆಂತರಿಕ ಸುರಕ್ಷೆ ಎರಡೂ ದುರ್ಬಲಗೊಳ್ಳುತ್ತಿವೆ.

ಇತ್ತೀಚೆಗೆ ನಡೆದ ಪಹಲ್‌ಗಾಮ್ ದಾಳಿ ಹಾಗೂ ಈ ಹಿಂದೆ ನಡೆದ ದಾಳಿಗಳನ್ನು ನೋಡಿದರೆ ದೇಶದ ಗಡಿ ಸುರಕ್ಷತೆ ಬಗ್ಗೆ ಚಿಂತೆಯನ್ನುಂಟು ಮಾಡುತ್ತಿದೆ. ಬಾಂಗ್ಲಾದೇಶದಿಂದ ಭಾರತ ಗಡಿಯೊಳಗೆ ನಿರಂತರವಾಗಿ ನುಸುಳುವಿಕೆ ನಡೆಯುತ್ತಿದೆ. ಪಾಕಿಸ್ತಾನದಿಂದ ಉಗ್ರರು ದೇಶದಲ್ಲಿ ನುಗ್ಗಿ ಹಲ್ಲೆಗಳು ನಡೆಸುತ್ತಿದ್ದಾರೆ. ಇದರಿಂದ ನಮ್ಮ ಗಡಿಗಳು ಎಷ್ಟು ಸುರಕ್ಷಿತ ಎಂಬುದು ಚಿಂತೆ ನಿರ್ಮಾಣವಾಗಿದೆ.

ಮಾನ್ಯರೆ, ಇದೇ ಪ್ರಕಾರ ದೇಶದಲ್ಲಿನ ಆಂತರಿಕ ಸುರಕ್ಷತೆ ಕೂಡ ಚಿಂತೆ ಉಂಟು ಮಾಡಿದೆ. ಇಂದು ದೇಶದಲ್ಲಿ ಜಾತಿ, ಧರ್ಮ, ಪ್ರಾಂತ, ಭಾಷಾವಾದಗಳಿಂದ ದೇಶದಲ್ಲಿ ಅನೇಕ ಕಡೆ ದಂಗೆಗಳು, ಹಲ್ಲೆಗಳು ನಡೆಯುತ್ತಿವೆ. ದೇಶದಲ್ಲಿ ಅಪರಾಧಗಳ ಸಂಖ್ಯೆ ಹೆಚ್ಚಾಗುತ್ತಿದೆ. ಅಪರಾಧಗಳು ನಿಯಂತ್ರಣಕ್ಕೆ ಬರುತ್ತಿಲ್ಲ. ರಾಜಕೀಯ ಪ್ರೇರಿತ ಅಪರಾಧಗಳು ನಡೆಯುತ್ತಿವೆ. ಪೋಲಿಸ್ ಇಲಾಖೆಯಲ್ಲಿ ರಾಜಕೀಯ ಹಸ್ತಕ್ಷೇಪ ಹೆಚ್ಚಾಗುತ್ತಿದೆ. ತನಿಖಾ ಸಂಸ್ಥೆಗಳು ಒತ್ತಡದಲ್ಲಿ ಕೆಲಸ ನಿರ್ವಹಿಸುವಂತಾಗಿದೆ. ಇದರಿಂದ ಜನ ಸಾಮಾನ್ಯರು ದೇಶದಲ್ಲಿ ಶಾಂತಿಯಿಂದ, ನಿರ್ಭಯವಾಗಿ, ಸುರಕ್ಷಿತವಾಗಿ ಬದುಕಲು ಸಾಧ್ಯವಾಗುತ್ತಿಲ್ಲ. ದೇಶದ ಆಂತರಿಕ ಸುರಕ್ಷೆ ಬಹುದೊಡ್ಡ ಸಮಸ್ಯೆಯಾಗಿ ಕಾಡುತ್ತಿದೆ. ಪಶ್ಚಿಮ ಬಂಗಾಳ ಹಾಗೂ ಇನ್ನೂ ಕೆಲ ಕಡೆ ಪರಿಸ್ಥಿತಿ ನೋಡಿದಾಗ ಭಾರತದಲ್ಲಿ ನಾಗರಿಕರ ಸುರಕ್ಷತೆ ಎಷ್ಟು ಸುರಕ್ಷಿತ ಎಂಬುದು ಪ್ರಶ್ನೆ ನಿರ್ಮಾಣವಾಗಿದೆ.

ಈ ರೀತಿಯಾಗಿ ದೇಶದ ಗಡಿಯಿಂದ ಒಳನುಗ್ಗುತ್ತಿರುವುದು ಹಾಗೂ ದೇಶದಲ್ಲೇ ಗಲಭೆ ಮಾಡುತ್ತಿರುವ ಗಲಭೆಕೋರರನ್ನು ಹಾಗೂ ಅವರನ್ನು ಆಶ್ರಯ ನೀಡುತ್ತಿರುವವರನ್ನು ನಿಯಂತ್ರಿಸುವುದು ದೇಶದ ಏಕತೆ ಹಾಗೂ ಅಖಂಡತೆಗೆ ಅವಶ್ಯಕವಾಗಿದೆ.

ಮಾನ್ಯರೆ, ದೇಶದ ಭದ್ರತೆ, ಸುರಕ್ಷತೆ ದೃಷ್ಟಿಯಿಂದ ಸೈನ್ಯ ಶಕ್ತಿ ಹೆಚ್ಚಿಸುವುದು ಅತ್ಯಂತ ಅವಶ್ಯಕವಾಗಿದೆ. ಅದಕ್ಕಾಗಿ ದೇಶದ ರಕ್ಷಣಾ ಬಜೆಟ್‌ನಲ್ಲಿ ಹೆಚ್ಚಳ ಮಾಡುವುದು ಅವಶ್ಯಕವಾಗಿದೆ. ಮಾಧ್ಯಮದ ವರದಿ ಗಮನಿಸಿದಾಗ ನಮ್ಮ ಸೇನೆಯಲ್ಲಿ 1.80 ಲಕ್ಷ ಸೈನ್ಯ ಬಲ ಕಡಿತಗೊಳಿಸಿರುವುದನ್ನು ತಿಳಿದುಬರುತ್ತದೆ. ಇದೇ ಪ್ರಕಾರ ಅರೆ ಸೈನಿಕ ಪಡೆಗಳಲ್ಲಿ (ಕಚಿಡಿಚಿ ಒಟುಣಚಿಡಿಥಿ ಈಡಿಛಿಜ) 1.11 ಲಕ್ಷ ಹುದ್ದೆಗಳು ಖಾಲಿ ಇರುವುದನ್ನು ತಿಳಿದು ಬರುತ್ತದೆ. ಈ ಕಾರಣಗಳಿಂದ ದೇಶದ ಆಂತರಿಕ ರಕ್ಷಣೆ ಹಾಗೂ ದೇಶದ ಅತೀ ಉದ್ದದ ಗಡಿಯನ್ನು ರಕ್ಷಿಸಲು ರಕ್ಷಣಾ ಇಲಾಖೆ ಹಾಗೂ ಗೃಹ ಇಲಾಖೆಯ ಬಜೆಟ್ ಗಾತ್ರವನ್ನು ಹೆಚ್ಚಿಸುವುದು ಅತ್ಯಂತ ಅವಶ್ಯಕವಾಗಿದೆ.

ಈ ಎಲ್ಲಾ ದೃಷ್ಟಿಯಿಂದ ದೇಶದ ಗಡಿಗಳ ರಕ್ಷಣೆ ಹಾಗೂ ಆಂತರಿಕ ಸುರಕ್ಷತೆ ದೃಷ್ಟಿಯಿಂದ ದೇಶದ ರಕ್ಷಣಾ ಇಲಾಖೆ ಹಾಗೂ ಗೃಹ ಇಲಾಖೆ ಬಜೆಟ್ ಹೆಚ್ಚಿಸಬೇಕಿದೆ ಹಾಗೂ ರಾಜ್ಯಗಳಲ್ಲಿಯೂ ಕೂಡ ಈ ಬಗ್ಗೆ ಬಜೆಟ್ ಗಾತ್ರ ಹೆಚ್ಚಿಸುವುದು ಅನಿವಾರ್ಯವಾಗಿದೆ.

ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ರಾಷ್ಟ್ರಪತಿಗಳು ಹಾಗೂ ಪ್ರಧಾನಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ವಿನಂತಿಸಿಕೊಂಡಿರುತ್ತಾರೆ.

## ಮಕ್ಕಳಿಗೆ ಬೇಕಾಗಿರುವುದು ಆಧುನಿಕ ಶಿಕ್ಷಣವಲ್ಲ, ಮೌಲ್ಯಧಾರಿತ ಶಿಕ್ಷಣ : ಗುರೂಜೀ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳಿಗೆ ಶಿಕ್ಷಕರು ಆಚಾರ್ಯರಾಗುವ ಭವಿಷ್ಯ ನಿರ್ಮಾಣದ ಉತ್ಸುಕತೆ ಹೊಂದಿರಬೇಕು, ಕಾರಣ ಮಕ್ಕಳಿಗೆ ಆಧುನಿಕ ತಂತ್ರಜ್ಞಾನ ಶಿಕ್ಷಣವನ್ನಲ್ಲ, ಮೌಲ್ಯಾಧಾರಿತ ಶಿಕ್ಷಣ, ಸಂಸ್ಕಾರಯುತ ಶಿಕ್ಷಣ ನೀಡಬೇಕು, ಎಂದು ಋಷಿಕೇಶದಿಂದ ಆಗಮಿಸಿದ ಖ್ಯಾತ ಯೋಗ ಗುರುಗಳಾದ ಜಿ. ಸುರೇಶ ಕುಮಾರ ಗುರೂಜಿ ನುಡಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ರುದ್ರ ಸಂಜೀವಿನಿ, ವ್ಯಕ್ತಿತ್ವ ವಿಕಸನ ಕಾರ್ಯಕ್ರಮದ, ಮಕ್ಕಳ ಸಂಸ್ಕಾರ ಬೇಸಿಗೆ ಶಿಬಿರದ 2ನೇ ಬ್ಯಾಚ್‌ನ ಮುಕ್ತಾಯದ ಅಂಗವಾಗಿ ಗುರುವಂದನಾ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಶಿಕ್ಷಣ ಕೊಡಿಸುವಲ್ಲಿ, ಪಾಲಕ-ಪೋಷಕರ ಜವಾಬ್ದಾರಿಗಳನ್ನೂ ಉದ್ದೇಶಿಸಿ ಮಾತನಾಡಿದರು

ಇಂದಿನ ಮಕ್ಕಳಿಗೆ ಹಿಂದಿನ ಹಿರಿಯರು ಬಿಟ್ಟುಹೋದ ಸಂಸ್ಕಾರ - ಸಂಪ್ರದಾಯಗಳ ಅರಿವೇ ಇಲ್ಲದಂತಾಗಿದೆ.., ಮಕ್ಕಳು ಆಟದ ಗೊಂಬೆಗಳಾಗಿದ್ದಾರೆ, ಅವರಿಗೆ ಕುಟುಂಬ ಮತ್ತು ಸಮಾಜದಲ್ಲಿ ನಡೆಯುವ ಯಾವುದೇ ವಿಷಯಗಳ ಅರಿವಿಲ್ಲ.., ನಮ್ಮ ಮಕ್ಕಳು ನಾವೂ ಅನುಭವಿಸಿದ ಕಷ್ಟಗಳನ್ನು ಅನುಭವಿಸಬಾರದು ಎಂದು ಅವರಿಗೆ ಕುಟುಂಬದ ಕಷ್ಟಗಳ ತಿಳಿಯದಂತೆ ಬೆಳೆಸುತ್ತೇವೆ, ಇದು ಸರಿಯಲ್ಲ, ನಾವೂ ಪ್ರತಿಯೊಂದು ವಿಷಯವನ್ನು ಮಕ್ಕಳೊಂದಿಗೆ ಕುಳಿತು ಚರ್ಚಿಸಿ, ಒಳ್ಳೆಯ ನಿರ್ಧಾರ ಕೈಗೊಳ್ಳಬೇಕು ಎಂದರು.

ಪೋಷಕರು ಹಗಲು - ರಾತ್ರಿ ಕಷ್ಟ ಪಟ್ಟು ದುಡಿದು ಮಕ್ಕಳ ಭವಿಷ್ಯಕ್ಕಾಗಿ ಒಳ್ಳೇಯ ಶಾಲೆಗಳಿಗೆ ಸೇರಿಸಿ, ಶಾಲೆಯ ಶುಲ್ಕ ಭರಿಸಿದರೆ ನಮ್ಮ ಕೆಲಸ ಮುಗಿಯಿತು ಎಂದು ಸುಮ್ಮನಾಗಿ ಬಿಡುತ್ತಾರೆ.. ಆದರೇ ಮಕ್ಕಳ ಬೌದ್ಧಿಕ, ಮಾನಸಿಕ, ಭಾವನಾತ್ಮಕ ಪರಿಸ್ಥಿತಿಯನ್ನು ಅರಿತುಕೊಳ್ಳಲು ವಿಫಲರಾಗಿಗಿದ್ದೇವೆ ಎಂದು ಆತಂಕ ವ್ಯಕ್ತಪಡಿಸಿದರು. ಈ ಹಿಂದೆ ದೇಶದಲ್ಲಿ ಸಾವಿರಾರೂ ಗುರುಕುಲಗಳಿದ್ದವು, ಅಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಸಂಸ್ಕಾರ ನೀಡುವ ಜೊತೆಗೆ ಅವರ ಸಮಗ್ರ ಬೆಳವಣಿಗೆಗೆ ಪೂರಕವಾಗಿ ಶೈಕ್ಷಣಿಕ ವ್ಯವಸ್ಥೆ ಹಾಗೂ ದೇಶಾಭಿಮಾನ, ಕಲಿಕೆಗೆ ಮೊದಲು ಆದ್ಯತೆ ಇತ್ತು, ಆದರೆ ಅದು ಕ್ರಮೇಣ ಜಾಗತೀಕರಣದ ಪ್ರಭಾವದಿಂದ ಕೆಟ್ಟ ಪರಿಣಾಮ ಬೀರಿ ಕಡಿಮೆ ಪ್ರಮಾಣದಲ್ಲಿ ಕಾಣುತ್ತೇವೆ, ಇದನ್ನು ಅರಿತು ನಾವೂ ಈ ಶಿಬಿರದಲ್ಲಿ ಯೋಗಾಸನ, ಪ್ರಾಣಾಯಾಮ, ಧ್ಯಾನ-ಜ್ಞಾನ, ಮಂತ್ರ ಪಠಣ, ವ್ಯಕ್ತಿತ್ವ ವಿಕಾಸ, ಜವಾಬ್ದಾರಿ, ನಾಯಕತ್ವ ಗುಣ, ಸಕರಾತ್ಮಕ ದೃಷ್ಟಿಕೋನ, ಆತ್ಮ ವಿಶ್ವಾಸ, ವಿನೋದ ಕ್ರೀಡೆ ಹೀಗೆ ಹಲವೂ ವಿಚಾರಗಳನ್ನು ಒಳಗೊಂಡ ಭಾರತೀಯ ಸಂಸ್ಕೃತಿ-ಸಂಪ್ರದಾಯದ ಪುರಾತನ ಸನಾತನ ಧರ್ಮದ ವಿಚಾರಗಳನ್ನೊಳಗೊಂಡ ಗುರುಕುಲ ಪದ್ದತಿಯಂತೆ ನಡೆಯಲಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಕ್ಕಳು, ಪಾಲಕರು-ಪೋಷಕರು, ಶಿಬಿರಾರ್ಥಿಗಳು, ಉಪಸ್ಥಿತರಿದ್ದರು.

ಮೇ.9ರಿಂದ ಪ್ರಾರಂಭವಾಗುವ 3ನೇ ಬ್ಯಾಚ್‌ನ ನೋಂದಣಿಗಾಗಿ ತಕ್ಷಣ ಸಂಪರ್ಕಿಸಿ: 9964233272 / 9535828344

## ನೆಲ ಜಲ ಹೋರಾಟದ ಜೊತೆಗೆ ಸಂಸ್ಕೃತಿ, ಸಾಹಿತ್ಯ ಪ್ರತಿಭಾ ಪುರಸ್ಕಾರಗಳು ನೀಡುವ ಕರವೇ ಕಾರ್ಯ ಶ್ಲಾಘನೀಯ:ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜೀವನದಲ್ಲಿ ಯಶಸ್ಸು ಕಾಣಲು ಛಲ, ಗುರಿ, ಸಾಧಿಸುವ ಹಂಬಲ ಇರಬೇಕು ಎಂದು ಜಿಲ್ಲಾ ಸಶಸ್ತ್ರ ಮೀಸಲು ಪಡೆ ಡಿವೈಎಸ್ಪಿ ಭರತಕುಮಾರ್ ತಳವಾರ್ ಅಭಿಪ್ರಾಯಪಟ್ಟರು.

ನಗರದ ಕಸಾಪ ಭವನದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕವತಿಯಿಂದ ದ್ವಿತೀಯ ಪಿಯುಸಿ ಪರೀಕ್ಷೆಯ ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಪಡೆದು ಜಿಲ್ಲೆಗೆ ಕೀರ್ತಿ ತಂದಿರುವ 30 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿ ದೆಸೆಯಲ್ಲಿಯೇ ಈ ಗುಣಗಳನ್ನು ಬೆಳೆಸಿಕೊಂಡವರು ಜೀವನದಲ್ಲಿ ದೊಡ್ಡ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿ ಒಬ್ಬ ಜೋತಿಷಿಗೆ ಭವಿಷ್ಯ ಕೇಳಿದ. ನಿನ್ನ ಭವಿಷ್ಯದಲ್ಲಿ ವಿಶ್ವಗೆಲ್ಲುವ ರೇಖೆ ಇಲ್ಲ ಎಂದು ಹೇಳಿದಾಗ ತನ್ನ ಕೈಯಲ್ಲಿ ಚಾಕುವಿನಿಂದ ದೊಡ್ಡ ಗೆರೆ ಎಳೆದುಕೊಂಡು ತೋರಿಸಿ ನೋಡಿ ಈಗ ನನ್ನ ಕೈಯಲ್ಲಿ ರೇಖೆ ಬಂದಿದೆ ನಾನು ವಿಶ್ವವನ್ನೇ ಗೆಲ್ಲುತ್ತೇನೆ ಎಂದ.

ಹಾಗೆಯೇ ಮುಂದೆ 40ವರ್ಷದಲ್ಲಿಯೇ ಜಗತ್ತನ್ನು ಗೆದ್ದ ಆ ಬಾಲಕನೇ ಅಲೆಕ್ಸಾಂಡರ್ ಎಂದು ವಿವರಿಸಿ ವಿದ್ಯಾರ್ಥಿಗಳು ಇದೇ ಮಾದರಿಯಲ್ಲಿ ಶಿಕ್ಷಣ ಪಡೆದು ಸಾಧನೆ ಮಾಡಬೇಕುಎಂದು ಸಲಹೆ ನೀಡಿದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ವಹಿಸಿದ್ದ ನೇರಡಗಂ ಮ.ನಿ.ಪ್ರ ಪಂಚಮ ಸಿದ್ದಲಿಂಗ ಮಹಾಸ್ವಾಮಿಗಳು ಮಾತನಾಡಿ, ವಿದ್ಯಾರ್ಥಿಗಳು ಸಾಧನೆಯೇ ತಪಸ್ಸಾಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಕರವೇ ಜಿಲ್ಲಾಧ್ಯಕ್ಷರಾದ ಟಿ.ಎನ್. ಭೀಮುನಾಯಕ ಮಾತನಾಡಿ, ಕರ್ನಾಟಕ ರಕ್ಷಣಾ ವೇದಿಕೆ ಕೇವಲ ನಾಡು ನುಡಿ ನೆಲ ಜಲ ಕ್ಕಾಗಿ ಹೋರಾಟ ಮಾಡುವುದಷ್ಟೇ ಅಲ್ಲ ಸಾಂಸ್ಕೃತಿಕವಾಗಿ, ಸಾಹಿತ್ಯಕವಾಗಿ ಸಾಮಾಜಿಕವಾಗಿ ಕಾರ್ಯಕ್ರಮಗಳು ಆಯೋಜಿಸುತ್ತಾ ಬರುತ್ತಿದ್ದು, ಪ್ರತಿಭಾವಂತ ಮಕ್ಕಳಿಗೆ ಪ್ರೋತ್ಸಾಹಿಸುವ ಪ್ರತಿಭಾ ಪುರಸ್ಕಾರ ಆಯೋಜಿಸುವ ಮೂಲಕ ಕನ್ನಡ ತಾಯಿ ಸೇವೆಯಲ್ಲಿ ತೊಡಗಿಸಿಕೊಂಡಿದೆ ಎಂದು ಹೇಳಿದರು.

ಮುಂಬರುವ ದಿನಗಳಲ್ಲಿ ಜಿಲ್ಲೆಯ ಶೈಕ್ಷಣಿಕ ಪ್ರಗತಿಗಾಗಿ ಅತಿಥಿಗಳು ಸೂಚಿಸಿದ ಕೆಲ ಅಗತ್ಯ ಕ್ರಮಗಳನ್ನು ಆರಂಭಿಕ ಹಂತದಲ್ಲಿ ಕೈಗೊಳ್ಳುತ್ತೇವೆ ಎಂದು ಅವರು ಭರವಸೆ ನೀಡಿದರು.

ಕನ್ನಡಾಂಬೆ ಭಾವಚಿತ್ರ ಪೂಜೆಯನ್ನು ನೆರವೇರಿಸಿದ ನಗರಸಭೆ ಮಾಜಿ ಅಧ್ಯಕ್ಷೆ ಶ್ರೀಮತಿ ನಾಗರತ್ನ ಅನಪೂರ ಮಾತನಾಡಿ ಸಾಧಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಇಂತಹ ಕಾರ್ಯಕ್ರಮ ಆಯೋಜನೆ ಮಾಡಿದ ಕರವೇ ಕಾರ್ಯ ಶ್ಲಾಘನೀಯ ಎಂದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಕುಳಗೇರಿ ಮಾತನಾಡಿ, ಜಿಲ್ಲೆಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಅತ್ಯುತ್ತಮ ಫಲಿತಾಂಶ ಹಾಗೂ ಕಾರ್ಯನಿರ್ವಹಣೆ ಇದೆ ಆದರೆ ಸರ್ಕಾರಿ ಪಿಯು ಕಾಲೇಜುಗಳಲ್ಲಿ ಗುಣಮಟ್ಟ ಉಳಿದಿಲ್ಲ ಇದ-ಕ್ಕೆ ಕಾರಣ ಸಿಬ್ಬಂದಿ ಕೊರತೆ, ಪಾಲಕರ ನಿರ್ಲಕ್ಷ್ಯ, ವಿದ್ಯಾರ್ಥಿಗಳಲ್ಲಿ ಗಂಭೀರವಾಗಿ ಓದಬೇಕೆಂಬ ಆಕಾಂಕ್ಷೆ ಇಲ್ಲದಿರುವುದು ಕಾರಣವಾಗಿವೆ ಎಂದು ವಿವರಿಸಿ ಇವುಗಳನ್ನು ತೊಡೆಯಲು ಸರ್ಕಾರ ಜೊತೆಗೆ ಜನತೆ ಶ್ರಮಿಸಬೇಕೆಂದು ಸಲಹೆ ನೀಡಿದರು.

ವಕೀಲರ ಸಂಘದ ಅಧ್ಯಕ್ಷರಾದ ಶ್ರೀ ಸಿ.ಎಸ್. ಮಾಲಿಪಾಟೀಲ್, ಕೆಬಿಜೆಎನ್‌ಎಲ್ ಸಹಾಯಕ ಅಭಿಯಂತರು ಲೋಹಿತ್ ಕುಮಾರ, ಐಎಂಎ ಅಧ್ಯಕ್ಷರಾದ ಡಾ। ಚಂದ್ರಕಾಂತ ಪೂಜಾರಿ ಮಾತನಾಡಿ ಕರವೇ ಕಾರ್ಯಕ್ಕೆ ಮುಕ್ತಕಂಠದಿಂದ ಶ್ಲಾಘಿಸಿದರು. ಲೀಡ್ ಬ್ಯಾಂಕ್‌ನ ರಾಜ್ ಕುಮಾರ ವೇದಿಕೆ ಮೇಲಿದ್ದರು.

ಇದೇವೇಳೆ 30ಜನ ಜಿಲ್ಲೆಯ ಪಿಯುಸಿಯಲ್ಲಿ ಗರಿಷ್ಟ ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದು ನಾಯಕ ಹತ್ತಿಕುಣಿ ಸ್ವಾಗತಿಸಿ, ನಿರೂಪಿಸಿದರು.

ಕರವೇ ಮುಖಂಡರಾದ ಮಲ್ಲು ಮಾಳಿಕೇರಿ, ಯಮುನಯ್ಯ ಗುತ್ತೇದಾರ, ಕರವೇ ವಿದ್ಯಾರ್ಥಿ ಘಟಕ ಜಿಲ್ಲಾಧ್ಯಕ್ಷ ವಿಶ್ವರಾಜ ಪಾಟೀಲ್, ಪ್ರಕಾಶ ಪಾಟೀಲ್ ಜೈಗ್ರಾಮ್, ಸಾಹೇಬಗೌಡ ನಾಯಕ, ಶರಣಪ್ಪ ದಳಪತಿ, ಶರಣು ಸಾಹುಕಾರ, ಶರಣಬಸಪ್ಪ ಯಲ್ಹೇರಿ, ಅಬ್ದುಲ್ ಚಿಗಾನೂರ, ಬಸವರಾಜ ಚೆನ್ನೂರ, ಸಿದ್ದಪ್ಪ ಕೊಯಿಲೂರ, ಭೀಮರಾಯ ಕೋಳಿ, ಸಿದ್ದಪ್ಪ ಕ್ಯಾಸಪನಳ್ಳಿ, ಸುರೇಶ ಬೆಲಗುಂದಿ, ಮಲ್ಲಿಕಾರ್ಜುನ ಕನ್ನಡಿ, ಕಾಶಿನಾಥ ನಾನೇಕ, ಲಿಂಗಾರಡ್ಡಿ, ನಾಗು ತಾಂಡೂರಕರ್, ವಿಜಯ ರಾಠೋಡ, ಸೈದಪ್ಪ ಗೌಡಗೇರಾ, ಸುಭಾಸ ಯರಗೋಳ, ಮಂಜು ನಾಯ್ಕೋಡಿ, ಶರಣು ಬಂದಳ್ಳಿ, ಯಲ್ಲು ಚಾಮನಳ್ಳಿ, ನಾಗು ಕುಂಬಾರ ಇನ್ನಿತರರು ಇದ್ದರು.

## ಕೃಷಿ ಪರಿಕರಗಳ ಮಾರಾಟಗಾರರ ಸಂಘದ ರಾಜ್ಯಾಧ್ಯಕ್ಷರಾಗಿ ಮರಕಲ್ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ


ಯಾದಗಿರಿ : ಕರ್ನಾಟಕ ರಾಜ್ಯ ಕೃಷಿ ಪರಿಕರಗಳ ಮಾರಾಟಗಾರರ ಸಂಘ(ರಿ) ಬೆಂಗಳೂರ ಯುನಿಯನ್‌ನ ರಾಜ್ಯಾಧ್ಯಕ್ಷರಾಗಿ ಜಿಲ್ಲಾ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷರಾಗಿರುವ ಬಸನಗೌಡ ಮಾಲಿ ಪಾಟೀಲ್ ಮರಕಲ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ,

ಮಂಗಳವಾರ ಬೆಂಗಳೂರಿನ ಯುನಿಯನ್ ಕೇಂದ್ರಕಛೇರಿಯಲ್ಲಿ ನಡೆದ ಸಂಘದ ಸಭೆಯಲ್ಲಿ ಭಾಗವಹಿಸಿದ್ದ ರಾಜ್ಯದ 31 ಜಿಲ್ಲೆಗಳಿಂದ ಆಗಮಸಿದ ಪ್ರತಿನಿಧಿಗಳು ಸಭೆಯಲ್ಲಿ ಚರ್ಚಿಸಿ, ಸರ್ವಾನುಮತದಿಂದ ಮರಕಲ್ ಅವರನ್ನು ಮುಂದಿನ 3 ವರ್ಷಗಳ ಅವಧಿಗೆ ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿದರು.

ಸಂಘಕ್ಕೆ ರಾಜ್ಯಾದ್ಯಂತ 34 ಸಾವಿರಕ್ಕೂ ಹೆಚ್ಚು ಸದಸ್ಯರಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಮಾತನಾಡಿದ ಮರಕಲ್, ನಾನು ಕಳೆದ ಯಾದಗಿರಿ ಜಿಲ್ಲೆಯಲ್ಲಿ 3 ದಶಕಗಳಿಂದ ಕೃಷಿ ಪರಿಕರಗಳ ಮಾರಾಟಗಾರನಾಗಿ ಕೆಲಸ ಮಾಡಿ, ಅಪಾರ ಅನುಭವ ನಿಮ್ಮೇಲ್ಲರಿಂದ ಸಿಕ್ಕಿದೆ, ಎಲ್ಲಾ ಜಿಲ್ಲೆಗಳ ಪ್ರಮುಖ ಪ್ರತಿನಿಧಿಗಳು, ಪರಿಚಿತರು ಬರುವ ದಿನಗಳಲ್ಲಿ ನಾನು ಪ್ರಾಮಾಣಿಕವಾಗಿ ಕೆಲಸ ಮಾಡಿ, ಸಂಘಕ್ಕೆ ಹಾಗೂ ರೈತರಿಗೆ ಒಳಿತನ್ನು ಮಾಡುತ್ತೇನೆ ಎಂದು ಹೇಳಿದರು,

ಈ ಸಂದರ್ಭದಲ್ಲಿ ಸಂಘದ ಸದಸ್ಯರಾಗಿ ಬಸವರಾಜ ಮಂಗಲಗಿ ಕಲಬುರಗಿ, ಮಡಿವಾಳಪ್ಪ ಗಂಗಶೆಟ್ಟಿ ಬೀದರ, ತಿಮ್ಮನಗೌಡ ಬಳ್ಳಾರಿ, ಬಸವರಾಜ ಕೋರಿ ವಿಜಯಪುರ, ಐನಾಥರಡ್ಡಿ ಬಳ್ಳಾರಿ, ಕೆ.ವಿ ಮಂಜುನಾಥ ಚಿಕ್ಕಬಳ್ಳಾಪೂರ, ಮಹಾಬಲ ಚಿಕ್ಕಮಂಗಳೂರ, ಉಮಾಪತಿ ದಾವಣಗೆರೆ, ಸುಹಾಸ್ ಹುಬ್ಬಳ್ಳಿ, ಗುರುಪಾದಪ್ಪ ಗಂಗಾವತಿ, ಮಲ್ಲಿಕಾರ್ಜುನ ಬೆಳ್ಳೇರಿ ಬೆಳಗಾಂವ, ಮೋಹನ ಹಂದ್ರಾಳ ಬಾಗಲಕೋಟ, ಅಶೋಕ ಗಾಣಿಗೇರ ಬಾಗಲಕೋಟ, ಯೋಗರಾಜ ಚಾಮರಾಜನಗರ, ಶ್ರೀಧರಶೆಟ್ಟಿ ಹೊಸಪೇಟ್, ಫಿರೋಜ್ ಕೋಲಾರ, ಅಶೋಕರಡ್ಡಿ ಲಿಂಗದಳ್ಳಿ, ಶರಣಬಸ್ಸು ದಿಗ್ಗಾಂವಿ ಕೆಂಭಾವಿ, ದೇವಾನಂದ ಪಾಟೀಲ್, ಸಂಗನಗೌಡ ಮಡ್ನಾಳ, ರಾಜುಗೌಡ ಉಕ್ಕಿನಾಳ ಸೇರಿದಂತೆ ಬಹುತೇಕ ಸದಸ್ಯರು ಉಪಸ್ಥಿತರಿದ್ದರು.

## ಮೃತ ಕುಟುಂಬಕ್ಕೆ ಶಾಸಕ ನಾಡಗೌಡ ಪರಿಹಾರ ಚೆಕ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಏಪ್ರಿಲ್ 27ರಂದು ಸಿಡಿಲು ಬಡಿತದಿಂದ ಮೃತರಾದ ರೈತ ಅಯ್ಯಣ್ಣ ಸಜ್ಜನ ಇವರ ಕುಟುಂಬಕ್ಕೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಶಾಸಕ ಅಪ್ಪಾಜಿ ನಾಡಗೌಡರು ಸಾಂತ್ವನ ಹೇಳಿ ಸರ್ಕಾರದಿಂದ ಬಿಡುಗಡೆಗೊಂಡ ರೂ.5 ಲಕ್ಷ ಮೊತ್ತದ ಚೆಕ್ ನ್ನು ಮೃತರ ಧರ್ಮಪತ್ನಿ ಶ್ರೀಮತಿ ಸುವರ್ಣಾ ಸಜ್ಜನ ಇವರಿಗೆ ಹಸ್ತಾಂತರಿಸಿದರು. ಮಂಗಳವಾರ ಬಳಗಾನೂರ ಗ್ರಾಮಕ್ಕೆ ಭೇಟಿ ನೀಡಿದ ಶಾಸಕ ಅಪ್ಪಾಜಿ ನಾಡಗೌಡರು ಮೃತ ರೈತನ ಪತ್ನಿ ಹಾಗೂ ಅವರ ಕುಟುಂಬದ ಸದಸ್ಯರಿಗೆ ಸಾಂತ್ವನ ತಿಳಿಸಿ ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಮೃತ ರೈತ ಅಯ್ಯಣ್ಣ ಸಜ್ಜನ ಅವರ ಅಕಾಲಿಕ ನಿಧನದಿಂದಾಗಿ ಅವರ ಕುಟುಂಬಕ್ಕೆ ತುಂಬಾ ತೊಂದರೆಯಾಗಿದೆ. ಏಕೆಂದರೆ ಅವರು ತಮ್ಮ ಕುಟುಂಬಕ್ಕೆ ಆಧಾರ ಸ್ತಂಭವಾಗಿದ್ದರು. ಆದರೆ ಇದು ವಿಧಿ ಲಿಖಿತ ಇದಕ್ಕೆ ಕುಟುಂಬದ ಸದಸ್ಯರು ಧೈರ್ಯ ತೆಗೆದುಕೊಳ್ಳಬೇಕು ಈ ಸಂಕಷ್ಟದ ಸಮಯದಲ್ಲಿ ಅವರ ಜೊತೆ ನಾನೂ ಇದ್ದೇನೆ ಎಂದರು. ಈ ಸಮಯದಲ್ಲಿ ತಹಸಿಲ್ದಾರ್ ಡಾ.ವಿನಯಾ ಹೂಗಾರ, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಿದ್ದನಗೌಡ ಪಾಟೀಲ(ನಾವದಗಿ), ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ, ಸಂಗನಗೌಡ ಅಸ್ಕಿ, ಗ್ರಾಮದ ಗಣ್ಯರಾದ ಮಲ್ಲಣ್ಣ ದೋರನಹಳ್ಳಿ, ಚನ್ನಣ್ಣ ದೇಸಾಯಿ ಪ್ರಭುಗೌಡ ಬಿರಾದಾರ, ಎಸ್.ಐ. ಕಡಕೋಳ, ಆರ್.ಎಸ್.ವಾಲಿಕಾರ, ಅಮರಪ್ಪ ಬಿರಾದಾರ ಹಾಗೂ ಗ್ರಾಮಸ್ಥರು ಇದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:
9449732000

## ಬಾಲಕಿಯ ಸಾಧನೆಗೆ ಮಾರುತಿ ತೋಟಗಂಟಿ ಪ್ರಶಂಸೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ತಾಲೂಕಿನ ಯಲ್ಮಗೇರಿ ಗ್ರಾಮದಲ್ಲಿ ಇಂದು ಕಾಂಗ್ರೆಸ್ ಮುಖಂಡರಾದ ಮಾರುತಿ ತೆ-ೂಟಗಂಟಿ ಆಗಮಿಸಿ 2024 25 ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಧರ್ಮ ಜಾನಕಿ ಭೋಜಪ್ಪ ನಾಯಕ್ ವಿದ್ಯಾರ್ಥಿ ವಾಣಿಜ್ಯ ವಿಭಾಗದಲ್ಲಿ ಫಲಿತಾಂಶ ಶೇಕಡ 96,06 ಅಂಕ ಪಡೆದ ಇರಕಲ್ ಗಡ ಪದವಿ ಪೂರ್ವ ಕಾಲೇಜಿಗೆ ಪ್ರಥಮ ಸ್ಥಾನ ಗಳಿಸಿದ ವಿದ್ಯಾರ್ಥಿಗೆ ಸನ್ಮಾನ ಸಮಾರಂಭವನ್ನು ಏರ್ಪಡಿಸಿದ್ದರು .ಈ ಸಂದರ್ಭದಲ್ಲಿ ಮಾತನಾಡಿದ ಮಾರುತಿ ತೋಟಗಂಟಿ ಧರ್ಮ ಜಾನಕಿ ಭೋಜಪ್ಪ ನಾಯಕ್ ಎಂಬ ವಿದ್ಯಾರ್ಥಿ ಪ್ರಥಮ ಸ್ಥಾನ ಗಳಿಸಿದ್ದಕ್ಕೆ ನಮ್ಮ ಊರಿನ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಹೇಳಿದರು ಮತ್ತು ಈಗಿನ ಕಾಲದಲ್ಲಿ ಮಕ್ಕಳನ್ನು ಖಾಸಗಿ ಶಾಲೆಗೆ ಸೇರಿಸಿ ಲಕ್ಷ ಲಕ್ಷ ದುಡ್ಡು ಹಾಳು ಮಾಡಿಕೊಳ್ಳುವವರನ್ನು ನೋಡಿದ್ದೇವೆ ಆದರೆ ಧರ್ಮ ಜಾನಕಿ ಭುಜಪ್ಪ ವಿದ್ಯಾರ್ಥಿ ಸರ್ಕಾರಿ ಕಾಲೇಜಿನಲ್ಲಿ ಓದಿ ಇಷ್ಟು ಅಂಕ ಪಡೆದಿರುವುದು ಕಾಲೇಜಿಗೆ ಮತ್ತು ಊರಿಗೆ ಎಲ್ಲರಿಗೂ ಮಾದರಿಯಾಗಿದೆ ಎಂದು ಹೇಳಿದರು ವಿದ್ಯಾರ್ಥಿಯ ಮುಂದಿನ ಭವಿಷ್ಯಕ್ಕಾಗಿ ನಾವೆಲ್ಲರೂ ತನುಮನ ಧನದಿಂದ ಶ್ರಮಿಸೋಣ ಎಂದು ಹೇಳಿದರು ಈ ಸಂದರ್ಭದಲ್ಲಿ ಶಂಕರ್ ನಾಯಕ್ ಕಾಂಗ್ರೆಸ್ ಮುಖಂಡರು ಮತ್ತು ಪ್ರದೀಪ್ ಕುಮಾರ್ ಸೋಮು ನಾಯಕ್ ಕೃಷ್ಣ ಗ್ರಾಮ ಪಂಚಾಯತ್ ಮಾಜಿ ಸದಸ್ಯರು ಊರಿನ ಸಮಸ್ತ ಜನರು ಭಾಗವಹಿಸಿದ್ದರು.

## ಮೈಲಾಪುರದಲ್ಲಿ ಪರಿಸರ ಸ್ವಚ್ಚತೆಗೆ ಭಕ್ತರ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಉತ್ತರ ಕರ್ನಾಟಕದ ಪ್ರಮುಖ ಧಾರ್ಮಿ ಕ್ಷೇತ್ರಗಳಲ್ಲಿ ಒಂದಾದ ಯಾದಗಿರಿ ತಾಲ್ಲೂಕಿನ ಮಲ್ಲಯ್ಯನ ಕ್ಷೇತ್ರದಲ್ಲಿ ಪರಿಸರ ಸ್ವಚ್ಚತೆ ಎಂಬುದು ಮರಿಚಿಕೆಯಾಗಿದೆ, ಜಿಲ್ಲಾಡಳಿತ ಮೊದಲು ಸ್ವಚ್ಚತೆ-ಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ,

ರವಿವಾರ ವಿಶೇಷ ಅಮವಾಸೆ ಇತ್ತು, ಕ್ಷೇತ್ರಕ್ಕೆ ಕರ್ನಾಟಕ, ಆಂದ್ರಪ್ರದೇಶ, ಮಹಾರಾಷ್ಟ್ರದ ನಾನಾ ಭಾಗಗಳಿಂದ ಸಹಸ್ರಾರು ಭಕ್ತರು ಮೈಲಾಪುರಕ್ಕೆ ಆಗಮಿಸಿದರು,

ಅಲ್ಲಿನ ಪರಿಸರ ಗಮನಿಸಿದ ಭಕ್ತರಲ್ಲಿ ಅಪಾರ ನೋವುಂಟಾಗಿ ಪ್ರತಿ ವರ್ಷ ಮೈಲಾರಲಿಂಗೇಶ್ವರನ ದೇವಸ್ಥಾನದಿಂದಲೇ ಧಾರ್ಮಿಕ ದತ್ತಿ ಇಲಾಖೆಗೆ ನಾನಾ ಮೂಲಗಳಿಂದ 2 ಕೋಟಿಗೂ ಅಧಿಕ ಹಣ ಜಮವಾಗುತ್ತದೆ, ಆದರೆ ಇಲ್ಲಿ ಜಿಲ್ಲಾಡಳಿತ ಭಕ್ತರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಲ್ಲಿ ವಿಫಲವಾಗಿದೆ, ಅಲ್ಲದೇ ಎಲ್ಲಿ ನೋಡಿದರು ದುರ್ವಾಸನೆ, ಈ ಪರಿಸ್ಥಿತಿ ಮುಂದುವರೆದರೇ ಕ್ಷೇತ್ರಕ್ಕೆ ಭಕ್ತರ ಭೇಟಿ ಸಂಖ್ಯೆ ಕಡಿಮೆಯಾಗುತ್ತದೆ, ಕೂಡಲೇ ಜಿಲ್ಲಾಧಿಕಾರಗಳು ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ವಿಶೇಷ ತಂಡ ರಚನೆ ಮಾಡಿ, ದೇವಸ್ಥಾನ ಸುತ್ತ-ಮುತ್ತ ಸುಚಿಗೊಳಿಸಿ, ಉತ್ತಮ ವಾತಾವರಣ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

### ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ:2025

## ವ್ಯವಸ್ಥಿತ ಸಮೀಕ್ಷಾ ಕಾರ್ಯ ಕೈಗೊಳ್ಳಿ: ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.29–ನ್ಯಾ.ಹೆಚ್.ಎನ್.ನಾಗಮೋಹನ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ ಕಾರ್ಯವು ಮೇ 05 ರಿಂದ 23 ರ ವರೆಗೆ 03 ಹಂತಗಳಲ್ಲಿ ನಡೆಯಲಿದ್ದು, ಸಮೀಕ್ಷೆ ಕಾರ್ಯವನ್ನು ವ್ಯವಸ್ಥಿತವಾಗಿ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ನಿರ್ದೇಶನ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ರಾಜ್ಯ ಮಟ್ಟದಲ್ಲಿ ತರಬೇತಿ ಪಡೆದ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್‌ಗಳಿಂದ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಾಸ್ಟರ್ ಟ್ರೈನರ್‌ಗಳಿಗೆ ಮತ್ತು ತಾಂತ್ರಿಕ ಅಧಿಕಾರಿಗಳಿಗೆ ಸೋಮವಾರ ನಗರದ ಜಿಪಂ ಸಭಾಂಗಣದಲ್ಲಿ ಏರ್ಪಡಿಸಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಜನಾಂಗದ ಕುಟುಂಬಗಳ ಸಮಗ್ರ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ಕೈಗೊಳ್ಳಲು ಸರ್ಕಾರ ನಿರ್ದೇಶಿಸಿದ್ದು, ವ್ಯವಸ್ಥಿತವಾಗಿ ಯಾವುದೇ ಕುಟುಂಬ ಈ ಸಮೀಕ್ಷೆಯಿಂದ ವಂಚಿತರಾಗದಂತೆ ಕೈಗೊಳ್ಳಬೇಕು. ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆಯನ್ನು ಯಾವುದೇ ಲೋಪವಿಲ್ಲದೆ ವ್ಯವಸ್ಥಿತವಾಗಿ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಮೇ 09 ರಿಂದ 17 ರವರೆಗೆ ಸಮೀಕ್ಷೆದಾರರು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷಾ ಭೇಟಿಯ ಉದ್ದೇಶ ಮನವರಿಕೆ ಮಾಡಿ ಮೊಬೈಲ್ ಆಪ್ ನಲ್ಲಿಯೇ ಮಾಹಿತಿಯನ್ನು ಬ್ಲಾಕ್ ಆಧಾರದಲ್ಲಿ ತಲಾ 300 ಮನೆಗಳ ಕುಟುಂಬಗಳ ಮಾಹಿತಿ ಸಂಗ್ರಹಿಸಬೇಕು. ನಂತರ ಮೇ 19 ರಿಂದ 21 ರವರೆಗೆ ಸಮೀಕ್ಷೆಯಲ್ಲಿ ಕೈಬಿಟ್ಟು ಹೋದ ಕುಟುಂಬಗಳನ್ನು ಗುರುತಿಸಿ ಮಾಹಿತಿ ಸಂಗ್ರಹಿಸಬೇಕು. ಇದರಲ್ಲಿಯೂ ಬಿಟ್ಟು ಹೋದ ಕುಟುಂಬಗಳಿದ್ದಲ್ಲಿ ಆನ್ ಲೈನ್ ಮೂಲಕ ಸಂಬಂಧಪಟ್ಟ ಜನಾಂಗದವರು ತಾವಾಗಿಯೇ ಸಮೀಕ್ಷೆಯಡಿ ಮಾಹಿತಿ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕಾರಣ ಸಮೀಕ್ಷೆದಾರರು ಮತ್ತು ಸಂಬಂಧಿಸಿದ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದರು.

ಸಮೀಕ್ಷೆಯ ಮೇಲ್ವಿಚಾರಣೆಗಾಗಿ ರಾಜ್ಯ ಮಟ್ಟದಲ್ಲಿ ಸಮಿತಿ ಇದ್ದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಇದೆ. ರಾಜ್ಯದಲ್ಲಿ ಗುರುತಿಸಿದ 101 ಪರಿಶಿಷ್ಟ ಜಾತಿಗಳ ಜಣಗಣತಿ ನಡೆಯುತ್ತಿದ್ದು, ಇದರ ಅಂಗವಾಗಿ ಜಿಲ್ಲೆಯಲ್ಲಿ ವ್ಯವಸ್ಥಿತವಾಗಿ ಯಾವುದೇ ಲೋಪವಿಲ್ಲದೆ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ.ಬಿ ರಾಜ್ಯಮಟ್ಟದಲ್ಲಿ ತರಬೇತಿ ಪಡೆದ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್‌ಗಳಾದ ಸಯ್ಯದ್ ಭಾಷಾ, ಮಲ್ಲಿಕಾರ್ಜುನ, ಕೆ.ಎಸ್.ಶಬರೀಶ್ ಗುಪ್ತ, ಸೇರಿದಂತೆ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್‌ಗಳು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

## ಮೇ. 1 ಕ್ಕೆ ಪಪ್ಪಿ ಸಿನಿಮಾ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಸದ್ದು ಮಾಡುತ್ತಿರುವ ಕನ್ನಡ ಸಿನಿಮಾ ಪಪ್ಪಿ ಮೇ.1ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ ಎಂದು ಚಿತ್ರದ ನಿರ್ದೇಶಕ ಆಯುಷ್ ಮಲ್ಲಿ ಹೇಳಿದರು.


ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ಸಿನಿಮಾ ಉತ್ತರ ಕರ್ನಾಟಕ ಭಾಷೆಯ ಸೊಗಡಿನಲ್ಲೇ ಮೂಡಿಬಂದಿದೆ. ಅದರಲ್ಲೂ ತಿರುಳ್ಗನ್ನಡ ನಾಡು ಎನಿಸಿರುವ ಕೊಪ್ಪಳದ ಭಾಷೆಯನ್ನೇ ಬಳಸಿರುವುದು ವಿಶೇಷ. ಬಿ ಬಿ ಸಂಕನೂರ್ ಅವರ ಬ್ಯಾನರ್ ನ ಅಡಿಯಲ್ಲಿ, ನಮ್ಮ ಗಜೇಂದ್ರಗಡದ ಅಂದಪ್ಪ ಸಂಕಾನೂರ್ ಅವ್ರ ನಿರ್ಮಾಣದಲ್ಲಿ ಮೂಡಿಬಂದಿರುವ "ಪಪ್ಪಿ" ಚಿತ್ರ ಇದೇ ಮೇ 1ರಂದು ರಾಜ್ಯದ್ಯಂತ ಸುಮಾರು 75 ಚಿತ್ರ ಮಂದಿರಗಳಲ್ಲಿ ತೆರೆ ಕಾಣಲಿದೆ ಎಂದರು.

ಈ ಚಿತ್ರಕ್ಕೆ ಖ್ಯಾತ ಛಾಯಾಗ್ರಾಹಕ ಸುರೇಶ್ ಬಾಬು ರವರ ಕ್ಯಾಮೆರಾ ಕೈಚಳಕವಿದ್ದು, ಎನ್ ಎಂ ವಿಶ್ವ ದೋಣಿ ಅವರ ಸಂಕಲನ, ಶ್ರೀಧರ್ ಕಶ್ಯಪ್ ರವರ ಸಂಗೀತ, ಹಾಗೂ ಕಮಲ್ ಗೋಯೆಲ್ ರವರು ಈ ಚಿತ್ರದ ಗ್ರೇಡಿಂಗ್ ಕೆಲಸವನ್ನು ಮಾಡಿದ್ದಾರೆ, ಸಿನಿಮಾದಲ್ಲಿ ಬಾಲ ನಟರಾದ ಹಾಲವರ್ತಿಯ ಜಗದೀಶ್ ಹಾಗೂ ಸಿಂಧನೂರಿನ ಆದಿತ್ಯ ಮುಖ್ಯ ಪಾತ್ರದಲ್ಲಿ ಅಭಿನಯಿಸಿದ್ದಾರೆ, ಇನ್ನು ಕೊಪ್ಪಳದ ದುರುಗಪ್ಪ ಕಾಂಬ್ಳಿ ಹಾಗೂ ರೇಣುಕಾ ದೇಸಾಯಿ ರವರು ಕೂಡ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ ಎಂದು ವಿವರಿಸಿದರು.

ಇಬ್ಬರು ಬಾಲಕರು ಹಾಗೂ ಸಣ್ಣ ಶ್ವಾನವೊಂದರ ಸುತ್ತ ಸಾಗುವ ಕತೆಯಾಗಿದ್ದು. ಈ ಚಿತ್ರವನ್ನು ಈಗಾಗಲೇ ಧ್ರುವ ಸರ್ಜಾ ರವರು ನೋಡಿ ಮೆಚ್ಚುವುದಲ್ಲದೆ, ಅವರೇ ಅರ್ಪಿಸುತ್ತಿರುವುದು ತುಂಬ ವಿಶೇಷ. ಕೆ ಆರ್ ಜಿ ಸಂಸ್ಥೆಯು ಈ ಚಿತ್ರವನ್ನು ವಿತರಿಸುತ್ತಿರುವುದು ನಮ್ಮ ಚಿತ್ರ ತಂಡಕ್ಕೆ ಒಂದು ಬಲ ಬಂದಂತಾಗಿದೆ, ಕುಟುಂಬ ಸಮೇತ ಸಿನಿಮಾ ನೋಡಿ, ಚಿತ್ರತಂಡವನ್ನು ಹರಸುವಂತೆ ಕೋರಿದರು.

ಸುದ್ದಿಗೋಷ್ಠಿಯಲ್ಲಿ ಬಾಲನಟರಾದ ಜಗದೀಶ್, ಆದಿತ್ಯ ಇತರರಿದ್ದರು.

## ಔರಾದ್ : ಕಸಾಪ ವಲಯ ಘಟಕ ಅಧ್ಯಕ್ಷರ ನೇಮಕ




ಮಲ್ಲಮ್ಮ ನುಡಿ ವಾರ್ತೆ

ಔರಾದ್ : ತಾಲೂಕಿನಾದ್ಯಂತ ರಚನಾತ್ಮಕವಾಗಿ ಕನ್ನಡ ಕಟ್ಟುವ ಉದ್ದೇಶದಿಂದ ಮಹಿಳಾ ಘಟಕ ಹಾಗೂ ಯುವ ಘಟಕ ಸೇರಿದಂತೆ ತಾಲೂಕಿನ ವಿವಿಧ ವಲಯ ಘಟಕಗಳಿಗೆ ಅಧ್ಯಕ್ಷರನ್ನು ನೇಮಕ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಬಿ.ಎಂ ಅಮರವಾಡಿ ಹೇಳಿದ್ದಾರೆ.

ಮಹಿಳಾ ಘಟಕದ ಅಧ್ಯಕ್ಷರಾಗಿ ಮಹಾನಂದಾ ಎಂಡೆ, ಯುವ ಘಟಕದ ಅಧ್ಯಕ್ಷರಾಗಿ ಅಂಬಾದಾಸ ನಳಗೆ, ಹಾಗೂ ನಗರ ಘಟಕದ ಅಧ್ಯಕ್ಷರಾಗಿ ಸಂದೀಪ ಪಾಟೀಲ್ ಅವರನ್ನು ನೇಮಿಸಲಾಗಿದೆ.

ಎಕಂಬಾ ವಲಯ ಘಟಕದ ಅಧ್ಯಕ್ಷರಾಗಿ ಜ್ಞಾನೇಶ್ವರ ವಾಡಿಕರ್, ಚಿಂತಾಕಿ ವಲಯ ಘಟಕದ ಅಧ್ಯಕ್ಷರಾಗಿ ಗುರುನಾಥ ರೆಡ್ಡಿ, ವಡಗಾಂವ ವಲಯ ಘಟಕದ ಅಧ್ಯಕ್ಷರಾಗಿ ಚಂದ್ರಕಾಂತ ಫುಲೆ ಹಾಗೂ ಸಂತಪೂರ ವಲಯ ಘಟಕದ ಅಧ್ಯಕ್ಷರಾಗಿ ಸಂಗಮೇಶ ಮರಖಲೆ ಅವರನ್ನು ನೇಮಕ ಮಾಡಲಾಗಿದೆ.

ಜವಾಬ್ದಾರಿ ವಹಿಸಿಕೊಂಡು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಕನ್ನಡ ಕಾರ್ಯಕ್ರಮಗಳು ಆಯೋಜಿಸಿ ಸೌಹಾರ್ದತೆ, ಸಾಮರಸ್ಯದಿಂದ ತಾಲೂಕಿನಾದ್ಯಂತ ಸಾಹಿತ್ಯಿಕ ಹಾಗೂ ಸಾಂಸ್ಕೃತಿಕ ವಾತಾವರಣ ನಿರ್ಮಿಸಲು ಅಣಿಯಾಗುವಂತೆ ಅಧ್ಯಕ್ಷ ಬಿ.ಎಂ ಅಮರವಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಧೀಕೃತ ಗೈರು; ಕರ್ತವ್ಯಕ್ಕೆ ಹಾಜರಾಗುವಂತೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.29–ಸಂಡೂರು ತಾಲ್ಲೂಕಿನ ಮೆಟ್ರಿಕಿ ಬಿ.ಒ ನ ಜಿಡಿಎಸ್ ಬಿಪಿಎಂ ರವಿಕುಮಾರ್.ಎ ಅವರು 2020 ರ ಫೆ.04 ರಿಂದ ತಮ್ಮ ಕೆಲಸಕ್ಕೆ ಅನಧೀಕೃತವಾಗಿ ಗೈರು ಹಾಜರಾಗಿದ್ದು, ಈ ಕೂಡಲೇ ಕರ್ತವ್ಯಕ್ಕೆ ಹಾಜರಾಗಬೇಕು ಎಂದು ಬಳ್ಳಾರಿ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ತಿಳಿಸಿದ್ದಾರೆ.

ಈಗಾಗಲೇ ಇಲಾಖೆಯ ನಿಯಮಾನುಸಾರ ರವಿಕುಮಾರ್ ಗೆ ತಮ್ಮ ಆರೋಪ ಪಟ್ಟಿಯನ್ನು ಅಂಚೆಯ ಮೂಲಕ ಇಲಾಖೆಗೆ ತಿಳಿದಿರುವ ಎಲ್ಲಾ ವಿಳಾಸಗಳಿಗೆ ಕಳುಹಿಸಲಾಗಿದ್ದು, ಅವು ಬಟವಾಡೆಯಾಗದೇ ಹಿಂತಿರುಗಿ ಬಂದಿರುತ್ತವೆ.

ಹಾಗಾಗಿ ಈ ಬಗ್ಗೆ ಮತ್ತೊಮ್ಮೆ ಅವಕಾಶ ನೀಡುವ ಸಲುವಾಗಿ ಈ ಪ್ರಕಟಣೆಗೊಂಡ 15 ದಿನಗಳೊಳಗಾಗಿ ಖುದ್ದಾಗಿ ಮೆಮೋ ಪಡೆದುಕೊಳ್ಳಬೇಕು. ತಪ್ಪಿದಲ್ಲಿ ಗೈರು ಹಾಜರಿಯಲ್ಲಿ ಇಲಾಖೆಯ ನಿಯಮಗಳ ಪ್ರಕಾರ ಶಿಸ್ತು ಕ್ರಮ ಕೈಗೊಂಡು ಇತ್ಯರ್ಥಪಡಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಧೀಕೃತ ಗೈರು; ಕರ್ತವ್ಯಕ್ಕೆ ಹಾಜರಾಗುವಂತೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.29–ಸಂಡೂರು ತಾಲ್ಲೂಕಿನ ಮೆಟ್ರಿಕಿ ಬಿ.ಒ ನ ಜಿಡಿಎಸ್ ಬಿಪಿಎಂ ರವಿಕುಮಾರ್.ಎ ಅವರು 2020 ರ ಫೆ.04 ರಿಂದ ತಮ್ಮ ಕೆಲಸಕ್ಕೆ ಅನಧೀಕೃತವಾಗಿ ಗೈರು ಹಾಜರಾಗಿದ್ದು, ಈ ಕೂಡಲೇ ಕರ್ತವ್ಯಕ್ಕೆ ಹಾಜರಾಗಬೇಕು ಎಂದು ಬಳ್ಳಾರಿ ಅಂಚೆ ವಿಭಾಗದ ಅಂಚೆ ಅಧೀಕ್ಷಕ ಪಿ.ಚಿದಾನಂದ ಅವರು ತಿಳಿಸಿದ್ದಾರೆ.

ಈಗಾಗಲೇ ಇಲಾಖೆಯ ನಿಯಮಾನುಸಾರ ರವಿಕುಮಾರ್ ಗೆ ತಮ್ಮ ಆರೋಪ ಪಟ್ಟಿಯನ್ನು ಅಂಚೆಯ ಮೂಲಕ ಇಲಾಖೆಗೆ ತಿಳಿದಿರುವ ಎಲ್ಲಾ ವಿಳಾಸಗಳಿಗೆ ಕಳುಹಿಸಲಾಗಿದ್ದು, ಅವು ಬಟವಾಡೆಯಾಗದೇ ಹಿಂತಿರುಗಿ ಬಂದಿರುತ್ತವೆ.

ಹಾಗಾಗಿ ಈ ಬಗ್ಗೆ ಮತ್ತೊಮ್ಮೆ ಅವಕಾಶ ನೀಡುವ ಸಲುವಾಗಿ ಈ ಪ್ರಕಟಣೆಗೊಂಡ 15 ದಿನಗಳೊಳಗಾಗಿ ಖುದ್ದಾಗಿ ಮೆಮೋ ಪಡೆದುಕೊಳ್ಳಬೇಕು. ತಪ್ಪಿದಲ್ಲಿ ಗೈರು ಹಾಜರಿಯಲ್ಲಿ ಇಲಾಖೆಯ ನಿಯಮಗಳ ಪ್ರಕಾರ ಶಿಸ್ತು ಕ್ರಮ ಕೈಗೊಂಡು ಇತ್ಯರ್ಥಪಡಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 02 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.29–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ ಗಿಡಗಳನ್ನು ಕಡಿಯುವ ಕಾರ್ಯ ಕೈಗೊಳ್ಳುತ್ತಿರುವುರಿಂದ ಮೇ 02 ರಂದು ಬೆಳಿಗ್ಗೆ 8.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–33 ವ್ಯಾಪ್ತಿಯ ಕೆ.ಚ್.ಬಿ. ಕಾಲೋನಿ, ನೇತಾಜಿ ನಗರ, ಇನ್ನಾರೆಡ್ಡಿ ಲೇಔಟ್, ಇನ್‌ಫ್ಯಾಂಟರಿ ರಸ್ತೆ, ವಾಸವಿ ಶಾಲೆ, ಕೊಳಗಲ್ ರಸ್ತೆ, ವಿದ್ಯಾನಗರ, ಕಲ್ಯಾಣಿ ಕಾಲೋನಿ, ಭತ್ರಿ ರೋಡ್, ಭತ್ರಿ, ಗುರು ಕಾಲೋನಿ, ಸತ್ಯವಾಣಿ ನಗರ, ಸಿಧ್ದಾರ್ಥ ನಗರ, ವಿಯಾನಿ ಶಾಲೆ.

ಎಫ್–73 ವ್ಯಾಪ್ತಿಯ ಬಸವನಕುಂಟೆ, ಕೋಟೆ ಪ್ರದೇಶ, 1 ನೇ ಗೇಟ್, 2 ನೇ ಗೇಟ್, ಸಿದ್ದಾರ್ಥ ನಗರ, ಸುಧಾಕ್ರಾಸ್, ಒ.ಪಿ.ಡಿ ಮತ್ತು ಎಫ್–77 ವ್ಯಾಪ್ತಿಯ ಒ.ಪಿ.ಡಿ, ಶಾಂತಿ ನಗರ, ಕೊಳಗಲ್ ರಸ್ತೆ, ಬಿಮ್ಸ್ ಕ್ಯಾಂಪಸ್ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.29–ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಬರುವ ಗ್ರಾಮಗಳಲ್ಲಿ ಭೂ ಮಾಲೀಕರು ಹಾಗೂ ಪ್ರಾಧಿಕಾರದ ವತಿಯಿಂದ ಜಂಟಿ ಸಹಯೋಗದೊಂದಿಗೆ ಎಲ್ಲಾ ಮೂಲಭೂತ ಸೌಕರ್ಯಗಳೊಂದಿಗೆ ಸುಂದರವಾದ ವಸತಿ ಯೋಜನೆಯನ್ನು ನಿರ್ಮಿಸುತ್ತಿದ್ದು, ನಿವೇಶನ ಪಡೆಯಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಬರುವ ಗ್ರಾಮಗಳಲ್ಲಿ ಪ್ರಾಧಿಕಾರದ ವತಿಯಿಂದ ರೈತರ ಸಹಭಾಗಿತ್ವದ ಶೇ.50:50 ಅನುಪಾತದಡಿ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ವಸತಿ ಯೋಜನೆಯನ್ನು ರಚಿಸಿ ಸರ್ಕಾರದ ಅನುಮೋದನೆ ಪಡೆದುಕೊಂಡು ಸುಂದರವಾದ ವಸತಿ ಯೋಜನೆ ಅಭಿವೃದ್ಧಿಪಡಿಸಲಾಗುತ್ತದೆ.

ಬಡಾವಣೆ ರಚನೆ ಮಾಡಲು ಆಸಕ್ತಿ ಇರುವ ಭೂ ಮಾಲೀಕರು ಭೂ ಪರಿಹಾರಕ್ಕೆ ಬದಲಾಗಿ, ಪ್ರಾಧಿಕಾರದಿಂದ ರಚನೆ ಮಾಡಿದ ಯೋಜನೆಯಲ್ಲಿನ ನಿವೇಶನಗಳನ್ನು ಶೇ.50:50 ರ ಅನುಪಾತದಲ್ಲಿ (ಮೂಲೆ ನಿವೇಶನಗಳನ್ನು ಹೊರತುಪಡಿಸಿ) ರೈತರ ಭಾಗದ ಭಾಗಶಃ ಶೇ.50 ರಷ್ಟು ನಿವೇಶನಗಳನ್ನು (ಮೂಲೆ ನಿವೇಶನಗಳನ್ನು ಹೊರತುಪಡಿಸಿ) ಹಸ್ತಾಂತರಿಸಿ ಉಳಿದ ಪ್ರಾಧಿಕಾರದ ಭಾಗಶಃ ಶೇ.50 ರಷ್ಟು ನಿವೇಶನಗಳನ್ನು ಸಾರ್ವಜನಿಕರಿಗೆ ಯೋಗ್ಯ ದರದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು.

ಆಸಕ್ತಿವುಳ್ಳ ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಬರುವ ಗ್ರಾಮಗಳ ಪ್ರದೇಶ ವ್ಯಾಪ್ತಿಯ ಭೂ ಮಾಲೀಕರು / ರೈತರು ಯಾವುದೇ ಋಣಭಾರವಿಲ್ಲದೆ ಬಿಟ್ಟುಕೊಡಲು ಹಾಗೂ ರಚನೆ ಮಾಡಲ್ಪಡುವ ವಸತಿ ವಿನ್ಯಾಸದಲ್ಲಿ ವಸತಿಗಾಗಿ ಕಾಯ್ದಿರಿಸಿದ ಪ್ರದೇಶದಲ್ಲಿ ಶೇ.50:50 ರಷ್ಟು ನಿವೇಶನಗಳನ್ನು ಪಡೆಯಲು ಇಚ್ಛೆಯುಳ್ಳವರು ತಮ್ಮ ಜಮೀನಿನ ಇತ್ತೀಚಿನ ಪಹಣಿ, ಸರ್ವೆ ನಕಾಶೆ, ಋಣ ಭಾರ ಪ್ರಮಾಣ ಪತ್ರ ಹಾಗೂ ಇನ್ನಿತರೆ ಅಗತ್ಯ ದಾಖಲೆಗಳನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರದ ಕಚೇರಿ ದೂ.08395–295618 ಗೆ ಸಂಪರ್ಕಿಸಬಹುದು ಎಂದು ತೋರಣಗಲ್ಲಿನ ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಕೆ.ಹೆಚ್. ರಾಘವೇಂದ್ರ ಗುರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿ ಆತ್ಮಹತ್ಯೆ ಪ್ರಕರಣ : ಶಿಸ್ತು ಕ್ರಮಕ್ಕೆ ಮೇಲಾಧಿಕಾರಿಗಳಿಗೆ ಮನವಿ




ವೀರಯ್ಯ ವಿ ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರದ ಎಸ್ ಎಫ್ ಎಸ್ ಶಾಲೆಯ ವಿದ್ಯಾರ್ಥಿನಿ ನಿರೀಕ್ಷಾ ಕಾರೆಕಲ್ ಆತ್ಮಹತ್ಯೆಗೆ ಶರಣಾಗಿದ್ದು ಶಾಲೆಯ ಆಡಳಿತ ಮಂಡಳಿಯ ಮೇಲೆ ಶಿಸ್ತು ಕ್ರಮ ಜರುಗಿಸುವಂತೆ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಕೊಪ್ಪಳ ಕ್ಷೇತ್ರ ಶಿಕ್ಷಣಾಧಿಕಾರಿ ಶಂಕ್ರಯ್ಯ ಮನವಿಯೊಂದಿಗೆ ಪತ್ರ ಸಲ್ಲಿಸಿರುತ್ತಾರೆ.

ಬಹಳ ಕುತೂಹಲ ಕೆರಳಿಸಿದ್ದ ನಿರೀಕ್ಷಾ ಕಾರೇಕಲ್ ಆತ್ಮಹತ್ಯೆ ಪ್ರಕರಣ ಹೊಸದೊಂದು ತಿರುವು ಪಡೆದುಕೊಂಡಿದ್ದು ಇಲ್ಲಿಯ ತನಕ ಮೌನ ವಹಿಸಿದ್ದ ಇಲಾಖೆಯ ಅಧಿಕಾರಿಗಳು ಇದೀಗ ಒಂದು ಹೆಜ್ಜೆ ಮುಂದೆ ಇಟ್ಟು ಶಾಲಾ ಆಡಳಿತ ಮಂಡಳಿಯ ಲೋಪದೋಷಗಳು ಮೇಲ್ನೋಟಕ್ಕೆ ಸಾಬೀತಾಗಿ ಕಂಡುಬಂದಿದ್ದು ತಕ್ಷಣವೇ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸುತ್ತಾ ಉಪ ನಿರ್ದೇಶಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕೊಪ್ಪಳ ಇವರು ಪತ್ರ ರವಾನಿಸಿದ್ದು ಅದರ ಪ್ರತಿ ಈಗ ಪತ್ರಿಕೆಗೆ ಲಭ್ಯವಾಗಿರುತ್ತದೆ.

ಹಲವಾರು ಅನುಮಾನಗಳಿಗೆ ಕಾರಣವಾಗಿದ್ದ ನಿರೀಕ್ಷ ಆತ್ಮಹತ್ಯೆ ಪ್ರಕರಣವು ಇದೀಗ ಒಂದು ಹಂತದತ್ತ ಸಾಗುತ್ತಿದ್ದು ಬಹಳ ದಿನಗಳವರೆಗೆ ಅಧಿಕಾರಿಗಳು ಮೌನ ವಹಿಸಿದ್ದು ಹಲವಾರು ಅನುಮಾನಗಳಿಗೆ ಎಡೆ ಮಾಡಿ ಕೊಟ್ಟಿದ್ದು. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸ್ವಯಂ ದೂರು ದಾಖಲಿಸಿಕೊಂಡು ತನಿಖೆ ನಡೆಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ಪತ್ರ ರವಾನೆ ಮಾಡಿದ್ದರು ಆದರೂ ಸಹ ಇಲಾಖೆಗಳು ಕಣ್ಮುಚ್ಚಿ ಕುಳಿತುಕೊಂಡಾಗ ಸಾಮಾಜಿಕ ಹೋರಾಟಗಾರ ಮುತ್ತು ದೊಡ್ಮನಿ ಶಿಕ್ಷಣ ಮತ್ತು ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ದೂರು ಸಲ್ಲಿಸಿದ್ದು ಇದೀಗ ಕಾರ್ಯಪ್ರವೃತ್ತರಾದ ಕ್ಷೇತ್ರ ಶಿಕ್ಷಣಾಧಿಕಾರಿ ಶಾಲಾ ಮಂಡಳಿಯವರು ಸರ್ಕಾರ ನಿಗದಿಪಡಿಸಿದ ದಿನಾಂಕಕ್ಕಿಂತ ಮುಂಚಿತವಾಗಿ ಪರೀಕ್ಷೆ ಫಲಿತಾಂಶ ಪ್ರಕಟಿಸಿರುವುದು ಹಾಗೂ ಆ ಸಂದರ್ಭದಲ್ಲಿ ಪ್ರತಿ ಬಾರಿ ನಕಲು ಮಾಡುವುದರೊಂದಿಗೆ ಹೆಚ್ಚಿನ ಅಂಕ ಪಡೆದುಕೊಳ್ಳುತ್ತೀಯ ಎಂದು ಎಲ್ಲರೆದುರು ಅವಮಾನ ಮಾಡಿ ಆತ್ಮಹತ್ಯೆಗೆ ಪ್ರೇರೇಪಣೆ ನೀಡುವಂತೆ ಬಾಲಕಿಯ ಮನಸ್ಥಿತಿಯನ್ನು ಹದಗೆಡಿಸಿ ಆತ್ಮಹತ್ಯೆಗೆ ಪ್ರಚೋದನೆ ನೀಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿ ಶಾಲಾ ಆಡಳಿತ ಮಂಡಳಿಯ ಮೇಲೆ ಜರುಗಿಸುವಂತೆ ಮೇಲಾಧಿಕಾರಿಯದ ಉಪನಿರ್ದೇಶಕರಿಗೆ ಪತ್ರ ಬರೆದಿರುವುದು ಬಾಲಕಿಯ ಸಾವಿಗೆ ನ್ಯಾಯ ದೊರಕಿಸುವ ಲಕ್ಷಣಗಳು ಕಂಡುಬರುತ್ತಿವೆ. ಆದರೂ ಸಹ ಮೇಲಿನ ಅಧಿಕಾರಿಗಳು ಜೊತೆಗೆ ಪೊಲೀಸ್ ಇಲಾಖೆಯ ಅಧಿಕಾರಿಗಳು ಕೂಲಂಕುಶವಾಗಿ ತನಿಖೆ ನಡೆಸಿ ತಪ್ಪಿತಸ್ಥರಿಗೆ ಸೂಕ್ತ ಕಠಿಣ ಶಿಕ್ಷೆ ದೊರೆಯುತ್ತದೆ ಎಂಬುದು ಸಾರ್ವಜನಿಕರ ಯಕ್ಷಪ್ರಶ್ನೆಯಾಗಿದೆ.



ಒಂದು ಮುಗ್ಧ ಬಾಲಕಿಯ ಬಲಿಯಾದರೂ ಸಹ ದೂರು ನೀಡುವ ತನಕ ಯಾವುದೇ ಕ್ರಮ ಕೈಗೊಳ್ಳದೆ ಇರುವ ಅಧಿಕಾರಿಗಳ ನಡೆ ನಿಜಕ್ಕೂ ಆಶ್ಚರ್ಯಕರವಾಗಿದ್ದು ದೂರು ನೀಡಿದ ನಂತರ ಕ್ಷೇತ್ರಶಿಕ್ಷಣಾಧಿಕಾರಿ ಶಾಲಾ ಆಡಳಿತ ಮಂಡಳಿಯ ಲೋಪದೋಷಗಳು ಮೇಲ್ನೋಟಕ್ಕೆ ಸಾಬೀತಾಗಿದೆ ಎಂದು ಮೇಲಾಧಿಕಾರಿಗೆ ಪತ್ರ ರವಾನಿಸಿರುತ್ತಾರೆ. ಆದರೂ ಸಹ ಈ ಪ್ರಕರಣ ಸರಿಯಾದ ದಾರಿಯಲ್ಲಿ ಸಾಗುವ ಅನುಮಾನಗಳು ಕಂಡು ಬರುತ್ತಿದ್ದು ಇನ್ನೂ ಒಂದು ವಾರ ಕಾದು ನೋಡಿ ಮುಂದಿನ ವಾರದಲ್ಲಿ ನ್ಯಾಯಾಂಗ ಮೊರೆ ಹೋಗಿ ನ್ಯಾಯ ಕೇಳಲಾಗುವುದು.

**–ಮುತ್ತು ದೊಡ್ಮನಿ ಸಾಮಾಜಿಕ ಹೋರಾಟಗಾರ**

## ಅಸ್ಪಷ್ಟ ಮಾಹಿತಿ ನೀಡಿದ ಅಧಿಕಾರಿಗಳಿಗೆ ತರಾಟೆ. ಮಾನಪ್ಪ ವಜ್ಜಲ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು:ಬೇಸಿಗೆ ಸುರುವಾಗಿದೆ ಕುಡಿಯುವ ನೀರಿನ ಸಮಸ್ಯೆ ಇರುವಕಡೆ ಸರಿಪಡಿಸಿ ಎನ್ನುವ ಆದೇಶವಿದೆ ಆದರೂ ತಾಲೂಕಿನಲ್ಲಿ ಒಂದು ಬೋರವೆಲ್ ಹಾಕಿಲ್ಲ ಎನ್ನುವ ಉತ್ತರ ಅಧಿಕಾರಿಗಳಿಂದ ಬಂದಾಗ ಶಾಸಕ ಮಾನಪ್ಪ ವಜ್ಜಲ್ ಅಧಿಕಾರಿಗಳ ನಡೆಯ ಬಗ್ಗೆ ಗರಂ ಆದ ಘಟನೆ ಜರುಗಿತು

ಪಟ್ಟಣದ ತಾಲೂಕಾ ಪಂಚಾಯ್ತಿ ಸಭಾಂಗಣದಲ್ಲಿ ಶಾಸಕ ಮಾನಪ್ಪ ವಜ್ಜಲ್ ರವರ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ ನಡೆಯಿತು ಅಧಿಕಾರಿಗಳು ಆಯಾ ಇಲಾಖೆಗಳ ಬಗೆಗೆ ಅಸ್ಪಷ್ಟ ಮಾಹಿತಿ ನೀಡುತ್ತಿರುವಂತೆ ಗರಂ ಆದ ಶಾಸಕ ವಜ್ಜಲ್ ಸಭೆಯಿಂದ ಹೊರಹೋದಾಗ ಜನರು ತಮ್ಮ ಸಮಸ್ಯೆಗಳು ಏನಾದವೆಂದು ಪ್ರಶ್ನೆ ಮಾಡುತ್ತಾರೆ ಅವರಿಗೆ ನಾನು ಏನು ಹೇಳಬೇಕು ಅಸ್ಪಷ್ಟ ಮಾಹಿತಿ ನೀಡಿದರೆ ಹೇಗೆ ಅಧಿಕಾರಿಗಳನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡ ಘಟನೆ ಕೆಡಿಪಿ ಸಭೆಯಲ್ಲಿ ಜರುಗಿತು

ಸರಕಾರದಿಂದ ಬಡರೈತರಿಗಾಗಿ ಬಂದಿರುವ ಗಂಗಾಕಲ್ಯಾಣ ಕೆಲಸವನ್ನು ಯಾಕೆ ವಿಳಂಬ ಮಾಡುತ್ತೀರಿ ಟಿಸಿ ಸುಟ್ಟರೆ ರೈತರನ್ನು ತಿರುಗಾಡಿಸುತ್ತೀರಿ ದೊಡ್ಡಿ ತಾಂಡ ಸೇರಿ ಹಲವಾರು ಕಡೆಗೆ ವಿದ್ಯುತ್ ಸಮಸ್ಯೆ ಇದೆ ಯಾವುದನ್ನು ನೀವು ಸರಿಪಡಿಸುವ ಕೆಲಸ ಮಾಡಿಲ್ಲ ಎಂದು ಜೆಸ್ಕಾಂ ಅಧಿಕಾರಿ ಕರಿಬಂಟನಾಳರವರಿಗೆ ತರಾಟೆಗೆ ತೆಗೆದುಕೊಂಡರು 110 ಕೆವಿ 3 ಬಂದಿವೆ ಸೋಲಾರ ರೈತರಿಗೆ ಉಪಯುಕ್ತ ಇದೆಯಾ ಎನ್ನುವುದನ್ನು ತಿಳಿದು ಮೇಲಾಧಿಕಾರಿಗಳಿಗೆ ಬರೆಯಬೇಕು, ಜನರ ಸಮಸ್ಯೆಗೆ ಸ್ಪಂದಿಸಬೇಕು ಎಂದರು

ಜಲಧಾರೆ ಕಾಮಗಾರಿಯನ್ನು ಗುಣಮಟ್ಟದಿಂದ ಕೂಡಿಲ್ಲವೆಂದು ಅಂದಾಜು ಸಮಿತಿ ವರದಿಯನ್ನು ಸರಕಾರಕ್ಕೆ ನೀಡಿದೆ ಬಿಲ್ ಮಾಡಬಾರದೆಂದು ಹೇಳಿದೆ ಆದರೆ ನೀವು ಗುತ್ತಿಗೆದಾರರಿಗೆ ಯಾವುದೆ ಆದೇಶವಿಲ್ಲದೆ ಬಿಲ್ ಮಾಡಿದ್ದೀರಿ ಇದಕ್ಕೆ ತಕ್ಕಶಿಕ್ಷೆ ನೀವು ಅನುಭವಿಸುತ್ತೀರಿ ಎಂದು ನೀರು ಸರಬರಾಜು ಇಲಾಖೆ ಎಇಇ ಯವರಿಗೆ ಹೇಳಿದರು, ಸರಕಾರಿ ಆಸ್ಪತ್ರೆಯಲ್ಲಿ ಸಾಕಷ್ಟು ಸಮಸ್ಯೆಗಳಿವೆ, ಅತಿಥಿ ಶಿಕ್ಷಕರಿಗೆ ಸರಿಯಾಗಿ ವೇತನ ದೊರೆಯುತ್ತಿಲ್ಲ, ಕಾಮಗಾರಿಗಳಿಗೆ ಬಂದಿರುವ ಹಣ ಲೂಟಿಯಾಗುತ್ತಿದೆ ಮಾನವೀಯತೆ ಇದ್ದರೆ ಅಭಿವೃದ್ದಿ ಕೆಲಸಗಳನ್ನು ಮಾಡಿ ಇಲ್ಲವಾದರೆ ಜಾಗಖಾಲಿ ಮಾಡಿ ಎಂದು ಅಧಿಕಾರಿಗಳನ್ನು ಹಿಗ್ಗಾಮುಗ್ಗವಾಗಿ ತರಾಟೆಗೆ ತೆಗೆದುಕೊಂಡ ಘಟನೆ ಜರುಗಿತು

ಗ್ಯಾರಂಟಿ ಯೋಜನೆಯ ತಾಲೂಕಾಧ್ಯಕ್ಷ ವೆಂಕಟೇಶ ಗುತ್ತೇದಾರ ಮಾತನಾಡುತ್ತಾ ಬೇರೆ ತಾಲೂಕಿನಲ್ಲಿ ಗ್ಯಾರಂಟಿ ಅಧ್ಯಕ್ಷರು, ಪಿಎಲ್ಡಿ, ಟಿಎಪಿಎಂಸಿ ಸೇರಿ ಹಲವರನ್ನು ವೇದಿಕೆಗೆ ಕರೆಯುತ್ತಾರೆ ಆದರೆ ಇಲ್ಲಿಯಾಕೆ ಪಾಲನೆಯಾಗುತ್ತಿಲ್ಲವೆಂದಾಗ ಅದು ಪ್ರೋಟೋಕಾಲ್ ಪ್ರಕಾರವಿಲ್ಲವೆಂದು ಎಂ ಎಲ್ ಸಿ ಶರಣಗೌಡ ಪಾಟೀಲ್ ಬಯ್ಯಾಪುರ ಸಮಜಾಯಿಸಿದರು

ಕೃಷಿ, ಶಿಕ್ಷಣ ಸಮಾಜಕಲ್ಯಾಣ, ಪ.ಪಂ, ಸಿಡಿಪಿಓ ಪಶುಸಂಗೋಪನೆ ಸೇರಿದಂತೆ ಹಲವು ಇಲಾಖೆ ಅಧಿಕಾರಿಗಳು ಚರ್ಚೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಶಂಶಾಲ ಇ ಓ ಉಮೇಶ, ಕೆಡಿಪಿ ನೂತನ ಸದಸ್ಯರು ಸೇರಿದಂತೆ ಇದ್ದರು.

### 21 ವಟುಗಳಿಗೆ ಅಯ್ಯಾಚಾರ, ಶಿವದೀಕ್ಷೆ

# ಇಷ್ಟಲಿಂಗದ ಮಹತ್ವ ದೊಡ್ಡದು ವೀರಸೋಮೇಶ್ವರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.29-ಜಗತ್ತಿಗೆ ಇಷ್ಟಲಿಂಗದ ಪರಿಕಲ್ಪನೆ ಕೊಟ್ಟಿದ್ದು ವೀರಶೈವ ಲಿಂಗಾಯತ ಧರ್ಮ ಎಂದು ಕುಂದರಗಿಯ ಚರಂತಿಮಠದ ವೀರಸೋಮೇಶ್ವರ ಮಹಾಸ್ವಾಮಿಗಳು ಹೇಳಿದ್ದಾರೆ. ನಗರದ ಜಗದ್ಗುರು ರೇಣುಕಾಚಾರ್ಯ ಸಾಂಸ್ಕೃತಿಕ,ಶಿಕ್ಷಣ ಮತ್ತು ಸಾಮಾಜಿಕ ಶ್ರೇಯೋಭಿವೃದ್ಧಿ ಸಂಸ್ಥೆ ವತಿಯಿಂದ ನವನಗರದ ಶಿವಲಿಂಗೇಶ್ವರ ದೇವಸ್ಥಾನದಲ್ಲಿ ಈಚೆಗೆ ನಡೆದ 10 ವರ್ಷ ಮೇಲ್ಪಟ್ಟ ವಟುಗಳಿಗೆ ಅಯ್ಯಾಚಾರ ಮತ್ತು ಶಿವದೀಕ್ಷೆ ನೀಡುವ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ, ಇಷ್ಟಲಿಂಗದ ಮಹತ್ವ ಬಹು ದೊಡ್ಡದು. ಇದನ್ನು ಎಲ್ಲರೂ ಅರಿಯಬೇಕು ಎಂದರು.

ಬಂಧುಗಳು, ಹಣ, ಆಯುಷ್ಯ ಇವಾವುದು ಶಾಶ್ವತವಲ್ಲ. ಧರ್ಮವೇ ಶಾಶ್ವತ ಎಂದ ವೀರಸೋಮೇಶ್ವರ ಸ್ವಾಮೀಜಿ, ದೀಕ್ಷೆ ಪಡೆದ ವಟುಗಳು ನಿಯಮಾದಿಗಳನ್ನು ಪಾಲಿಸಿ ನಡೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 21 ವಟುಗಳಿಗೆ ಅಯ್ಯಾಚಾರ,ಶಿವದೀಕ್ಷೆ ನೀಡಲಾಯಿತು. ತಾಲೂಕಾ ಜಂಗಮ ಸಮಾಜದ ಅಧ್ಯಕ್ಷ ವ್ಹಿ.ಬಿ.ಚೌಕಿಮಠ, ನಗರಸಭೆ ಸದಸ್ಯರಾದ ಚನ್ನಯ್ಯ ಹಿರೇಮಠ, ಶಿವಕುಮಾರ ಬಳ್ಳಾರಿ, ಬಿವಿವಿ ಸಂಘದ ಸದಸ್ಯರಾದ ಕುಮಾರ ಹಿರೇಮಠ, ಬಸವರಾಜ ಪರ್ವತಿಮಠ, ಜಂಗಮ ಸಮಾಜದ ಕಾರ್ಯದರ್ಶಿ ಬಸವರಾಜ ಹಿರೇಮಠ, ಬಸಲಿಂಗಯ್ಯ ಲೂತಿಮಠ, ನಾಗರಾಜ ಹದ್ಲಿ, ಜಂಗಮ ಸಮಾಜದ ಹಿರಿಯರಾದ ಡಾ.ಸುರೇಶ ವಸ್ತ್ರದ, ವಿಶ್ವೇಶ್ವರಯ್ಯ ಪಾಟೀಲ, ಮಹಾಂತೇಶ ಹುಣಶ್ಯಾಳ, ಮಹಾಂತೇಶ ಕೋಟಿಮಠ, ಸಂಗಯ್ಯ ವಿಭೂತಿ, ಎಂ.ಎಸ್.ಹಿರೇಮಠ, ಸಂಗಯ್ಯ ಕಂತಿಮಠ ಮತ್ತಿತರರು ಇದ್ದರು.

# ಮೇ.1ರಿಂದ ಲಡ್ಡುಮುತ್ಯಾ ದೇವಸ್ಥಾನದಲ್ಲಿ ಎನ್‌ಎಸ್‌ಎಸ್ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.29-ನಗರದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನಾ ಘಟಕಗಳ ವಾರ್ಷಿಕ ವಿಶೇಷ ಶಿಬಿರ ದತ್ತು ಗ್ರಾಮ ಸೀಮಿಕೇರಿಯಲ್ಲಿ ಮೇ.1ರಿಂದ ನಡೆಯಲಿದೆ.

ಸೀಮಿಕೇರಿಯ ಲಡ್ಡುಮುತ್ಯಾ ದೇವಸ್ಥಾನದ ಆವರಣದಲ್ಲಿ ಗುರುವಾರ ವಿದ್ಯಾ ಪ್ರಸಾರಕ ಮಂಡಳದ ಕಾರ್ಯಾಧ್ಯಕ್ಷರಾದ ಶ್ರೀಲತಾ ಹೆರಂಜಲ್ ಶಿಬಿರನ್ನು ಉದ್ಘಾಟಿಸುವರು.

ದೇವಸ್ಥಾನದ ಹಿರಿಯರಾದ ಷಣ್ಮುಖಪ್ಪ ಹದ್ಲಿ ಹಾಗೂ ಎಂ.ಎಸ್.ಸಕ್ರೋಜಿ ಅತಿಥಿಗಳಾಗಿ ಆಗಮಿಸಲಿದ್ದು, ಅಧ್ಯಕ್ಷತೆಯನ್ನು ಪಿ.ಆರ್.ಜೋಶಿ ಅಧ್ಯಕ್ಷತೆ ವಹಿಸುವರು. ಡಾ.ಎಚ್.ಎಸ್.ಗಿಡಗಂಟಿ, ಎನ್.ಎಸ್.ಅಧಿಕಾರಿಗಳು, ಬೋಧಕ ಬೋಧಕೇತರ ಸಿಬ್ಬಂದಿಗಳು, ಸ್ವಯಂ ಸೇವಕರು ಹಾಗೂ ಗ್ರಾಮಸ್ಥರು ಪಾಲ್ಗೊಳ್ಳಲಿದ್ದಾರೆ.

ಏಳು ದಿನಗಳ ವಾರ್ಷಿಕ ವಿಶೇಷ ಶಿಬಿರದಲ್ಲಿ ಹಲವು ಕ್ಷೇತ್ರದ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ಸ್ವಯಂಸೇವಕರಿಂದ ಚರಂಡಿ ಸ್ವಚ್ಚತೆ, ದೇವಾಲಯದ ಆವರಣದ ಸ್ವಚ್ಚತೆ ಕಾರ್ಯಕ್ರಮ ಆಯೋಜಿಸಲಾಗಿದೆ.

# ಇಂದಿನಿಂದ ದಿಗಂಬರೇಶ್ವರ ಮಠದ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.29-ನಗರದ ನವನಗರ ರಸ್ತೆಯಲ್ಲಿರುವ ಶ್ರೀದಿಗಂಬರೇಶ್ವರ ಮಠದ ಜಾತ್ರಾ ಮಹೋತ್ಸವ ಏ.30 ರಿಂದ ಮೇ 2 ರವರೆಗೆ ಜರುಗಲಿದೆ.

ಏ.30ರ ಬುಧವಾರ ಬೆಳಗ್ಗೆ 5ಕ್ಕೆ ಕರ್ತು ಗದ್ದುಗೆ, ಉತ್ಸವ ಮೂರ್ತಿಗಳಿಗೆ ರುದ್ರಾಭಿಷೇಕ, ಗಣಾರಾಧನೆ. ಮಧ್ಯಾಹ್ನ 12.35ಕ್ಕೆ ಮಹಾಪ್ರಸಾದ. ಮೇ 1ರ ಗುರುವಾರ ಬೆಳಗ್ಗೆ 6ಕ್ಕೆ ಕರ್ತು ಗದ್ದುಗೆ, ಉತ್ಸವ ಮೂರ್ತಿ, ಪಲ್ಲಕ್ಕಿ, ತೇರು ಹಾಗೂ ನೂತನ ಅಶ್ವಕ್ಕೆ ಮಹಾಪೂಜೆ. ಮಧ್ಯಾಹ್ನ ಮಹಾಪ್ರಸಾದವಿರಲಿದೆ. ಸಂಜೆ ಟಗರಿನ ಕಾಳಗ ಜರುಗಲಿದೆ.

ಮೇ 2ರ ಶುಕ್ರವಾರ ಬೆಳಗ್ಗೆ 6ಕ್ಕೆ ಮಹಾಪೂಜೆ, ಮಧ್ಯಾಹ್ನ ಪ್ರಸಾದ, ನಂತರ ಸಂಜೆ 5.45ಕ್ಕೆ ಶ್ರೀದಿಗಂಬರೇಶ್ವರ, ಶ್ರೀಮಾತಾ ಕಪ್ಪರ ಪಡಿಯಮ್ಮನವರ ಉತ್ಸವ ಮೂರ್ತಿಗಳಿಗೆ, ತೇರಿನ ಕಳಸಕ್ಕೆ ಪೂಜೆ ಸಲ್ಲಿಸಿ, ತೇರಿನ ಕಳಸದ ಪ್ರತಿಷ್ಠಾಪನೆಯೊಂದಿಗೆ 9ನೇ ವರ್ಷದ ಮಹಾರಥೋತ್ಸವ ಜರುಗಲಿದೆ.

ಶ್ರೀಬಸವರಾಜಪ್ಪನವರ ಸಾನಿಧ್ಯದಲ್ಲಿ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಮಠಾಧೀಶರು, ಗಣ್ಯರು ಭಾಗಿಯಾಗಲಿದ್ದಾರೆ. ಕಾರ್ಯಕ್ರಮದಲ್ಲಿ ಶ್ರೀಬಸಪ್ಪಜ್ಜನವರ ಕುರಿತಾದ ಗ್ರಂಥ ಲೋಕಾರ್ಪಣೆ ಆಗಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಟಗರಿನ ಕಾಳಗ: ಶ್ರೀದಿಗಂಬರೇಶ್ವರ ಜಾತ್ರಾಮಹೋತ್ಸವದ ಪ್ರಯುಕ್ತ ಮೇ 1ರ ಬುಧವಾರ ಸಂಜೆ 8 ಹಲ್ಲಿನ ಟಗರಿನ ಕಾಳಗ ಹಮ್ಮಿಕೊಳ್ಳಲಾಗಿದೆ. ಪ್ರಥಮ ಬಹುಮಾನ 50 ಸಾವಿರ, ದ್ವಿತೀಯ ಬಹುಮಾನ 30 ಸಾವಿರ, ತೃತೀಯ ಬಹುಮಾನ 20 ಸಾವಿರ ಹಾಗೂ ನಾಲ್ಕನೇ ಬಹುಮಾನ 10 ಸಾವಿರ ರೂ.ಗಳಾಗಿರುತ್ತದೆ.

ಹೆಚ್ಚಿನ ಮಾಹಿತಿಗೆ ಚಂದ್ರಪ್ಪ ಕಲ್ಲಹೊಲದ 9448920534, ಬಸವರಾಜ ಕೆಂಚಣ್ಣವರ 9886102020, ಸಿದ್ದಲಿಂಗಪ್ಪ ಮನಗೂಳಿ 9535741385 ಇವರನ್ನು ಸಂಪರ್ಕಿಸಬಹುದು.

# ಇಂದು ಪಟ್ಟಣದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಕರ್ನಾಟಕ ಸಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 892ನೇ ಜಯಂತೋತ್ಸವವನ್ನು ತಾಲೂಕಾಡಳಿತ, ತಾಲೂಕ ಪಂಚಾಯತ, ಪುರಸಭೆ ಹಾಗೂ ಶ್ರೀ ಬಸವೇಶ್ವರ ಉತ್ಸವ ಸಮಿತಿ ಇವರ ಸಹಯೋಗದಲ್ಲಿ ಇಂದು ಆಚರಿಸಲಾಗುವುದು. ಜಯಂತಿ ಅಂಗವಾಗಿ ಮುಂಜಾನೆ 8-30 ಗಂಟೆಗೆ ಪಟ್ಟಣದ ರಾಜವಾಡೆಯಿಂದ ಶ್ರೀ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆಯು ಶ್ರೀ ಬಸವೇಶ್ವರ ವೃತ್ತದವರೆಗೆ ನಡೆಯುವುದು. ನಂತರ ಅಲ್ಲಿಯೇ ವೇದಿಕೆ ಕಾರ್ಯಕ್ರಮ ಜರಗುವುದು. ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಉದ್ಘಾಟಿಸುವರು. ಕೆ.ಎಸ್.ಡಿ.ಎಲ್. ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡರು ಅಧ್ಯಕ್ಷತೆ ಹಾಗೂ ದೇವರ ಹಿಪ್ಪರಗಿ ಶಾಸಕ ಭೀಮನಗೌಡ ಪಾಟೀಲ ಸಹ ಅಧ್ಯಕ್ಷತೆ ವಹಿಸುವರು. ಸಾಹಿತಿ ಅಶೋಕ ಹಂಚಲಿ ವಿಶೇಷ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಸಚಿವ ಶಿವಾನಂದ ಎಸ್.ಪಾಟೀಲ, ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಎನ್, ಪ್ರಕಾಶ ಬಿ.ಹುಕ್ಕೇರಿ, ಸಂಸದ ರಮೇಶ ಜಗಜಣಿಗಿ, ರಾಜ್ಯಸಭಾ ಸಂಸದೆ ಡಾ.ಸುಧಾ ಮೂರ್ತಿ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ಕೇಶವ ಪ್ರಸಾದ್ ಎಸ್, ಕೌಶಲ್ಯಾಭಿವೃದ್ಧಿ ನಿಗಮ ಅಧ್ಯಕ್ಷೆ ಶ್ರೀಮತಿ ಕಾಂತಾ ನಾಯಕ, ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಪುರಸಭೆ ಅಧ್ಯಕ್ಷೆ ಜುಬೇದಾ ಹುಸೇನಬಾಷಾ ಜಮಾದಾರ, ಉಪಾಧ್ಯಕ್ಷೆ ಗೌರಮ್ಮ ಕುಂಬಾರ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ ಆಗಮಿಸಲಿದ್ದು, ತಹಶೀಲ್ದಾರ್ ಡಾ.ವಿನಯಾ ಹೂಗಾರ, ಪುರಸಭೆ ಮುಖ್ಯಾಧಿಕಾರಿ ಮೋಹನ ಜಾಧವ, ತಾಪಂ ಇಒ ನಿಂಗಪ್ಪ ಮಸಳಿ, ಬಿಇಒ ಬಿಎಸ್ ಸಾವಳಗಿ ಸಿಪಿಐ ಮೊಹಮ್ಮದ್ ಫಸಿವುದ್ದೀನ ಉಪಸ್ಥಿತರಿರುವರು ಎಂದು ತಾಲೂಕ ಆಡಳಿತದ ಪ್ರಕಟಣೆ ತಿಳಿಸಿದೆ.

# ಜನರ ಆರ್ಥಿಕ ಉನ್ನತಿಗೆ ಸೌಹಾರ್ದ ಸಂಸ್ಥೆಗಳ ಸೇವೆ ಅಗತ್ಯ : ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.29-ಜನರ ಹಾಗೂ ಸಮುದಾಯದ ಆರ್ಥಿಕ ಉನ್ನತಿಗೆ ಸೌಹಾರ್ದ ಸಂಸ್ಥೆಗಳ ಸೇವೆ ಅಗತ್ಯವಾಗಿದ್ದು, ಪ್ರಭುಲೀಂಗೇಶ್ವರ ಸೌಹಾರ್ದ ಸಂಸ್ಥೆ ಉತ್ತಮ ಸೇವೆಯೊಂದಿಗೆ ಸದಸ್ಯರ ಆರ್ಥಿಕ ಉನ್ನತಿಗಾಗಿ ಶ್ರಮಿಸುತ್ತಿದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು. ನವನಗರದ ಕಾಳಿದಾಸ ಶಿಕ್ಷಣ ಸಂಸ್ಥೆಯ ವಾನಣಿಜ್ಯ ಸಂಕೀರ್ಣದಲ್ಲಿ ಸೋಮವಾರ ಪ್ರಭುಲಿಂಗೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘದ 14ನೇ ನೂತನ ಶಾಖೆಯನ್ನು ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಪ್ರಭುಲಿಂಗೇಶ್ವರ ಸೌಹಾರ್ದ ಪತ್ತಿನ ಸಹಕಾರಿ ಸಂಘ ಸದಸ್ಯರ ಆರ್ಥಿಕ ಉನ್ನತಿಗಾಗಿ ಶ್ರಮಿಸುತ್ತಿದೆ. ಯುವ ಸಹಕಾರಿಗಳ ಉತ್ಪನ್ನವಾದ ಈ ಸಹಕಾರಿ ಸಂಸ್ಥೆಯು 2003 ರಿಂದ ತನ್ನ ಕಾರ್ಯವನ್ನು ಪ್ರಾರಂಭಿಸಿತು. ಕರ್ನಾಟಕ ರಾಜ್ಯ ಸೌಹಾರ್ದ ಸಹಕಾರಿ ಕಾಯ್ದೆ 1997 ರ ಅಡಿಯಲ್ಲಿ ಈ ಸಹಕಾರಿ ಸಂಸ್ಥೆಯ ನೋಂದಾಯಿತ ಕಚೇರಿ ಜಮಖಂಡಿಯಲ್ಲಿದೆ. ಸೌಹಾರ್ದ ಸಹಕಾರಿ ತತ್ವಗಳಿಗೆ ಸಲ್ಲುವ ಗೌರವವು ಸಹಕಾರ ಸಂಸ್ಥೆಯ ನಿರಂತರ ಬೆಳವಣಿಗೆಯತ್ತ ಗಮನಹರಿಸುವಂತೆ ಮಾಡಿದೆ ಎಂದರು. ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಮಾತನಾಡಿ, ಎಲ್ಲರಿಗಾಗಿ ನಾನು ನನಗಾಗಿ ಎಲ್ಲರೂ ಇದು ಸಹಕಾರ ತತ್ವದ ಮುಖ್ಯ ಸಂದೇಶ. ಇಂತಹ ಶ್ರೇಷ್ಠ ತತ್ವದ ಬುನಾದಿಯ ಮೇಲೆ ಕಟ್ಟಿರುವುದು ಈ ಸಹಕಾರ ಕ್ಷೇತ್ರ. ಪರಸ್ಪರ ಸಹಕಾರ, ನಂಬಿಕೆಯ ಅಮೂಲ್ಯ ತತ್ವಗಳ ಬುನಾದಿಯ ಮೇಲೆ ಅಸ್ತಿತ್ವಕ್ಕೆ ಬಂದಿರುವವು. ಅಧಿಕಾರದ ಕುರ್ಚಿ ಮೇಲೆ ಕೂತವರು ಪ್ರತಿ ಕ್ಷಣವೂ ಆ ಸಂಸ್ಥೆಯ ಅಭಿವೃದ್ಧಿಯ ಬಗ್ಗೆ ಚಿಂತಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಸೌಹಾರ್ದ ಸಂಸ್ಥೆಯ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಜಮಖಂಡಿ ಶಾಸಕರಾದ ಜಗದೀಶ ಗುಡಗುಂಟಿ ಮಾತನಾಡಿ, ನಂಬಿಕೆ ವಿಶ್ವಾಸದ ಮೇಲೆ ಎಲ್ಲ ಸಹಕಾರ ಸಂಸ್ಥೆಗಳ ಭವಿಷ್ಯ ನಿಂತಿರುತ್ತದೆ. ನಂಬಿಕೆಯೇ ಸಹಕಾರ ಕ್ಷೇತ್ರದ ಬುನಾದಿಯಾಗಿದೆ ಎಂದರು.

ಸಂಸ್ಥೆಯ ಪೂಜಾ ಕಾರ್ಯಕ್ರಮದಲ್ಲಿ ಬಿಲ್ ಕೆರೂರಿನ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು, ಕೆರೂರ ಚರಂತಿಮಠದ ಡಾ.ಶಿವಕುಮಾರ ಸ್ವಾಮಿಗಳು. ಮುರನಾಳ ಮಳೇರಾಜೇಂದ್ರಸ್ವಾಮಿ ಮಠದ ಜಗನ್ನಾಥ ಮಹಾಸ್ವಾಮಿಗಳು, ಕಮತಗಿ ಹಿರೇಮಠದ ಶಿವಕುಮಾರ ಸ್ವಾಮಿಗಳು, ಗುಳೆದಗುಡ್ಡದ ಡಾ.ಕಾಡಸಿದ್ದೇಶ್ವರ ಸ್ವಾಮಿಗಳು, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಮಾಜಿ ಸಚಿವ ಎಸ್.ಆರ್.ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ, ಮಹೇಶ ಅಥಣಿ, ರಾಜು ನಾಯ್ಕರ, ಪ್ರಭುಸ್ವಾಮಿ ಸರಗಣಾಚಾರಿ, ಸಂಗಯ್ಯ ಸರಗಣಾಚಾರಿ, ಸಂಸ್ಥೆಯ ಉಪಾಧ್ಯಕ್ಷ ನೇಮಣ್ಣ ಜಮಖಂಡಿ, ನಿರ್ದೇಶಕರಾದ ರಾಜೇಂದ್ರಕುಮಾರ ಗುಡಗುಂಟಿ, ವಿದ್ಯಾವತಿ ಮಳಲಿಮಠ, ಪಾರ್ವತಿ ಗುಡಗುಂಟಿ, ನಾಗಪ್ಪ ಸನದಿ, ದೇವಲ ದೇಸಾಯಿ, ಚನ್ನಪ್ಪ ಮಾಳವಾಡ, ಡಾ.ಮಲ್ಲಿಕಾರ್ಜುನ ಕೊಡ್ಲಿವಾಡಮಠ, ಹನಮಂತ ದಾಸರ, ಮಲ್ಲಯ್ಯ ಕೋಟಿ, ಮಹಾಂತೇಶ ಹಿಟ್ಟಿನಮಠ ಭಾಗವಹಿಸಿದ್ದರು.

# ರೈತರಿಗೆ, ಕೃಷಿ ಕಾರ್ಮಿಕರಿಗೆ ವಿಮಾ ನೊಂದಣಿ ಶುಲ್ಕ ಸಂಪೂರ್ಣ



ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ..ಯಶಸ್ವಿನಿ ಆರೋಗ್ಯ ವಿಮಾ ಯೋಜನೆ ರೈತರಿಗೆ, ಕೃಷಿ ಕಾರ್ಮಿಕರಿಗೆ ವಿಮಾ ನೊಂದಣಿ ಶುಲ್ಕ ಸಂಪೂರ್ಣ

ಕರ್ನಾಟಕ ಗ್ರಾಮೀಣ ಪ್ರದೇಶಗಳಲ್ಲಿ ಹಣಕಾಸಿನ ಕೊರತೆ ಮತ್ತು ಔಪಚಾರಿಕ ಆರೋಗ್ಯ ಸೌಲಭ್ಯಗಳ ಕೊರತೆಯಿಂದಾಗಿ ರೈತರು ಹಾಗೂ ಬಡ ಕೃಷಿ ಕಾರ್ಮಿಕರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಪಡೆಯುವುದು ಬಹುದೊಡ್ಡ ಸವಾಲಾಗಿದೆ. ಈ ಅಂತರವನ್ನು ಕಡಿಮೆ ಮಾಡಲು ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲು ಕರ್ನಾಟಕ ಸರ್ಕಾರವು ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯನ್ನು ಪ್ರಾರಂಭಿಸಿದೆ. ರೈತ ಸಮುದಾಯ ಆಧಾರಿತ ವೈದ್ಯಕೀಯ ವಿಮಾ ಯೋಜನೆ ಇದಾಗಿದ್ದು, ಅನೌಪಚಾರಿಕ ವಲಯದ ಮಧ್ಯಮ ಮತ್ತು ಕೆಳಮಧ್ಯಮ ಆದಾಯದ ಬಡ ಕೃಷಿ ಕಾರ್ಮಿಕರನ್ನು ಆರೋಗ್ಯವಂತರಾಗಿ ಮಾಡುವಲ್ಲಿ ರೈತ ಕುಟುಂಬಗಳಿಗೆ ಬೆನ್ನೆಲುಬಾಗಿದೆ. ಅವರ ಹಣಕಾಸಿನ ಹೊರೆಯಾಗದೆ ಅಗತ್ಯ ಆರೋಗ್ಯ ಸೇವೆಯನ್ನು ಪಡೆಯುವದಾಗಿದೆ.

ಕರ್ನಾಟಕ ರಾಜ್ಯದ ರೈತರಿಗೆ ಸಹಾಯವಾಗಿರುವ ಯಶಸ್ವಿನಿ ಯೋಜನೆಗೆ 69 ಹೊಸ ಚಿಕಿತ್ಸೆ ಸೇರ್ಪಡೆ ಮಾಡಿರುವುದು ಸ್ವಾಗತಾರ್ಹ ಇದು ರೈತರಿಗೆ ಉಪಯುಕ್ತವಾಗಲಿದೆ. ಅದರಲ್ಲಿ ಪ್ರಮುಖವಾಗಿ ಸೇರ್ಪಡೆಗೊಂಡ ಚಿಕಿತ್ಸೆಗಳಾದ ಕ್ಯಾನ್ಸರ್, ನರ-ರೋಗ, ಹೃದಯರೋಗ, ಕಣ್ಣಿನ ನರ ಚಿಕಿತ್ಸೆ, ಮಕ್ಕಳಿಗೆ ಕ್ಯಾನ್ಸರ್, ರೇಡಿಯೊಲಾಜಿ, ಸಿ.ಟಿ.ವಿ.ಎಸ್ ಮುಂತಾದ ಹೊಸ ಚಿಕಿತ್ಸೆಗಳನ್ನು ಸೇರ್ಪಡೆ ಮಾಡಿದ್ದು ರೈತಾಪಿ ಒಲವಿಗೆ ಹಿಡಿದ ಕೈಗನ್ನಡಿಯಾಗಿದೆ. ನೋಂದಣಿ ಮಾಡುವ ಸಾಮಾನ್ಯ ರೈತರಿಗೆ 1,000 ರೂ. ಯಶಸ್ವಿನಿ ಆರೋಗ್ಯ ನೋಂದಣಿ ವಿಮಾ ಶುಲ್ಕ ಮಾಡುತ್ತಿರುವುದು ಬಲ್ಲ ಮೂಲಗಳಿಂದ ತಿಳಿದಿದ್ದು, ಈ ವಿಷಯ ರೈತಾಪಿ ವರ್ಗಕ್ಕೆ ಹೊರೆಯಾಗುತ್ತದೆ. ಆದ್ದರಿಂದ ರೈತರಿಗೆ ಕೃಷಿ ಕಾರ್ಮಿಕರಿಗೆ ಸಂಪೂರ್ಣವಾಗಿ ಯಾವುದೇ ಶುಲ್ಕವಿಲ್ಲದೆ ಸಂಪೂರ್ಣ ಉಚಿತ ನೋಂದಣಿ ಮಾಡಿಕೊಳ್ಳಲು ಸಂಬಂಧಪಟ್ಟ ಇಲಾಖೆಗೆ ಆದೇಶ ಹೊರಡಿಸಬೇಕೆಂದು ಈ ಮೂಲಕ ತಮ್ಮಲ್ಲಿ ಸಮಸ್ತ ರೈತ ಬಾಂಧವರ ಪರವಾಗಿ ಕಳಕಳಿಯಿಂದ ವಿನಂತಿಸಿಕೊಳ್ಳುತ್ತೇನೆ. ಗಿರೀಶಗೌಡ ಇನಾಮದಾರ ದುಮ್ಮದ್ರಿ) ಅಧ್ಯಕ್ಷರು ಅವರು ತಿಳಿಸಿದರು.

# ಕೊಪ್ಪಳ ನಗರ ಸಭೆ ಬಜೆಟ್ ನಲ್ಲಿ ಮುಖ್ಯ ಬೇಡಿಕೆಗಳ ಈಡೇರಿಕೆಗೆ ಜನಾಗ್ರಹ ಮನವಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರ ಸಭೆ ಬಜೆಟ್ ನಲ್ಲಿ ಮುಖ್ಯ ಬೇಡಿಕೆಗಳ ಈಡೇರಿ-ಕೆಗೆ ಜನಪರ ಸಂಘಟನೆಗಳ ಒಕ್ಕೂಟದಿಂದ ನಗರ ಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಅವರಿಗೆ ಮಂಗಳವಾರ ಬಜೆಟ್ ಮಂಡನೆ ಪೂರ್ವ ಜನಾಗ್ರಹ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ ಕೊಪ್ಪಳ ನಗರಕ್ಕೆ ವರ್ತುಲ ರಸ್ತೆ ನಿರ್ಮಾಣ ವಿಳಂಬವಾಗುತ್ತಿದ್ದು. ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಒಂದರ್ಧ ಭಾಗದಲ್ಲಿ ಬರುವುದರಿಂದ ಉಳಿದ ಅರ್ಧ ಭಾಗ ಮಾತ್ರ ಅಂದರೆ ದದೆಗಲ್ ಬಳಿಯಿಂದ ಭಾಗ್ಯನಗರದ ಹೊರ ವಲಯದಿಂದ ಕಿನ್ನಾಳ, ಕುಷ್ಟಗಿ ರಸ್ತೆ ಒಳಗೊಂಡು ಕಿಡದಾಳ ಬಳಿಯಿಂದ ಚತುಷ್ಪಥ ರಾಷ್ಟ್ರೀಯ ಹೆದ್ದಾರಿ ವರೆಗೆ ಹೊಸ ಅರ್ಧ ವರ್ತುಲ ರಸ್ತೆ ನಿರ್ಮಿಸಬೇಕು.

ಈಗಾಗಲೇ ಬೇಸಿಗೆ ಮಳೆ ಪ್ರಾರಂಭವಾಗಿದ್ದು, ರಾಜ್ ಕಾಲುವೆಯು ಬಿ.ಎಸ್.ಗುಡಿ ಅಂಗಡಿಯಿಂದ ಡಾ: ಟಿ.ಹೆಚ್.ಮುಲ್ಲಾ ಆಸ್ಪತ್ರೆ ವರೆಗೂ ಅಲ್ಲಲ್ಲಿ ಗಿಡಗಳು ಬೆಳೆದಿದೆ,ನಗರ ಪೊಲೀಸ್ ಠಾಣೆ ಎದುರಿನ ಟಿಪ್ಪು ಸುಲ್ತಾನ್ ವೃತ್ತದ ಬಳಿಯ ಸಾರ್ವಜನಿಕ ಶೌಚಾಲಯದ ಹತ್ತಿರ ಅಧಿಕಾರಿಗಳಿಗೆ, ಚುನಾಯಿತ ಪ್ರತಿನಿಧಿಗಳ ಕಣ್ಣಿಗೆ ರಾಚುವಂತೆ ವಿಪರೀತ ಗಿಡಗಳು ಹುಲುಸಾಗಿ ಬೆಳೆದು ನಿಂತಿವೆ, ಠಾಣೆ ಆವರಣ ಗೋಡೆ ಹತ್ತಿಕೊಂಡು ರಾಷ್ಟ್ರೀಯ ಹೆದ್ದಾರಿ ತನಕ ವಿವಿಧ ಗಿಡಗಳು ಹಣ್ಣು ಬಿಟ್ಟಷ್ಟು ಬೆಳೆದರೂ ನೋಡಿಯೂ ನೋಡದಂತೆ ಅಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು ಸಂಪೂರ್ಣವಾಗಿ ನಿರ್ಲಕ್ಷ್ಯ ಧೋರಣೆ ಅನುಸರಿಸುತ್ತಿದ್ದಾರೆ, ಒಂದೂವರೆ ತಾಸು ಮಳೆ ಬಂದರೆ ರಾಜ್ ಕಾಲುವೆ ತುಂಬಿ ರಸ್ತೆ, ಪಕ್ಕದ ಬಡಾವಣೆಗಳ ಮನೆಗಳಿಗೆ ಹೊಲಸು ನೀರು ನುಗುತ್ತದೆ,ತಕ್ಷಣ ಚರಂಡಿಯಲ್ಲಿರುವ ಎಲ್ಲಾ ಗಿಡಗಳನ್ನು ತೆಗೆಸಿ ಮಳೆ ನೀರು ಸರಾಗವಾಗಿ ಹರಿಯಲು ವ್ಯವಸ್ಥೆ ಮಾಡಿ, ರಾಜ್ ಕಾಲುವೆ ತುಂಡು ತುಂಡು ಕಳಪೆ ಕಾಮಗಾರಿ ಮಾಡುವುದನ್ನು ನಿಲ್ಲಿಸಿ, ಇಡೀ ರಾಜ್ ಕಾಲುವೆ ಆಧುನಿಕ ಮಾದರಿಯಲ್ಲಿ ನೀರು ಹರಿಯುವಂತೆ ವೈಜ್ಞಾನಿಕವಾಗಿ ನವೀಕರಣ ಕಾಮಗಾರಿ ಕೈಗೊಳ್ಳಬೇಕು.

ನಗರದಲ್ಲಿ ಹದಗೆಟ್ಟಿರುವ ಬಹುತೇಕ ರಸ್ತೆಗಳಿಗೆ ಡಾಂಬರೀಕರಣ ಮಾಡಲು ಒತ್ತಾಯಿಸಿ ಈಗಾಗಲೇ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ,ತೀವ್ರದಲ್ಲಿ ನಗರದಲ್ಲಿ ಹದಗೆಟ್ಟಿರುವ ರಸ್ತೆಗಳ ಸಮೀಕ್ಷೆ ನಡೆಸಿ ರಸ್ತೆಗಳಿಗೆ ಡಾಂಬರೀಕರಣ ಕಾಮಗಾರಿ ನಡೆಸಿ,ಅವೈಜ್ಞಾನಿಕ ವೇಗ ನಿಯಂತ್ರಕ (ಸ್ಪೀಡ್ ಬ್ರೇಕರ್) ಗಳನ್ನು ತೆಗೆಸಿ ಉಚ್ಚ ನ್ಯಾಯಾಲಯದ ಆಶಯದಂತೆ ಕೇವಲ ಆರು ಇಂಚಿಗೂ ಕಡಿಮೆ ಎತ್ತರದ ವೇಗ ನಿಯಂತ್ರಕಗಳನ್ನು ನಿರ್ಮಿಸಬೇಕು.

ಪ್ರಾಥಮಿಕ ಶಿಕ್ಷಣ.ಪ್ರೌಢ ಶಿಕ್ಷಣ. ಉನ್ನತ ಶಿಕ್ಷಣ: ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳನ್ನು ಒಳಗೊಂಡ ವಿವಿಧ ವಿಷಯಗಳಲ್ಲಿ ಉನ್ನತ ಮಟ್ಟದ ಜ್ಞಾನ ಮತ್ತು ಕೌಶಲ್ಯಗಳನ್ನು ನೀಡುವ ಶಿಕ್ಷಣ,ವೃತ್ತಿಪರ ಶಿಕ್ಷಣ: ನಿರ್ದಿಷ್ಟ ವೃತ್ತಿಗಳಿಗೆ ಅಗತ್ಯವಾದ ಕೌಶಲ್ಯಗಳನ್ನು,ಬಹು ಬೇಡಿ-ಕೆಯ ತಂತ್ರಜ್ಞಾನದ ಶಿಕ್ಷಣ.ಆನ್‌ಲೈನ್ ಕಲಿಕೆ, ಡಿಜಿಟಲ್ ಸಂಪನ್ಮೂಲಗಳು ಮತ್ತು ಕೃತಕ ಬುದ್ಧಿಮತ್ತೆಯಂತಹ ಹೊಸ ವಿಧಾನಗಳ ಶಿಕ್ಷಣವನ್ನು ಒಂದೇ ಕಡೆ ಎಲ್ಲ ರೀತಿಯ ಶಿಕ್ಷಣ ಸಿಗುವಂತೆ ಯೋಜನೆ ರೂಪಿಸಿ ಶೈಕ್ಷಣಿಕ ವಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು.

ಪ್ಲಾಸ್ಟಿಕ್ ಮುಕ್ತ ನಗರ ಮಾಡಲು ಅಗತ್ಯ ಕ್ರಮ ವಹಿಸಲು ಅನೇಕ ಬಾರಿ ಮನವಿಗಳನ್ನು ಕೊಟ್ಟರೂ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದ್ದು, ಮೊದಲು ನಿಮ್ಮ ನಗರಸಭೆಯ ಸಭೆಗಳಲ್ಲಿ ಪ್ಲಾಸ್ಟಿಕ್, ರಟ್ಟಿನ ಚಹಾ ಕಪ್ ಗಳು, ಗ್ಲಾಸ್ ಗಳನ್ನು ಬಳಸುವುದನ್ನು ನಿಷೇಧಿಸಬೇಕು,ನಗರದ ಮಾರುಕಟ್ಟೆಗಳಲ್ಲಿ ನಿರ್ಭಯವಾಗಿ ಎಲ್ಲೆಂದರಲ್ಲಿ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳನ್ನು ಮಾರಾಟ ಮಾಡಲು ಸಂಪೂರ್ಣ ಅವಕಾಶ ಕಲ್ಪಿಸಿದ್ದಾರೆ ಅಥವಾ ಭ್ರಷ್ಟಾಚಾರಕ್ಕೆ ಅನುಕೂಲ ಮಾಡಿಕೊಂಡಿದ್ದಾರೆಯೇ ? ತಿಳಿಯದು,ತಕ್ಷಣ ನಗರದಲ್ಲಿ ನಿಷೇಧಿತ ಪ್ಲಾಸ್ಟಿಕ್ ಉತ್ಪನ್ನಗಳನ್ನು ಮಾರಾಟದ ಏಜೆನ್ಸಿಗಳ ಮತ್ತು ಅಂಗಡಿಗಳ ಮೇಲೆ ದಾಳಿ ನಡೆಸಿ ಕ್ರಮ ಜರುಗಿಸಬೇಕು.

ನಗರದ ರಾಷ್ಟ್ರೀಯ ಹೆದ್ದಾರಿಯಲ್ಲಿ ಜಿಲ್ಲಾ ಕ್ರೀಡಾಂಗಣದಿಂದ ಜಿಲ್ಲಾ ಆಡಳಿತ ಭವನದವರೆಗೂ ಎರಡೂ ಬದಿಗಳಲ್ಲಿ ಎಲ್ಲಿಯೂ ಸಾರ್ವಜನಿಕ ಮೂತ್ರಲಯ ಮತ್ತು ಶೌಚಾಲಯಗಳಿಲ್ಲ, ತಕ್ಷಣಕ್ಕೆ ಇಂದಿರಾ ಕ್ಯಾಂಟೀನ್ ಮುಂಭಾಗದಲ್ಲಿ ಲಭ್ಯ ಇರುವ ಯೋಗ್ಯ ಜಾಗೆಯಲ್ಲಿ ಸಾರ್ವಜನಿಕ ಮೂತ್ರಲಯ ಮತ್ತು ಶೌಚಾಲಯ ನಿರ್ಮಿಸಬೇಕು. ಜಿಲ್ಲಾ ಕೇಂದ್ರ ಕೊಪ್ಪಳ ನಗರದ ಪ್ರಮುಖ ರಸ್ತೆಗಳಲ್ಲೂ ಸಾರ್ವಜನಿಕ ಮೂತ್ರಾಲಯ ಮತ್ತು ಶೌಚಾಲಯಗಳನ್ನು ನಿರ್ಮಿಸಲು ಕ್ರಮಕೈಗೊಳ್ಳಬೇಕು.

ನಗರದ ಪ್ರಮುಖ ರಸ್ತೆಗಳಲ್ಲಿ ಅಂಗಡಿಗಳ ಮುಂದೆ ವಾಹನಗಳ ನಿಲುಗಡೆಗೆ ವ್ಯವಸ್ಥೆ ಇಲ್ಲದೆ ಜನರು ಪರದಾಡುತ್ತಿದ್ದಾರೆ, ನಗರ ಸಭೆ ಸೇರಿದಂತೆ ಅನೇಕ ಸರ್ಕಾರಿ ಕಛೇರಿಗಳ ಮುಂಭಾಗದಲ್ಲಿ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡಿಲ್ಲ, ಎಲ್ಲಾ ಅಂಗಡಿಗಳ ಕಛೇರಿಗಳ ಮುಂದೆ ವಾಹನಗಳ ನಿಲುಗಡೆಗೆ ವ್ಯವಸ್ಥಿತ ಅವಕಾಶ ಮಾಡಿಕೊಡಬೇಕು.

ಜಿಲ್ಲಾ ಕೇಂದ್ರ ಕೊಪ್ಪಳ ನಗರಕ್ಕೆ ನಿತ್ಯ ಇಪ್ಪತ್ತು ನಾಲ್ಕು ತಾಸೂ ಕುಡಿಯುವ ನೀರು ಪೂರೈಕೆ ಯೋಜನೆ ಕುಂಟುತ್ತ ಸಾಗುತ್ತಿದ್ದು, ಕಾಮಗಾರಿ ತ್ವರಿತವಾಗಿ ನಡೆಯಲು ಕ್ರಮ ಕೈಗೊಳ್ಳಬೇಕು,

ಕೂಗು ಅಳತೆಯಲ್ಲಿರುವ ಭಾಗ್ಯನಗರವನ್ನು ಕೊಪ್ಪಳ ನಗರಸಭೆ ವ್ಯಾಪ್ತಿಗೆ ಸೇರಿಸಬೇಕು,ಸರ್ಕಾರದ ಆದೇಶದಂತೆ ಕೊಪ್ಪಳ ನಗರಸಭೆ ವ್ಯಾಪ್ತಿಯನ್ನು ಸುತ್ತಲಿನ ಹಳ್ಳಿಗಳ ಒಳಗೊಂಡು ಗುರುತಿಸಿ ಫಲಕಗಳನ್ನು ಅಳವಡಿಸಬೇಕು.

ನಗರದ ಎಲ್ಲಾ ರಸ್ತೆಗಳಿಗೂ ಎರಡೂ ಬದಿಗಳಲ್ಲಿ ನಗರದ ಹಸಿರೀಕರಣಕ್ಕೆ ಹಾಕಿದ ಗಿಡಗಳು ಬೆಳೆದು ವಿದ್ಯುತ್ ಕಂಬಗಳ ತಂತಿಗಳಿಗೆ ತಾಗುತ್ತಿದ್ದರಿಂದ ಕಡಿಯಲಾಗುತ್ತಿದೆ.ನಗರ ಸಭೆಯಿಂದ ಎಲ್ಲ ರಸ್ತೆಗಳ ಎರಡೂ ಬದಿಗಳ ಭೂಮಿಯಲ್ಲಿ ಭೂಗತ (ಅಂಡರ್ ಗ್ರೌಂಡ್) ವಿದ್ಯುತ್ ತಂತಿಗಳನ್ನು ಅಳವಡಿಸಲು ಯೋಜನೆ ರೂಪಿಸಿ ಜಾರಿಗೆ ತರಲು ಜನಾಗ್ರಹ ಮೂಲಕ ಒತ್ತಾಯಿಸುತ್ತೇವೆ ಎಂದು ಜನಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಎಸ್.ಎ.ಗಫಾರ್, ಪ್ರಗತಿಪರ ಸಂಘಟನೆಗಳ ಒಕ್ಕೂಟದ ಸಂಚಾಲಕ ಬಸವರಾಜ್ ಶೀಲವಂತರ್, ಯುವ ವಕೀಲ ಮಹಾಂತೇಶ ಜಿ, ಚಾಕ್ರಿ, ರೈಲ್ವೆ ಜನಪರ ಹೋರಾಟ ಸಮಿತಿಯ ಕಾರ್ಯದರ್ಶಿ ಮಖಬೂಲ್ ರಾಯಚೂರು, ಮುತ್ತು ಹಡಪದ್ ಮುಂತಾದವರು ಉಪಸ್ಥಿತರಿದ್ದರು.

# ಸಾಧಕ ವಿದ್ಯಾರ್ಥಿಗಳ ಕರಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಔರಾದ ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸದಾ ಗೌರವ ದೊರೆಯುತ್ತದೆ ಎಂದು ಭಾಲ್ಕಿ ಹಿರೇಮಠದ ಪೂಜಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದೇವರು ಹೇಳಿದರು.

ಸಂತಪೂರ ಸಿದ್ಧರಾಮೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಕಾಲೇಜಿನ ದ್ವಿತೀಯ ಪಿಯುಸಿ ಸಾಧಕ ವಿದ್ಯಾರ್ಥಿಗಳ ಕರಪತ್ರ ಬಿಡುಗಡೆ ಮಾಡಿ ಪೂಜ್ಯಶ್ರೀಗಳು ಆಶೀರ್ವಚನ ನೀಡಿದರು.

ಗ್ರಾಮೀಣ ಭಾಗದಲ್ಲೇ ಪ್ರತಿಭಾವಂತ ವಿದ್ಯಾರ್ಥಿಗಳು ಹೊರಹೊಮ್ಮುತ್ತಾರೆ ಅಂತಹ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಹಾಗೂ ಸಹಾಯ ಬಹಳ ಅವಶ್ಯಕವಾಗಿದೆ. ಗ್ರಾಮೀಣ ವಿಭಾಗದಲ್ಲಿ ಗುಣಮಟ್ಟ ಶಿಕ್ಷಣ ನೀಡುವುದಕ್ಕಾಗಿ ನಾವು ಈ ಭಾಗದಲ್ಲಿ ಕಾಲೇಜನ್ನು ಪ್ರಾರಂಭಿಸಿದ್ದೇವೆ ಎಂದರು.

ಆಡಳಿತಾಧಿಕಾರಿಯಾದ ಮೋಹನ ರೆಡ್ಡಿ, ಸ್ಥಾನಿ ಕಮಿಟಿ ಅಧ್ಯಕ್ಷರಾದ ಸಂಜುಕುಮಾರ ಜುಮ್ಮಾ, ಪ್ರಾಂಶುಪಾಲೆ ಗುರುಪ್ರೀತ್ ಕೌರ್, ಸಂಯೋಜ-ಕರಾದ ಬಾಲಾಜಿ ವಲ್ಲೂರೆ, ಮುಖ್ಯ ಗುರುಗಳಾದ ಶಿವಕುಮಾರ ಹಿರೇಮಠ, ಲೆಕ್ಕಾಧಿಕಾರಿ ವಿಜಯಕುಮಾರ ಪಾಟೀಲ್ ಇದ್ದರು.

# ಕಾಂಗ್ರೆಸ್ಸಿನಿಂದಲೂ ಬಿಜೆಪಿಗೆ ತಕ್ಕ ಉತ್ತರ:ಸಚಿವ ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.29-ಬೆಳಗಾವಿಯಲ್ಲಿ ಕಾಂಗ್ರೆಸ್ ಪಕ್ಷದ ಸಾರ್ವಜನಿಕ ಸಭೆಯಲ್ಲಿ ಬಿಜೆಪಿ ಕಾರ್ಯಕರ್ತರು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಕಪ್ಪುಬಟ್ಟೆ ಪ್ರದರ್ಶನ ಮಾಡಿ ಗೊಂದಲದ ವಾತಾವರಣ ಸೃಷ್ಠಿಸಿದ್ದು ಖಂಡನೀಯ ಎಂದಿರುವ ಸಚಿವ ಶಿವರಾಜ ತಂಗಡಗಿ, ಬಿಜೆಪಿಯ ಈ ಕ್ರಮಕ್ಕೆ ಕಾಂಗ್ರೆಸ್ ಕಾರ್ಯಕರ್ತರು ತಕ್ಕ ಉತ್ತರ ನೀಡುವರು ಎಂದಿದ್ದಾರೆ.

ಮಂಗಳವಾರ ಕೂಡಲಸಂಗಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯವರು ಕಾಂಗ್ರೆಸ್ ಸಭೆಗೆ ತಮ್ಮ ಕಾರ್ಯಕರ್ತರನ್ನು ಕಳುಹಿಸಿ ಉದ್ಧಟತನ ತೋರಿದ್ದಾರೆ. ಇದಕ್ಕೆ ನಾವೂ ಸಹ ಅವರ ಸಭೆಗಳಿಗೆ ನಮ್ಮ ಕಾರ್ಯಕರ್ತರನ್ನು ಕಳುಹಿಸುತ್ತೇವೆ ಎಂದು ಹೇಳಿ, ಬಿಜೆಪಿಯವರಿಗೆ ಮಾನಮರ್ಯಾದೆಯೇ ಇಲ್ಲವೆಂದು ಕಿಡಿಕಾರಿದರು.

ಈ ರೀತಿ ಮಾಡುವುದರಿಂದ ಕಾನೂನು ಸುವ್ಯವಸ್ಥೆ ಹದಗೆಡುತ್ತದೆ ಎಂಬ ತಿಳುವಳಿಕೆ ಇವರಿಗಿಲ್ಲವಾ, ಧಿಕ್ಕಾರ ಕೂಗಿದರೆ ದೊಡ್ಡ ಅದು ದೊಡ್ಡ ಸಾಧನೆನಾ ಎಂದು ಪ್ರಶ್ನಿಸಿದ ತಂಗಡಗಿ, ಪೆಟ್ರೋಲ್, ಡೀಸೆಲ್ ದರ ಏನಾಗಿದೆ ಎಂದು ಬಿಜೆಪಿಯವರು ಮೊದಲು ಮಾತನಾಡಲಿ.

ಧೈರ್ಯವಿದ್ದರೆ ಮೊದಲು ತೈಲ ಬೆಲೆ ಕಡಿಮೆ ಮಾಡಿಸಲಿ ಎಂದು ಒತ್ತಾಯಿಸಿದರು.

ಕಾಶ್ಮೀರದಲ್ಲಿ ಅಮಾಯಕ ಜನರು ಬಲಿಯಾಗಿದ್ದರ ಹಿನ್ನೆಲೆಯಲ್ಲಿ ಸರ್ವಪಕ್ಷಗಳ ಸಭೆ ಕರೆದ ಪ್ರಧಾನಿ ಮೋದಿಯವರು ತಾವು ಬಿಹಾರ ಚುನಾವಣಾ ಪ್ರಚಾರಕ್ಕೆ ಹೋಗಿದ್ದಾರೆ. ಇವರಿಗೆ ದೇಶದ ಜನ ಮುಖ್ಯವೋ, ಚುನಾವಣೆ ಮುಖ್ಯವೋ ಎಂಬುದಕ್ಕೆ ಬಿಜೆಪಿಯವರು ಉತ್ತರ ನೀಡಲಿ ಎಂದ ಸಚಿವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಟೀಕಿಸುವ ಬದಲು ಮೊದಲು ತಮ್ಮ ಪ್ರಧಾನಿಯವರಿಗೆ ಬುದ್ದಿ ಹೇಳಲಿ ಎಂದರು.



ಬಾಗಲಕೋಟೆ :ತಾಲೂಕಿನ ಕಿರಸೂರ ಗ್ರಾಮದಲ್ಲಿ ಸೋಮವಾರ ಗೌರಿಶಂಕರ ರಥೋತ್ಸವ ಸಂಭ್ರಮದಿಂದ ಜರುಗಿತು.

# ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಣಿಕೆ: 59.55 ಕ್ವಿಂಟಾಲ್ ಅಕ್ಕಿ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.29:ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲೂಕಿನಲ್ಲಿ ಸರ್ಕಾರದ ವಿವಿಧ ಯೋಜನೆಯಡಿ ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಗೆ ಬಿಡುಗಡೆಯಾದ ಅಕ್ಕಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವ ಕುರಿತು ಬಂದ ದೂರಿನ ಮೇರೆಗೆ ವಾಹನ ಸಂಖ್ಯೆ ಕೆಎ-32 ಡಿ-1533 ರ ಮೇಲೆ ದಾಳಿ ಮಾಡಿ ಪರಿಶೀಲಿಸಿದಾಗ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವುದು ಕಂಡು ಬಂದ ಪ್ರಯುಕ್ತ ಸದರಿ ವಾಹನವನ್ನು ಮತ್ತು ವಾಹನದಲ್ಲಿರುವ ಅಂದಾಜು ರೂ. 2,02,470 ಮೌಲ್ಯದ 59.55 ಕ್ವಿಂಟಾಲ್ ಅಕ್ಕಿಯನ್ನು ಹಾಗೂ ಅಂದಾಜು 5,00,000 ರೂ.ಗಳ ವಾಹನವನ್ನು ಜಪ್ತಿ ಮಾಡಿಕೊಂಡು ಈ ಕೃತ್ಯಗಳಲ್ಲಿ ಭಾಗಿಯಾದ 03 ಜನ ಆರೋಪಿಗಳ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ-1955 ರಡಿ ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಕಲಬುರಗಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ. ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಪಡಿತರ ಚೀಟಿದಾರರಿಗೆ ಹಂಚಿಕೆಯಾಗಿರುವ ಅಕ್ಕಿಯನ್ನು ಅಕ್ರಮವಾಗಿ ಖರೀದಿ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ಅನಧಿಕೃತವಾಗಿ ಸಂಗ್ರಹಿಸಿ ಮಾರಾಟ ಮಾಡುವುದು ಗಂಭೀರವಾದ ಅಪರಾಧವಾಗಿದ್ದು, ಇಂತಹ ಅಪರಾಧಗಳಲ್ಲಿ ಭಾಗಿಯಾದವರ ವಿರುದ್ಧ ಅತ್ಯಂತ ಕಠಿಣ ಕ್ರಮಕೈಗೊಳ್ಳಲಾಗುತ್ತದೆ. ಆದ್ದ-ರಿಂದ ಜಿಲ್ಲೆಯ ಸಾರ್ವಜನಿಕರು ಸರ್ಕಾರದ ವಿವಿಧ ಯೋಜನೆಯಡಿ ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ವಿತರಿಸಲಾಗುತ್ತಿರುವ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವುದು, ಖರೀದಿ ಮಾಡುವುದು ಹಾಗೂ ಅಕ್ರಮ ದಾಸ್ತಾನು, ಸಾಗಾಣಿಕೆ ಮಾಡುವುದು ಕಂಡುಬಂದಲ್ಲಿ ಸಾರ್ವಜನಿಕರು ಕೂಡಲೇ ಆಹಾರ ಇಲಾಖೆಗೆ ಅಥವಾ ಪೊಲೀಸ್ ಇಲಾಖೆಗೆ ನಿರ್ಭೀತವಾಗಿ ಮಾಹಿತಿ ನೀಡಿದ್ದಲ್ಲಿ ಅಂತಹ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಮಾಹಿತಿ ನೀಡಿದವರ ವಿವರಗಳನ್ನು ಗೌಪ್ಯವಾಗಿ ಇಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಇಂದು,ನಾಳೆ ಒಣಮೆಣಸಿನಕಾಯಿ ವ್ಯಾಪಾರ ವಹಿವಾಟು ಇರುವುದಿಲ್ಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.29:ಇದೇ ಏಪ್ರಿಲ್ 30 ರಂದು ಬುಧವಾರ ಬಸವ ಜಯಂತಿ ಹಾಗೂ ಮೇ 1 ರಂದು ಗುರುವಾರ ಕಾರ್ಮಿಕರ ದಿನಾಚರಣೆ ಪ್ರಯುಕ್ತ ಸರ್ಕಾರಿ ರಜೆ ಇರುವುದರಿಂದ ಹಾಗೂ ಬ್ಯಾಡಗಿ ವರ್ತಕರ ಸಂಘದ ಮನವಿಯ ಮೇರೆಗೆ ಸದರಿ ದಿನಗಳಂದು ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಒಣಮೆಣಸಿನಕಾಯಿ ವ್ಯಾಪಾರ ವಹಿವಾಟು ಇರುವುದಿಲ್ಲ.


## ಅರ್ಜಿ ಅಹ್ವಾನ

ನೊ.ಸಂಖ್ಯೆ / 81.82 ದಿನಾಂಕ:29-04-2025

ಬಸವತೀರ್ಥ ವಿದ್ಯಾಪೀಠ ಹುಮನಾಬಾದ ಸಂಸ್ಥೆಯಡಿಯಲ್ಲಿ ನಡೆಸುತ್ತಿರುವ ಬಸವತೀರ್ಥ ವಿದ್ಯಾಪೀಠ ಆಂಗ್ಲ ಮಾಧ್ಯಮದ ಪ್ರಾಥಮಿ ಕ ಶಾಲೆ ಹುಡಗಿ ಗ್ರಾಮದಲ್ಲಿ ಖಾಲಿ ಹುದ್ದೆಗಳಿಗಾಗಿ ಅರ್ಜಿ ಅಹ್ವಾನಿಸಲಾಗಿದೆ.

**ಶಿಕ್ಷಕ/ಶಿಕ್ಷಕಿಯರು ಬೇಕಾಗಿದ್ದಾರೆ.**

| ಶಾಲೆಯ ಹಸರು | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ |
|---|---|---|
| ಬಸವತೀರ್ಥ ವಿದ್ಯಾಪೀಠ ಆಂಗ್ಲ ಪ್ರಾಥಮಿಕ ಶಾಲೆ ಹುಡಗಿ | 03 | ಡಿ.ಈಡ/ಬಿಇಡ್ (ಆಂಗ್ಲ ಮಾಧ್ಯಮ) |

ಅರ್ಜಿಗಳನ್ನು ಬಸವತೀರ್ಥ ವಿದ್ಯಾಪೀಠ ಪ್ರೌಢ ಶಾಲೆ ಹುಡಗಿಯಲ್ಲಿ ಬೆಳಿಗ್ಗೆ 8 ರಿಂದ 1.30 ರ ವರೆಗೆ ಸ್ವೀಕರಿಸಲಾಗುವುದು.
ಅರ್ಜಿಗಳನ್ನು ಅಂಚೆ ಮುಖಾಂತರವು ಸಲ್ಲಿಸಬಹುದು. ಸ್ಥಳೀಯರು ನೇರವಾಗಿ ಸಂದರ್ಶನಕ್ಕೆ ಆಗಮಿಸಬಹುದು.
ದಿನಾಂಕ:15.05.2025ರ ವರೆಗೆ ಗುರುವಾರ ಬೆಳಗ್ಗೆ 11.00 ಗಂಟೆಗೆ ಸದರ್ಶನ ನಡೆಯಲಿದೆ.
ವಿಳಾಸ: ಬಸವತೀರ್ಥ ವಿದ್ಯಾಪೀಠ ಪ್ರೌಢ ಶಾಲೆ ಹುಡಗಿ-585329 ತಾ.ಹುಮನಾಬಾದ ಜಿಲ್ಲೆ:ಬೀದರ.


ಸಹಿ- ಅಧ್ಯಕ್ಷರು
ಬಸವತೀರ್ಥ ವಿದ್ಯಾಪೀಠ
ಸ್ಥಳೀಯ ಸಮಿತಿ ಹುಡಗಿ
9343169429

ಸಹಿ/- ಕಾರ್ಯದರ್ಶಿಗಳು
ಬಸವತೀರ್ಥ ವಿದ್ಯಾಪೀಠ
ಸ್ಥಳೀಯ ಸಮಿತಿ ಹುಡಗಿ
7892593626


















Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.